ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೦೮

ಪಟ್ಟಿ – ೦೩

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತ ಐದನೇ ಅಧಿವೇಶನ

ಗುರುವಾರ, ದಿನಾಂಕ : ೦೬ನೇ ಮಾರ್ಚ್, ೨೦೨೫

---

## ಸಮೂಹ – IV

೧. ಮುಖ್ಯಮಂತ್ರಿಗಳು

೨. ಉಪ ಮುಖ್ಯಮಂತ್ರಿಗಳು

೩. ಗೃಹ ಸಚಿವರು

೪. ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು

೫. ಅಬಕಾರಿ ಸಚಿವರು

೬. ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು

---

## ಕರ್ನಾಟಕ ಲೋಕಸೇವಾ ಆಯೋಗದಿಂದ ನಡೆಸುವ ಪರೀಕ್ಷೆಗಳ ಅವಾಂತರದ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೬೯ (೨೪೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಲೋಕಸೇವಾ ಆಯೋಗದಿಂದ ನಡೆಸುತ್ತಿರುವ ಪರೀಕ್ಷೆಗಳಲ್ಲಿ ಲೋಪದೋಷ/ಗೊಂದಲಗಳು ಅವಾಂತರಗಳು ಸೃಷ್ಟಿಯಾಗಿ, ರಾಜ್ಯಾದ್ಯಂತ ಅಭ್ಯರ್ಥಿಗಳು ತೀವ್ರ ಅಕ್ರೋಶ ವ್ಯಕ್ತಪಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ಪರೀಕ್ಷೆಗಳಲ್ಲಿನ ಲೋಪದೋಷಗಳು ಮರುಕಳಿಸುತ್ತಿರಲು ಇರುವ ದೋಷಗಳಾದರೂ ಯಾವುವು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಗೆಜೆಟೆಡ್ ಪ್ರೋಬೆಷನರಿ ಹುದ್ದೆಗಳ ನೇಮಕಾತಿಯಲ್ಲೂ ಈ ರೀತಿಯ ಲೋಪದೋಷಗಳು ಕಂಡುಬರಲು ಕಾರಣಗಳೇನು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ಈ ರೀತಿಯ ಘಟನಾವಳಿಗಳನ್ನು ತಪ್ಪಿಸಿ ವಿದ್ಯಾರ್ಥಿಗಳಿಗೆ ನೆರವಾಗಲು ಸರ್ಕಾರ ತೆಗೆದುಕೊಂಡ ಅಗತ್ಯ ಕ್ರಮಗಳಾವುವು ?

## ದಾವಣಗೆರೆ ಜಿಲ್ಲೆಗೆ ಸಣ್ಣ ನೀರಾವರಿ ಇಲಾಖೆಯಿಂದ ಬಂದಿರುವ ಅನುದಾನ/ಕಾಮಗಾರಿಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೭೦ (೨೪೫) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಾವಣಗೆರೆ ಜಿಲ್ಲೆಯಲ್ಲಿ ಕಳೆದ ೨ ವರ್ಷಗಳಿಂದ ಸಣ್ಣ ನೀರಾವರಿ ಅಭಿವೃದ್ಧಿ ಪಡಿಸಲು ಬಿಡುಗಡೆಯಾದ ಅನುದಾನವೆಷ್ಟು ; ಸದರಿ ಅನುದಾನದಲ್ಲಿ ಕೈಗೊಂಡ ಕಾಮಗಾರಿಗಳಾವುವು ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಆ) ಈ ಜಿಲ್ಲೆಗೆ ಬಿಡುಗಡೆಯಾದ ಅನುದಾನದಲ್ಲಿ ಎಸ್.ಸಿ.ಪಿ / ಟಿ.ಎಸ್.ಪಿ ಕಾಮಗಾರಿಗಳಿಗೆ ಎಷ್ಟು ಅನುದಾನ ಹಂಚಿಕೆ ಮಾಡಲಾಗಿದೆ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ದಾವಣಗೆರೆ ಜಿಲ್ಲೆಯಲ್ಲಿ ಕೈಗೆತ್ತಿಕೊಂಡಿರುವ ಕಾಮಗಾರಿಗಳು ಪ್ರಸ್ತುತ ಯಾವ ಹಂತದಲ್ಲಿವೆ ; ಸದರಿ ಕಾಮಗಾರಿಗಳಿಗೆ ಖರ್ಚು ಮಾಡಲಾದ ಅನುದಾನವೆಷ್ಟು ? (ತಾಲ್ಲೂಕುವಾರು/ ಕಾಮಗಾರಿವಾರು ವಿವರ ನೀಡುವುದು)

## ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಮದ್ಯ ಮಾರಾಟ ಮಳಿಗೆ (ಎಂ.ಎಸ್.ಐ.ಎಲ್) ಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೭೧ (೨೪೬) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪ್ರಸ್ತುತ ಎಷ್ಟು ಎಂ.ಎಸ್.ಐ.ಎಲ್ ಮದ್ಯ ಮಾರಾಟ ಮಳಿಗೆಗಳು ಕಾರ್ಯ ನಿರ್ವಹಿಸುತ್ತಿವೆ ; ನೂತನವಾಗಿ ಎಂ.ಎಸ್.ಐ.ಎಲ್ ಮಳಿಗೆಗಳನ್ನು ಪ್ರಾರಂಭಿಸಲು ಇರುವ ನಿಯಮಗಳಾವುವು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ದಾವಣಗೆರೆ ಜಿಲ್ಲೆಯಲ್ಲಿರುವ ಎಂ.ಎಸ್.ಐ.ಎಲ್ ಮಳಿಗೆಗಳೆಷ್ಟು; (ತಾಲ್ಲೂಕುವಾರು ವಿವರ ಒದಗಿಸುವುದು)

(ಇ) ಕಳೆದ ಎರಡು ವರ್ಷಗಳಲ್ಲಿ ರಾಜ್ಯದ ಎಂ.ಎಸ್.ಐ.ಎಲ್ ಮದ್ಯ ಮಾರಾಟ ಮಳಿಗೆಗಳಿಂದ ಸರ್ಕಾರಕ್ಕೆ ಬಂದ ಆದಾಯವೆಷ್ಟು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ಪ್ರಸ್ತುತ ರಾಜ್ಯದ ಎಂ.ಎಸ್.ಐ.ಎಲ್ ಮದ್ಯ ಮಾರಾಟ ಮಳಿಗೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಅವರುಗಳಿಗೆ ನೀಡುತ್ತಿರುವ ವೇತನವೆಷ್ಟು ? (ವಿವರವಾಗಿ ಮಾಹಿತಿ ಒದಗಿಸುವುದು)

**ರಾಜ್ಯದಲ್ಲಿ ಹೆಚ್ಚುತ್ತಿರುವ ಮೈಕ್ರೋ ಫೈನಾನ್ಸ್ ಹಾವಳಿಯ ಕುರಿತು**

**ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೭೨ (೨೪೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಮೈಕ್ರೋ ಫೈನಾನ್ಸ್ ಕಂಪನಿಗಳ ಹಾವಳಿಯಿಂದಾಗಿ ರೈತರು ಆತ್ಮಹತ್ಯೆ ಮಾಡಿಕೊಳ್ಳುತ್ತಿರುವ ಪ್ರಕರಣಗಳ ಸಂಖ್ಯೆ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈವರೆಗೂ ಮೈಕ್ರೋ ಫೈನಾನ್ಸ್ ಕಂಪನಿಗಳ ಕಿರುಕುಳದಿಂದಾಗಿ ಆತ್ಮಹತ್ಯೆ ಮಾಡಿಕೊಂಡವರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ಮೈಕ್ರೋ ಫೈನಾನ್ಸ್ ಹಾವಳಿಯನ್ನು ತಡೆಯಲು ಸರ್ಕಾರ ಕೈಗೊಂಡ ಕಠಿಣ ಕ್ರಮಗಳಾವುವು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ಮುಂದಿನ ದಿನಗಳಲ್ಲಿ ಇಂತಹ ಮೈಕ್ರೋ ಫೈನಾನ್ಸ್ ಕಂಪನಿಗಳನ್ನು ಹತೋಟಿಯಲ್ಲಿಡಲು ಸರ್ಕಾರ ತೆಗೆದುಕೊಂಡ ನಿರ್ಧಾರಗಳಾವುವು ; (ಪೂರ್ಣ ಮಾಹಿತಿ ಒದಗಿಸುವುದು)

(ಊ) ಮೈಕ್ರೋ ಫೈನಾನ್ಸ್ ಕಿರುಕುಳದಿಂದ ಪ್ರಾಣ ಕಳೆದುಕೊಂಡವರ ಕುಟುಂಬಸ್ಥರಿಗೆ ಸರ್ಕಾರ ಯಾವ-ಯಾವ ರೀತಿಯ ನೆರವು/ ಪರಿಹಾರಗಳನ್ನು ನೀಡಿದೆ ?

## ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿನ ಎಲ್ಲಾ ಮಲ್ಟಿಪ್ಲೆಕ್ಸ್ ಮತ್ತು ಸಿಂಗಲ್ ಸ್ಕ್ರೀನ್‌ಗಳಲ್ಲಿ ಏಕ ರೂಪದ ದರವನ್ನು ನಿಗದಿಪಡಿಸುವ ಬಗ್ಗೆ

**ಶ್ರೀ ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೭೩ (೨೨೦) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕಳೆದ ೨ ವರ್ಷಗಳಿಂದ ಇಲ್ಲಿಯವರೆಗೆ ಚಲನಚಿತ್ರ ಮಂದಿರ, ಮಲ್ಟಿಪ್ಲೆಕ್ಸ್ ಹಾಗೂ ಸಿಂಗಲ್ ಸ್ಕ್ರೀನ್‌ಗಳಿಂದ ಸಂಗ್ರಹಿಸಲಾದ ಎನ್‌ರೋಲ್‌ಮೆಂಟ್ ಮತ್ತು ರಿನೀವಲ್ ತೆರಿಗೆಯ ಮೊತ್ತವೆಷ್ಟು; (ವರ್ಷವಾರು ಸಂಪೂರ್ಣವಾದ ಮಾಹಿತಿ ನೀಡುವುದು)

(ಆ) ಬಿ.ಬಿ.ಎಂ.ಪಿ ವ್ಯಾಪ್ತಿಯ ಚಲನಚಿತ್ರ ಮಂದಿರ, ಮಲ್ಟಿಪ್ಲೆಕ್ಸ್ ಹಾಗೂ ಸಿಂಗಲ್ ಸ್ಕ್ರೀನ್‌ಗಳ ಸರ್ವೆ ನಡೆಸಲಾಗಿದೆಯೇ ; ಅವುಗಳಲ್ಲಿ ಸುರಕ್ಷಾ ಕ್ರಮಗಳ ಬಗ್ಗೆ ತನಿಖೆ ನಡೆಸಿದೆಯೇ ; ಇಲ್ಲವಾದಲ್ಲಿ, ಯಾವಾಗ ನಡೆಸಲಾಗುವುದು ; ತನಿಖೆ ನಡೆಸಿದಲ್ಲಿ ಚಲನಚಿತ್ರ ಮಂದಿರ, ಮಲ್ಟಿಪ್ಲೆಕ್ಸ್ ಹಾಗೂ ಸಿಂಗಲ್ ಸ್ಕ್ರೀನ್‌ಗಳಲ್ಲಿನ ಕುಂದುಕೊರತೆಗಳ ಕುರಿತು ಕೈಗೊಂಡಿರುವ ಕ್ರಮಗಳೇನು ;

(ಇ) ಬಿ.ಬಿ.ಎಂ.ಪಿ ವ್ಯಾಪ್ತಿಯ ಚಲನಚಿತ್ರ ಮಂದಿರಕ್ಕೂ ಮಲ್ಟಿಪ್ಲೆಕ್ಸ್ ಹಾಗೂ ಸಿಂಗಲ್ ಸ್ಕ್ರೀನ್‌ಗಳ ದರ ವ್ಯತ್ಯಾಸವಿರುವುದಕ್ಕೆ ಕಾರಣವೇನು ; ಒಂದೇ ದರವನ್ನು ನಿಗದಿಪಡಿಸದಿರುವುದು ಯಾವ

ಕಾರಣಕ್ಕಾಗಿ ಎಲ್ಲಾ ಚಲನಚಿತ್ರ ಮಂದಿರ, ಮಲ್ಟಿಪ್ಲೆಕ್ಸ್ ಹಾಗೂ ಸಿಂಗಲ್ ಸ್ಕ್ರೀನ್‌ಗಳಲ್ಲಿ ಏಕರೂಪ ದರವನ್ನು ನಿಗದಿಪಡಿಸುವಲ್ಲಿ ಸರ್ಕಾರ ಚಿಂತಿಸಿದೆಯೇ ?

## ಬೆಂಗಳೂರು ಕೇಂದ್ರ ಕಾರಾಗೃಹದ ಕುರಿತು

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೭೪ (೨೩೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಕೇಂದ್ರ ಕಾರಾಗೃಹದಲ್ಲಿ ದಂಡಿತ ಮತ್ತು ವಿಚಾರಣಾಧೀನ ಖೈದಿಗಳ ಸಂಖ್ಯೆ ಎಷ್ಟು ;

(ಆ) ಇಲ್ಲಿರುವ ಖೈದಿಗಳು ತಮ್ಮ ಸಂಬಂಧಿಕರು ಅಥವಾ ಸ್ನೇಹಿತರಿಂದ ಹೊರಗಿನ ಆಹಾರವನ್ನು ಪಡೆಯಲು ಅವಕಾಶವಿದೆಯೇ ;

(ಇ) ಬೆಂಗಳೂರು ಕೇಂದ್ರ ಕಾರಾಗೃಹದಲ್ಲಿ ಆಹಾರ ತಪಾಸಣೆ ಪ್ರಯೋಗಾಲಯದ ಸೌಲಭ್ಯವಿದೆಯೇ ; ಹೊರಗಿನ ಆಹಾರವನ್ನು ಪಡೆಯಲು ಅನುಮತಿ ಇದ್ದರೆ ಅದನ್ನು ಪ್ರಯೋಗಾಲಯದಲ್ಲಿ ಪರೀಕ್ಷಿಸಲಾಗುತ್ತಿದೆಯೇ ;

(ಈ) ದೀರ್ಘಾವಧಿ ಶಿಕ್ಷೆಯನ್ನು ಅನುಭವಿಸುತ್ತಿರುವ ದಂಡಿತ ಖೈದಿಗಳ ಸಂಖ್ಯೆ ಎಷ್ಟು ; ಅವರನ್ನು ರಾಜ್ಯದ ವಿಭಿನ್ನ ಸ್ಥಳಗಳಿಗೆ ಸ್ಥಳಾಂತರಿಸಲು ನಿಯಮಗಳ ಬಗ್ಗೆ ಮಾಹಿತಿ ನೀಡುವುದು ;

(ಉ) ಬೆಂಗಳೂರು ಕೇಂದ್ರ ಕಾರಾಗೃಹದಲ್ಲಿ ಖೈದಿಗಳಿಗೆ ಅನಧಿಕೃತವಾಗಿ ಮೊಬೈಲ್ ಬಳಸುವ ವ್ಯವಸ್ಥೆ ಗಾಂಜಾ, ಮದ್ಯ-ಮಾದಕ ವಸ್ತುಗಳು ಮುಕ್ತವಾಗಿ ಲಭ್ಯವಿರುವುದೇ ; ಇಲ್ಲದಿದ್ದಲ್ಲಿ ಅವು ಕಾರಾಗೃಹದ ಆವರಣಕ್ಕೆ ಪ್ರವೇಶಿಸದಿರಲು ಕೈಗೊಂಡಿರುವ ಕ್ರಮಗಳೇನು ?

# ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಲ್ಲಿ ಸಹಾಯಕ ವೃಂದದಿಂದ ಹಿರಿಯ ಸಹಾಯಕ ವೃಂದಕ್ಕೆ ಮುಂಬಡ್ತಿ ನೀಡುವಲ್ಲಿ ಅನ್ಯಾಯ ಆಗಿರುವ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೭೫ (೨೩೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯಲ್ಲಿ ಸಹಾಯಕ ವೃಂದದಿಂದ ಹಿರಿಯ ಸಹಾಯಕ ವೃಂದಕ್ಕೆ ಮುಂಬಡ್ತಿ ನೀಡುವಲ್ಲಿ ಅನ್ಯಾಯವಾಗಿರುವುದಾಗಿ ಯಾರು ಯಾರು ಮನವಿ ಸಲ್ಲಿಸಿರುತ್ತಾರೆ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ ; (ಸಂಪೂರ್ಣ ವಿವರ ಒದಗಿಸುವುದು)

(ಆ) ಈ ಬಗ್ಗೆ ಕಾನೂನು ಇಲಾಖೆಯು ಮುಂಬಡ್ತಿ ನೀಡುವಂತೆ ಸಲಹೆ ನೀಡಿದ್ದರೂ ಅದನ್ನು ಜಾರಿಗೊಳಿಸದೇ ಅಸಡ್ಡೆ ತೋರುತ್ತಿರುವ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ; (ವಿವರ ಒದಗಿಸುವುದು)

(ಇ) ಜ್ಯೇಷ್ಠತೆಯಲ್ಲಿ ಅರ್ಹತೆ ಹೊಂದಿರುವ ಸಹಾಯಕರುಗಳಿಗೆ ಅನ್ಯಾಯವಾಗಿರುವುದರ ಬಗ್ಗೆ ಕ್ರಮ ಕೈಗೊಂಡು ತಕ್ಷಣದಿಂದ ಜಾರಿಗೆ ಬರುವಂತೆ ಹಿರಿಯ ಸಹಾಯಕ ವೃಂದಕ್ಕೆ ಮುಂಬಡ್ತಿ ನೀಡಿ ಆದೇಶ ಹೊರಡಿಸಲು ಸರ್ಕಾರಕ್ಕೆ ಇರುವ ತೊಂದರೆಗಳೇನು ;

(ಈ) ಹಾಗಿದ್ದಲ್ಲಿ ಯಾವ ಕಾಲಮಿತಿಯೊಳಗೆ ಆದೇಶ ಹೊರಡಿಸಲಾಗುವುದು ? (ಸಂಪೂರ್ಣ ವಿವರ ಒದಗಿಸುವುದು)

## ಬಿ.ಬಿ.ಎಂ.ಪಿ ವಾರ್ಡ್ ಸಂಖ್ಯೆ:೧೦೦ರಲ್ಲಿನ ನೇತಾಜಿ ಸುಭಾಷ್‌ಚಂದ್ರ ಬೋಸ್ ಪಾರ್ಕ್‌ನಲ್ಲಿನ ಅವ್ಯವಸ್ಥೆ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೭೬ (೨೩೭) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಿ.ಬಿ.ಎಂ.ಪಿ ವಾರ್ಡ್ ಸಂಖ್ಯೆ:೧೦೦ರಲ್ಲಿ ಬರುವ ನೇತಾಜಿ ಸುಭಾಷ್‌ಚಂದ್ರ ಬೋಸ್ ಉದ್ಯಾನವನದಲ್ಲಿ ಪ್ರತಿ ದಿನವು ಹಿರಿಯ ನಾಗರೀಕರು ಸೇರಿದಂತೆ ಸಾವಿರಾರು ಮಂದಿ ವಾಯು ವಿಹಾರ ಮಾಡುತ್ತಿದ್ದು, ಈ ಉದ್ಯಾನವನದಲ್ಲಿ ಸ್ವಚ್ಛತೆ, ಕಾವಲುಗಾರರ ವ್ಯವಸ್ಥೆ, ವಿದ್ಯುತ್ ದೀಪಗಳ ಅವ್ಯವಸ್ಥೆ ಇವೇ ಮುಂತಾದ ಹತ್ತು ಹಲವು ಸಮಸ್ಯೆಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ಒದಗಿಸುವುದು)

(ಆ) ಬಿ.ಬಿ.ಎಂ.ಪಿ ಇತ್ತೀಚಿನ ಆದೇಶದಂತೆ ಉದ್ಯಾನವನಗಳು ಮಧ್ಯಾಹ್ನದ ವೇಳೆಯಲ್ಲಿಯೂ ಸಹ ಸಾರ್ವಜನಿಕರಿಗೆ ತೆರೆದಿಡಬೇಕು ಎಂಬ ನಿಯಮವಿದ್ದರೂ ಇಲ್ಲಿ ಹೆಚ್ಚಿನ ವೇಳೆಯಲ್ಲಿ ಉದ್ಯಾನವನಕ್ಕೆ ಬೀಗ ಹಾಕಿಡಲಾಗುತ್ತಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಈ ಉದ್ಯಾನವನದಲ್ಲಿ ಸಂಗೀತದ ಯಂತ್ರೋಪಕರಣಗಳು ಹಾಗೂ ವ್ಯಾಯಾಮ ಪರಿಕರಗಳು ಹಲವಾರು ವರ್ಷಗಳಿಂದ ಕೆಟ್ಟು ನಿಂತಿದ್ದು ಸಾರ್ವಜನಿಕರ ಹಿತದೃಷ್ಟಿಯಿಂದ ಇವುಗಳನ್ನು ದುರಸ್ತಿಗೊಳಿಸಲು ಕ್ರಮಕೈಗೊಳ್ಳಲಾಗುವುದೆ ?

## ಬೆಂಗಳೂರು ವ್ಯಾಪ್ತಿಯಲ್ಲಿನ ಅನಧಿಕೃತ ಆಸ್ತಿಯ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೭೭ (೨೩೮) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ವ್ಯಾಪ್ತಿಯಲ್ಲಿ ಕಳೆದ ನಾಲ್ಕು ವರ್ಷಗಳಲ್ಲಿ ಇದುವರೆಗೂ (೨೦೨೫ ಜನವರಿ ಅಂತ್ಯದವರೆಗೂ) ಎಷ್ಟು ಅನಧಿಕೃತ ಆಸ್ತಿ ಕುರಿತು ಕಾರ್ಯಾಚರಣೆ ನಡೆಸಲಾಗಿದೆ ; ಎಷ್ಟು ಎಕರೆ ಅನಧಿಕೃತ ಆಸ್ತಿಯನ್ನು ವಶಕ್ಕೆ ಪಡೆಯಲಾಗಿದೆ ; ಅವುಗಳ ಒಟ್ಟು ಮೌಲ್ಯ ಎಷ್ಟು ; (ವಲಯವಾರು ವಿವರ ನೀಡುವುದು)

(ಆ) ತೆರವು ಕಾರ್ಯಾಚರಣೆಗೆ ಗುರುತಿಸಿರುವ ಅನಧಿಕೃತ ಆಸ್ತಿಗಳ ಸಂಖ್ಯೆ ಎಷ್ಟು ;

(ಇ) ರಾಜಕೀಯ ವ್ಯಕ್ತಿಗಳು, ಗಣ್ಯರು ಅನಧಿಕೃತವಾಗಿ ಬಿ.ಡಿ.ಎ ಜಾಗಗಳಲ್ಲಿ ಅನಧಿಕೃತ ಕಟ್ಟಡ ಶೆಡ್ ಮಾಡಿಕೊಂಡಿದ್ದಾರೆ ಎಂಬ ಸಾಕಷ್ಟು ಆರೋಪಗಳಿವೆಯೇ ;

(ಈ) ಆರೋಪಗಳಿದ್ದಲ್ಲಿ ಅವರುಗಳ ಹೆಸರು ಜಾಗ ಕುರಿತು ವಿವರವಾದ ಮಾಹಿತಿ ನೀಡುವುದು ?

## ಅಗ್ನಿಶಾಮಕ ಇಲಾಖೆಯಿಂದ MOCK DRILL ಬಗ್ಗೆ

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) :-**

೧೭೮ (೨೯೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಹುಮಹಡಿ ಕಟ್ಟಡಗಳ ಸುರಕ್ಷತೆಗಾಗಿ ಅಗ್ನಿಶಾಮಕ ಇಲಾಖೆಯಿಂದ ಕೈಗೊಂಡ ಕ್ರಮಗಳೇನು ;

(ಆ) ಕಳೆದ ೨ ವರ್ಷಗಳಲ್ಲಿ ಅಗ್ನಿ ಸುರಕ್ಷತೆಯ ಬಗ್ಗೆ ಎಷ್ಟು MOCK DRILL ಮಾಡಲಾಗಿದೆ ; (ಜಿಲ್ಲಾವಾರು ವಿವರ ಒದಗಿಸುವುದು)

(ಇ) ಅಗ್ನಿಶಾಮಕ ಇಲಾಖೆಯಲ್ಲಿ ಮಂಜೂರಾದ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು ? (ಹುದ್ದೆವಾರು ವಿವರ ಒದಗಿಸುವುದು)

## ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ಕೈಗೊಂಡ ಅಭಿವೃದ್ಧಿ ಕಾರ್ಯಕ್ರಮಗಳ ಬಗ್ಗೆ

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) :-**

೧೭೯ (೨೯೬) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕಳೆದ ೨ ವರ್ಷಗಳಲ್ಲಿ ಕೈಗೊಂಡ ಅಭಿವೃದ್ಧಿ ಕಾರ್ಯಕ್ರಮಗಳು ಯಾವುವು; ಇದಕ್ಕೆ ಖರ್ಚು ಮಾಡಲಾಗಿರುವ ಮೊತ್ತವೆಷ್ಟು ; (ವಿವರ ನೀಡುವುದು)

(ಆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಗುತ್ತಿಗೆದಾರರಿಗೆ ಪಾವತಿಸಲು ಇರುವ ಬಾಕಿ ಮೊತ್ತವೆಷ್ಟು ? (ವಿವರ ಒದಗಿಸುವುದು)

## ವಾಲ್ಮೀಕಿ ನಿಗಮದ ಹಗರಣದ ಕುರಿತು

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) :-**

೧೮೦ (೨೯೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಾಲ್ಮೀಕಿ ನಿಗಮದ ಹಗರಣದಿಂದ ಸರ್ಕಾರಕ್ಕಾದ ನಷ್ಟವೆಷ್ಟು; ಸದರಿ ಅವ್ಯವಹಾರದ ಮೊತ್ತದಲ್ಲಿ ಎಷ್ಟು ಹಣವನ್ನು ಇಲ್ಲಿಯವರೆಗೆ ವಸೂಲಿ ಮಾಡಲಾಗಿದೆ ; (ವಿವರ ಒದಗಿಸುವುದು)

(ಆ) ಯಾವ ಯಾವ ಖಾತೆಗಳಿಂದ ಹಣವನ್ನು ವಸೂಲಿ ಮಾಡಲು ಬಾಕಿ ಇದೆ ಮತ್ತು ಸದರಿ ಬಾಕಿ ಹಣವನ್ನು ಎಷ್ಟು ದಿನಗಳಲ್ಲಿ ವಸೂಲಿ ಮಾಡಲಾಗುವುದು ; (ವಿವರ ಒದಗಿಸುವುದು)

(ಇ) ಅಕ್ರಮ ಎಸಗಿದ ಅಧಿಕಾರಿಗಳ ಮೇಲೆ ಇಲ್ಲಿಯವರೆಗೆ ಕೈಗೊಂಡ ಕ್ರಮಗಳೇನು ? (ವಿವರ ಒದಗಿಸುವುದು)

## ರಸ್ತೆ ಗುಂಡಿ ಮುಚ್ಚುವ ಮತ್ತು ದುರಸ್ತಿ ಪಡಿಸುವ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೧೮೧ (೨೬೫) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರಿನ ಹಲವು ರಸ್ತೆಗಳು ಗುಂಡಿಬಿದ್ದು, ವಾಹನ ಸವಾರರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ ಮೇಲ್ಭಾಗದ ಮತ್ತು ಮುಖ್ಯರಸ್ತೆಗಳಲ್ಲಿ ಮಾತ್ರ ರಸ್ತೆ ಸರಿಪಡಿಸುವುದು ಬಿಟ್ಟರೆ ಒಳಭಾಗದಲ್ಲಿ ರಸ್ತೆಗುಂಡಿ ಬಿದ್ದು ರಸ್ತೆಗಳು ಹಾಳಾಗಿ ಹಲವು ವರ್ಷಗಳ ನಂತರವೂ ಹಾಗೇ ಉಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ವಾರ್ಡ್‌ಗಳು, ಏರಿಯಾಗಳ ರಸ್ತೆಗಳ ಗುಣಮಟ್ಟ ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ಸರ್ಕಾರದ ಮಟ್ಟದಲ್ಲಿ ಉಸ್ತುವಾರಿಗಳು ಅಥವಾ ಅಧಿಕಾರಿಗಳನ್ನು ನೇಮಿಸಲಾಗಿದೆಯೇ ;

(ಈ) ಹಾಗಿದ್ದರೂ ಸಹ ರಸ್ತೆಗಳು ಸಂಪೂರ್ಣವಾಗಿ ದುರಸ್ತಿ ಕಾಣದೇ ಇರುವುದಕ್ಕೆ ಯಾರು ಹೊಣೆ ;

(ಉ) ಕೇವಲ ವಿ.ಐ.ಪಿ ಮತ್ತು ವಿ.ವಿ.ಐ.ಪಿಗಳು ಓಡಾಡುವ ರಸ್ತೆಗಳು ಮಾತ್ರ ಗುಣಮಟ್ಟದಿಂದ ಕೂಡಿದ್ದು, ಅವರಿಗೆ ಮಾತ್ರ ಸುಗಮ ಸಂಚಾರಕ್ಕೆ ವ್ಯವಸ್ಥೆ ಮಾಡಿಕೊಟ್ಟು ಜನಸಾಮಾನ್ಯರಿಗೆ ಅನ್ಯಾಯ ಮಾಡಿದಂತಾಗುವುದಿಲ್ಲವೇ ;

(ಊ) ಯಾವ ಕಾಲಮಿತಿಯಲ್ಲಿ ರಸ್ತೆಗಳನ್ನು ದುರಸ್ತಿಗೊಳಿಸಿ ಸಂಚಾರಕ್ಕೆ ಅನುಕೂಲ ಮಾಡಿಕೊಡಲಾಗುವುದು ?

## ತುಮಕೂರು ನಗರದಲ್ಲಿ ಮಾತ್ರೆಗಳನ್ನು ಮಾದಕ ವಸ್ತುಗಳನ್ನಾಗಿ ಮಾರಾಟ ಮಾಡುತ್ತಿರುವ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :-**

೧೮೨ (೩೧೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಮಕೂರು ನಗರದಲ್ಲಿ ಮಾತ್ರೆಗಳನ್ನು ಮಾದಕ ವಸ್ತುಗಳಾಗಿ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ;

(ಆ) ಮಾತ್ರೆಗಳನ್ನು ಮಾದಕ ವಸ್ತುಗಳನ್ನಾಗಿ ಮಾರಾಟ ಮಾಡುತ್ತಿರುವ ಔಷಧಿ ಅಂಗಡಿ (ಮೆಡಿಕಲ್ ಸ್ಟೋರ್) ಮಾಲೀಕರ ಮೇಲೆ ಸರ್ಕಾರ ಕೈಗೊಂಡ/ಕೈಗೊಳ್ಳುವ ಕ್ರಮವೇನು ;

(ಇ) ಕಳೆದು ಐದು ವರ್ಷಗಳಲ್ಲಿ ತುಮಕೂರು ಜಿಲ್ಲೆಯಲ್ಲಿ ಮಾದಕ ವಸ್ತುಗಳ ಮಾರಾಟದ ಮೇಲೆ ಎಷ್ಟು ಪ್ರಕರಣಗಳನ್ನು ದಾಖಲಿಸಲಾಗಿದೆ ;

(ಈ) ಎಷ್ಟು ಪ್ರಕರಣಗಳಲ್ಲಿ ತಪ್ಪಿತಸ್ಥರಿಗೆ ಶಿಕ್ಷೆಯಾಗಿರುತ್ತದೆ ; ಎಷ್ಟು ಪ್ರಕರಣಗಳಲ್ಲಿ ಎಷ್ಟು ಜನರನ್ನು ನಿರಪರಾಧಿಗಳೆಂದು ಪರಿಗಣಿಸಿ ಖುಲಾಸೆ ಮಾಡಲಾಗಿರುತ್ತದೆ ;

(ಉ) ಮಾದಕ ವಸ್ತುಗಳ ಮಾರಾಟ ತಡೆಯಲು ಹಾಗೂ ಯುವ ಜನತೆ ಮಾದಕ ವಸ್ತುಗಳ ಚಟಕ್ಕೆ ಬೀಳದಂತೆ ಅವರಲ್ಲಿ ಜಾಗೃತಿ ಮೂಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಬಿ.ಬಿ.ಎಂ.ಪಿ. ವ್ಯಾಪ್ತಿಯ ಕೆರೆಗಳ ಒತ್ತುವರಿಯ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ)**

೧೮೩ (೩೧೨) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಿ.ಬಿ.ಎಂ.ಪಿ. ವ್ಯಾಪ್ತಿಯಲ್ಲಿರುವ ಕೆರೆಗಳ ಸಂಖ್ಯೆ ಎಷ್ಟು ;

(ಆ) ಅವುಗಳಲ್ಲಿ ಎಷ್ಟು ಕೆರೆಗಳನ್ನು ಸಾರ್ವಜನಿಕರು ಅತಿಕ್ರಮಣ ಮಾಡಿದ್ದಾರೆ ; ಎಷ್ಟು ಕೆರೆಗಳನ್ನು ಸರ್ಕಾರಿ ಸಂಸ್ಥೆಗಳು ಒತ್ತುವರಿ ಮಾಡಿವೆ ;

(ಇ) ಸದರಿ ಒತ್ತುವರಿಯನ್ನು ತೆರವುಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಹಲವು ಕೆರೆಗಳಿಗೆ ನಗರದ ತ್ಯಾಜ್ಯವನ್ನು ಸುರಿಯುವುದು ಕೆರೆಗಳನ್ನು ಮಲೀನಗೊಳಿಸುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಇದನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಕೆರೆಗಳ ಒತ್ತುವರಿ ತಡೆಯಲು ಮತ್ತು ಅವುಗಳನ್ನು ಮಾಲಿನ್ಯದಿಂದ ಮುಕ್ತವಾಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಬೆಂಗಳೂರು ಮೆಟ್ರೋ ಅಸಹಜ ಪ್ರಯಾಣದರ ಏರಿಕೆಯ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :-**

೧೮೪ (೩೧೩) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಮೆಟ್ರೋದಲ್ಲಿ ಜನವರಿ ೨೦೨೫ನೇ ತಿಂಗಳಿನಲ್ಲಿ ಪ್ರತಿನಿತ್ಯ ಸಂಚರಿಸಿದ ಪ್ರಯಾಣಿಕರ ಸಂಖ್ಯೆ ಎಷ್ಟು ;

(ಆ) ಫೆಬ್ರವರಿ ತಿಂಗಳಲ್ಲಿ ದರ ಏರಿಕೆಯ ನಂತರ ಸಂಚರಿಸುತ್ತಿರುವ ಪ್ರಯಾಣಿಕರ ಸಂಖ್ಯೆ ಎಷ್ಟು;

(ಇ) ಯಾವ ಮಾನದಂಡದ ಆಧಾರದ ಮೇಲೆ ದರ ಏರಿಕೆ ಮಾಡಲಾಗಿದೆ; ಹಲವು ಹಂತಗಳಲ್ಲಿ ಶೇ.೭೦, ೮೦, ೧೦೦ರವರೆಗೆ ಏರಿಕೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಎಷ್ಟು ಹಂತಗಳಲ್ಲಿ ಪ್ರಯಾಣ ದರವನ್ನು ಶೇ.೬೦ಕ್ಕೂ ಹೆಚ್ಚು ಏರಿಕೆ ಮಾಡಲಾಗಿತ್ತು ಮತ್ತು ಸಾರ್ವಜನಿಕರ ಪ್ರತಿಭಟನೆಯ ನಂತರ ಎಷ್ಟು ಹಂತಗಳಲ್ಲಿ ಯಾವ ಪ್ರಮಾಣದ ಪ್ರಯಾಣ ದರ ಇಳಿಕೆ ಮಾಡಲಾಯಿತು ;

(ಈ) ಈ ರೀತಿಯಲ್ಲಿ ಅಸಹಜ ಪ್ರಯಾಣದರ ಏರಿಕೆ ಮಾಡಿದ್ದಲ್ಲಿ ಸಾರ್ವಜನಿಕರು ಖಾಸಗಿ ವಾಹನಗಳಲ್ಲಿ ಸಂಚರಿಸಲು ಪ್ರಾರಂಭಿಸದಲ್ಲಿ ನಗರದಲ್ಲಿ ಮತ್ತಷ್ಟು ಸಂಚಾರದಟ್ಟಣೆ ಉಂಟಾಗುವ ಮೂಲಕ ಸಾರ್ವಜನಿಕರಿಗೆ ತೊಂದರೆಯಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಮೆಟ್ರೋ ಪ್ರಯಾಣದರ ಇನ್ನಷ್ಟು ಇಳಿಕೆ ಮಾಡಲು ಸರ್ಕಾರ ಕೈಗೊಳ್ಳುವ ಕ್ರಮವೇನು ?

## ಬೆಂಗಳೂರಿನಲ್ಲಿ ಪೆರಿಫೆರಲ್ ರಿಂಗ್ ರಸ್ತೆ ನಿರ್ಮಾಣದ ಕುರಿತು

**ಶ್ರೀ ಹೆಚ್. ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೫ (೩೧೬) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದ ಹೊರ ವಲಯದಲ್ಲಿ ಉದ್ದೇಶಿತ PRR ರಸ್ತೆಯನ್ನು ನಿರ್ಮಾಣ ಮಾಡಲು ಎಷ್ಟು ಎಕರೆ ಜಮೀನು ಬೇಕಾಗುತ್ತದೆ ; ಎಷ್ಟು ಹಳ್ಳಿಗಳಲ್ಲಿ ರಸ್ತೆ ಹಾದುಹೋಗುತ್ತದೆ ; (ವಿವರ ನೀಡುವುದು)

(ಆ) ಭೂ ಸ್ವಾಧೀನ ಪ್ರಕ್ರಿಯೆ ಯಾವಾಗಿನಿಂದ ಪ್ರಾರಂಭವಾಗಿದೆ ; ಸಂತ್ರಸ್ಥರಿಗೆ ಪರಿಹಾರವನ್ನು ಯಾವ ಮಾನದಂಡಗಳ ಆಧಾರದ ಮೇಲೆ ನಿಗದಿಪಡಿಸಲಾಗಿದೆ ;

(ಇ) ಸಂತ್ರಸ್ಥರಿಗೆ ೧೯೬೪ಳ ಕಾಯ್ದೆಯಡಿ ಭೂ ಪರಿಹಾರ ನೀಡಲು ಉದ್ದೇಶಿಸಲಾಗಿದೆಯೇ ; ಸಂತ್ರಸ್ಥರಿಗೆ ಇದರಿಂದ ಆಗುವ ಸಾಧಕ–ಭಾದಕಗಳೇನು ;

(ಈ) ಕಳೆದ ಎರಡು ವರ್ಷಗಳಲ್ಲಿ ಈ ರಸ್ತೆ ಹಾದುಹೋಗುವ ಗ್ರಾಮಗಳ ಸ್ಥಿರಾಸ್ತಿ ಮಾರ್ಗಸೂಚಿ ದರಗಳ ವಿವರಗಳನ್ನು ಕಡಿಮೆ ಮಾಡಲಾಗಿದೆಯೇ ; ಕಡಿಮೆ ಮಾಡಿರುವುದಕ್ಕೆ ಕಾರಣಗಳೇನು ?

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಕೆರೆಗಳ ಕುರಿತು

**ಶ್ರೀ ಹೆಚ್. ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೬ (೩೧೭) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ವ್ಯಾಪ್ತಿಯಲ್ಲಿರುವ ಕೆರೆಗಳ ಸಂಖ್ಯೆ ಎಷ್ಟು; (ಬೆಂಗಳೂರು ನಗರ ಜಿಲ್ಲೆಯ ಕ್ಷೇತ್ರವಾರು ಮಾಹಿತಿ ನೀಡುವುದು)

(ಆ) ಈ ಕೆರೆಗಳನ್ನು ನಿರ್ವಹಣೆ ಮಾಡಲು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಪ್ರತಿ ವರ್ಷ ಬೇಕಾಗಿರುವ ಅನುದಾನವೆಷ್ಟು; (ವಿವರ ನೀಡುವುದು)

(ಇ) ಈ ಕೆರೆಗಳನ್ನು ನಿರ್ವಹಣೆ ಮಾಡಲು ಖಾಸಗಿ ಕಾರ್ಪೊರೇಟ್ ಕಂಪನಿಗಳಿಗೆ ವಹಿಸಲಾಗುತ್ತಿದೆಯೇ; ಹಾಗಿದ್ದಲ್ಲಿ, ಯಾವ ಯಾವ ಖಾಸಗಿ ಕಾರ್ಪೊರೇಟ್ ಕಂಪನಿಗಳಿಗೆ ಯಾವ ಯಾವ ಕೆರೆಗಳನ್ನು ವಹಿಸಲಾಗುತ್ತಿದೆ ; ಆ ಕಂಪನಿಗಳ ವಿಳಾಸ, ಮಾಲೀಕರ ಹೆಸರು ಸೇರಿದಂತೆ ಸಂಪೂರ್ಣ ಮಾಹಿತಿಯನ್ನು ಒದಗಿಸುವುದು ;

(ಈ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಕೆರೆಗಳ ಅಭಿವೃದ್ಧಿ ಮತ್ತು ನಿರ್ವಹಣೆ ಮಾಡಲು ಖಾಸಗಿ ಕಾರ್ಪೊರೇಟ್ ಕಂಪನಿಗಳ ಜೊತೆ ಯಾವ ರೀತಿ–ನೀತಿ, ನಿಯಮಗಳನ್ನು ರೂಪಿಸಿ ಒಪ್ಪಂದ ಮಾಡಿಕೊಳ್ಳಲಾಗಿದೆ ; (ವಿವರ ನೀಡುವುದು)

(ಉ) ಈ ಕೆರೆಗಳನ್ನು ಅಭಿವೃದ್ಧಿ ಮತ್ತು ನಿರ್ವಹಣೆಯ ಸಲುವಾಗಿ ಖಾಸಗಿ ಕಂಪನಿಗಳಿಗೆ ವಹಿಸಬಾರದೆಂದು ಈ ಹಿಂದೆ ರಾಜ್ಯ ಉಚ್ಚ ನ್ಯಾಯಾಲಯ ಆದೇಶ ನೀಡಿದೆಯೇ ; ನೀಡಿದ್ದಲ್ಲಿ ಸರ್ಕಾರ ಯಾವ ರೀತಿಯ ಕ್ರಮಗಳನ್ನು ಕೈಗೊಂಡಿದೆ ? (ನ್ಯಾಯಾಲಯದ ಆದೇಶದ ಪ್ರತಿಯನ್ನು ಒದಗಿಸುವುದು)

## ವೀಸಾ ಅವಧಿ ಮುಗಿದಿದ್ದರೂ ಅಕ್ರಮವಾಗಿ ರಾಜ್ಯದಲ್ಲಿ ನೆಲೆಸಿರುವ ವಿದೇಶಿಯರ ಬಗ್ಗೆ

**ಶ್ರೀ ಹೆಚ್.ಎಸ್.ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೭ (೩೧೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅದರಲ್ಲೂ ವಿಶೇಷವಾಗಿ ಬೆಂಗಳೂರಿನಲ್ಲಿ ವಿದ್ಯಾಭ್ಯಾಸಕ್ಕಾಗಿ ಅಥವಾ ಇನ್ನಿತರೆ ಉದ್ದೇಶಗಳಿಗಾಗಿ ವಿದೇಶಗಳಿಂದ ಬಂದಿರುವ ವಿದೇಶಿಯರು ಅವರ ವೀಸಾ ಅವಧಿ ಮುಗಿದಿದ್ದರೂ ಸಹ ಅನಧಿಕೃತವಾಗಿ ರಾಜ್ಯದಲ್ಲಿ ನೆಲೆಸಿ ಸ್ಥಳೀಯ ಕಾನೂನನ್ನು ಉಲ್ಲಂಘಿಸಿ ಶಾಂತಿ ಸುವ್ಯವಸ್ಥೆಗೆ ಭಂಗ ತಂದು ಗಲಭೆಗಳನ್ನು ಸೃಷ್ಟಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ ವೀಸಾ ಅವಧಿ ಮುಗಿದಿದ್ದರೂ ಸಹ ಅನಧಿಕೃತವಾಗಿ ರಾಜ್ಯದಲ್ಲಿ ನೆಲೆಸಿರುವ ವಿದೇಶಿಗರ ಮೇಲೆ ಸರ್ಕಾರವು ಕಳೆದ ಮೂರು ವರ್ಷಗಳಲ್ಲಿ ಏನು ಕ್ರಮ ಕೈಗೊಂಡಿದೆ ಮತ್ತು ಈ ರೀತಿ ಕಾನೂನು ಬಾಹಿರವಾಗಿ ಯಾವ ದೇಶದ ವಿದೇಶಿಯರು ಹೆಚ್ಚಾಗಿ ನೆಲೆಸಿದ್ದಾರೆ ; (ಮಾಹಿತಿ ನೀಡುವುದು)

(ಆ) ಬೆಂಗಳೂರಿನಲ್ಲಿ ಡ್ರಗ್ಸ್ ಮತ್ತು ಮಾದಕ ದ್ರವ್ಯಗಳ ಜಾಲ ಬಹುದೊಡ್ಡದಾಗಿ ಹರಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಸರ್ಕಾರ ಈ ಹಾವಳಿಯನ್ನು ತಡೆಗಟ್ಟಲು ಕೈಗೊಂಡಿರುವ ಕ್ರಮಗಳೇನು ;

(ಇ) ಕಳೆದ ಮೂರು ವರ್ಷಗಳಲ್ಲಿ ಬೆಂಗಳೂರಿನಲ್ಲಿ ಎಷ್ಟು ಡ್ರಗ್ಸ್ ಮತ್ತು ಮಾದಕ ದ್ರವ್ಯಗಳ ಮಾರಾಟಗಾರರನ್ನು ಬಂಧಿಸಲಾಗಿದೆ ಮತ್ತು ಎಷ್ಟು ಪ್ರಕರಣಗಳನ್ನು ದಾಖಲಿಸಲಾಗಿದೆ ? (ವಿವರ ನೀಡುವುದು)

## ಸರ್ಕಾರಿ ನೌಕರರ ವರ್ಗಾವಣೆ ಮಾರ್ಗಸೂಚಿ ಹಾಗೂ ವರ್ಗಾವಣೆಯ ಬಗ್ಗೆ

**ಶ್ರೀ ಹೆಚ್.ಎಸ್.ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೮ (೩೧೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಿನಾಂಕ: ೦೭–೦೬–೨೦೧೩ರ ವರ್ಗಾವಣೆ ಮಾರ್ಗಸೂಚಿಯಲ್ಲಿದ್ದ ಲೋಪಗಳೇನು ;

(ಆ) ದಿನಾಂಕ:೨೫.೦೬.೨೦೨೪ರ ಹೊಸ ವರ್ಗಾವಣೆ ಮಾರ್ಗಸೂಚಿಯಲ್ಲಿ ದಿನಾಂಕ:೦೭–೦೬–೨೦೧೩ರ ಮಾರ್ಗಸೂಚಿಯ ಪ್ಯಾರಾ 9 ರಲ್ಲಿ ಸಕ್ಷಮ ಪ್ರಾಧಿಕಾರವು ಅವಧಿಪೂರ್ವ/ ಅವಧಿ ಮೀರಿದ ವರ್ಗಾವಣೆಗಳನ್ನು ಮಾಡಬೇಕಾದಲ್ಲಿ ಸದರಿ ಪ್ಯಾರಾದಲ್ಲಿ ನಮೂದಿಸಿದ (೧) ರಿಂದ (೮) ರವರೆಗಿನ ಕಾರಣಗಳನ್ನು ಕಡ್ಡಾಯವಾಗಿ ಲಿಖಿತವಾಗಿ ದಾಖಲಿಸಿ ವರ್ಗಾವಣೆಗಳನ್ನು ಮಾಡುವ ಮುನ್ನ ಸಚಿವಾಲಯದ ಆಡಳಿತ ಇಲಾಖೆಗಳು ಮಾನ್ಯ ಮುಖ್ಯಮಂತ್ರಿಗಳ ಪೂರ್ವಾನುಮೋದನೆಯನ್ನು ಪಡೆಯಬೇಕೆಂಬ ನಿಭಂದನೆಯನ್ನು ಕೈಬಿಡಲು ಕಾರಣವೇನು ;

(ಇ) ದಿನಾಂಕ:೨೫.೦೬.೨೦೨೪ರ ಹೊಸ ವರ್ಗಾವಣೆ ಮಾರ್ಗಸೂಚಿಯನ್ನು ಸಿದ್ಧಪಡಿಸಲು ಇಲಾಖೆಯು ನಿರ್ವಹಿಸಿರುವ ಸಂಪೂರ್ಣ ಕಡತದ ಪ್ರತಿ ನೀಡುವುದು ;

(ಈ) ಜ್ಯೇಷ್ಠತಾ ಪಟ್ಟಿ ಇಲ್ಲದ ಸಂದರ್ಭದಲ್ಲಿ ವರ್ಗಾವಣೆಗಾಗಿ ಜ್ಯೇಷ್ಠತಾ ಘಟಕವನ್ನು ಯಾವ ರೀತಿ ನಿರ್ಧರಿಸಲಾಗುತ್ತದೆ; (ವಿವರಣೆಯೊಂದಿಗೆ ಪೂರಕ ಸುತ್ತೋಲೆ/ಮಾರ್ಗಸೂಚಿಗಳನ್ನು ಒದಗಿಸುವುದು)

(ಉ) ವರ್ಗಾವಣೆಗಳಲ್ಲಿ ಪಾರದರ್ಶಕತೆ ಕಾಪಾಡಲು ಇಲಾಖೆಗಳು ಅನುಸರಿಸಬೇಕಾದ ಕ್ರಮಗಳಾವುವು ;

(ಊ) ದಿನಾಂಕ:೦೮.೦೨.೨೦೨೪ರಂದು ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಗೆ ಸಲ್ಲಿಕೆಯಾದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ೨೦೨೩–೨೪ನೇ ಸಾಲಿನಲ್ಲಿ

ನಡೆದಿರುವ ಅಕ್ರಮ ವರ್ಗಾವಣೆಗಳ ದೂರಿನಲ್ಲಿ ವಿವರಿಸಿದ ೬ ಅಂಶಗಳ ಬಗ್ಗೆ ಸರ್ಕಾರವು ತನಿಖೆ ನಡೆಸಿ ಯಾವ ಕ್ರಮ ಕೈಗೊಂಡಿದೆ ?

## ಸರ್ಕಾರ ಆರ್ಥಿಕ ಇಲಾಖೆಯಿಂದ ಇಲಾಖೆಗಳಿಗೆ ನೀಡಿರುವ ಅನುದಾನದ ಬಗ್ಗೆ

**ಶ್ರೀ ಹೆಚ್.ಎಸ್.ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೯ (೩೨೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೩ ರಿಂದ ಇಲ್ಲಿಯವರೆಗೆ ಆರ್ಥಿಕ ಇಲಾಖೆಯಿಂದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಯಾವ ಯಾವ ಇಲಾಖೆಗಳಿಗೆ ಎಷ್ಟು ಹಣವನ್ನು ಮಂಜೂರು ಮಾಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ಪ್ರಸ್ತುತ ಸಾಲಿನಲ್ಲಿ ನೀಡಿರುವ ಹಣದಲ್ಲಿ ಎಲ್ಲಾ ಇಲಾಖೆಗಳು ಈ ಅನುದಾನವನ್ನು ಬಳಕೆ ಮಾಡಿ ಎಷ್ಟು ಯೋಜನೆಗಳನ್ನು ಪೂರ್ಣಗೊಳಿಸಿವೆ ಮತ್ತು ಎಷ್ಟು ಕಾಮಗಾರಿಗಳು ಪ್ರಗತಿಯಲ್ಲಿವೆ ; ಪ್ರಾರಂಭವಾಗದಿರುವ ಕಾಮಗಾರಿಗಳು ಎಷ್ಟು; (ಸಂಪೂರ್ಣ ವಿವರ ನೀಡುವುದು)

(ಇ) ೨೦೨೩-೨೦೨೪ನೇ ಸಾಲಿನಲ್ಲಿ ನೀಡಿರುವ ಅನುದಾನದಲ್ಲಿ ಎಲ್ಲಾ ಇಲಾಖೆಗಳ ಅಭಿವೃದ್ಧಿ ಯೋಜನೆಗಳನ್ನು ಪೂರ್ಣ ಪ್ರಮಾಣದಲ್ಲಿ ಮಾಡಲು ಹಣಕಾಸಿನ ಕೊರತೆ ಇರುವುದರಿಂದ ಸರ್ಕಾರ ಇನ್ನು ಹೆಚ್ಚಿನ ಅನುದಾನವನ್ನು ಬಿಡುಗಡೆ ಮಾಡಲು ತೆಗೆದುಕೊಂಡಿರುವ ಕ್ರಮಗಳೇನು ?

## ಅಬಕಾರಿ ಇಲಾಖೆಯಲ್ಲಿ ಸಿಎಲ್–೭ ಹೆಸರಿನಲ್ಲಿ ಭ್ರಷ್ಟಾಚಾರ ನಡೆಯುತ್ತಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೧೯೦ (೨೬೨) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅಬಕಾರಿ ಇಲಾಖೆಯ ವತಿಯಿಂದ ಸಿಎಲ್– ೭ ಪರವಾನಗಿಯನ್ನು ಪಡೆಯಲು ಇರುವ ನೀತಿ ನಿಯಮಗಳೇನು ; ಕಳೆದ ೧೦ ವರ್ಷದಲ್ಲಿ ಎಷ್ಟು ಬಾರಿ ನೀತಿ ನಿಯಮಗಳನ್ನು ತಿದ್ದುಪಡಿ ಮಾಡಲಾಗಿದೆ ;

(ಆ) ರಾಜ್ಯಾದ್ಯಂತ ಪ್ರವಾಸೋದ್ಯಮದ ಹೆಸರಿನಲ್ಲಿ ನಿಯಮಗಳನ್ನು ಗಾಳಿಗೆ ತೂರಿ ಮದ್ಯ ಮಾರಾಟಕ್ಕೆ ಅನುಮತಿ ನೀಡಲಾಗುತ್ತಿದೆಯೇ ಹಾಗೂ ಈ ಹೆಸರಿನಲ್ಲಿ ಭ್ರಷ್ಟಾಚಾರ ನಡೆಯುತ್ತಿರುವುದನ್ನು ಸರ್ಕಾರ ಗಮನಹರಿಸಿದೆಯೇ ;

(ಇ) ಕಳೆದ ೧೦ ವರ್ಷದಿಂದ ಇಲ್ಲಿಯುವರೆಗೂ ಕೋಲಾರ, ಬೆಂಗಳೂರನ್ನು ಒಳಗೊಂಡಂತೆ ರಾಜ್ಯಾದ್ಯಂತ ಎಷ್ಟು ಸಿಎಲ್–೭ ಪರವಾನಗಿಯನ್ನು ನೀಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಸಿಎಲ್–೭ ಪರವಾನಗಿಯುನ್ನು ನೀಡುವ ಸಂದರ್ಭದಲ್ಲಿ ನಿಯಮದಂತೆ ಕಟ್ಟಡವನ್ನು ವಾಣಿಜ್ಯ ಉದ್ದೇಶಕ್ಕಾಗಿ ಅನುಮತಿ ಪಡೆಯಬೇಕು ; ಸೂಕ್ತ ಪಾರ್ಕಿಂಗ್ ವ್ಯವಸ್ಥೆ, ಸ್ವಚ್ಛತೆ ಹಾಗೂ ಕಟ್ಟಡದಲ್ಲಿ ಅಗ್ನಿಶಾಮಕ ಸೌಲಭ್ಯವನ್ನು ಹೊಂದಿರಬೇಕೆಂದು ಕಡ್ಡಾಯವಾಗಿದೆಯೇ ;

(ಉ) ಹಾಗಿದ್ದಲ್ಲಿ, ನಿಯಮದಂತೆ ನಡೆಯುತ್ತಿರುವ ಹಾಗೂ ನಿಯಮ ಉಲ್ಲಂಘಿಸಿರುವ ಮತ್ತು ಪರವಾನಗಿಯನ್ನು ಪಡೆಯದೆ ವಾಮ ಮಾರ್ಗದಿಂದ ವ್ಯಾಪಾರ ನಡೆಸುತ್ತಿರುವವರ ಸಂಖ್ಯೆ ಎಷ್ಟು? (ಜಿಲ್ಲಾವಾರು ಮಾಹಿತಿ ನೀಡುವುದು)

## T.D.R ಮೂಲಕ ಭೂ ಪರಿಹಾರ ನೀಡುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೧೯೧ (೨೬೪) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೫ ವರ್ಷದ ಅವಧಿಯಲ್ಲಿ ಬೆಂಗಳೂರು ನಗರ ಜಿಲ್ಲೆಯ. ವ್ಯಾಪ್ತಿಯಲ್ಲಿ ಸಾರ್ವಜನಿಕರ ಉದ್ದೇಶಕ್ಕಾಗಿ ಬಿ.ಡಿ.ಎ, ಬಿ.ಬಿ.ಎಂ.ಪಿ ಹಾಗೂ ವಸತಿ ಇಲಾಖೆಯಿಂದ ಎಷ್ಟು ಆಸ್ತಿಗಳನ್ನು ಭೂ ಸ್ವಾಧೀನ ಮಾಡಿಕೊಳ್ಳಲಾಗಿದೆ ;

(ಆ) ಸ್ವಾಧೀನ ಪಡಿಸಿಕೊಂಡಿರುವ ಜಾಗಕ್ಕೆ ಪರಿಹಾರ ರೂಪದಲ್ಲಿ ಎಷ್ಟು ಹಣವನ್ನು ಪಾವತಿಸಲಾಗಿದೆ ; (ಇಲಾಖಾವಾರು ಮಾಹಿತಿ ನೀಡುವುದು)

(ಇ) ಬೆಂಗಳೂರು ನಗರದಲ್ಲಿ ಖಾಸಗಿ ಜಮೀನಿನ ಮಾಲೀಕರು ಸಾರ್ವಜನಿಕ ಉಪಯೋಗಕ್ಕೆ ಬಿಟ್ಟುಕೊಟ್ಟ ಜಾಗಕ್ಕೆ ಪರಿಹಾರ ರೂಪದಲ್ಲಿ ಆರ್ಥಿಕ ಪರಿಹಾರ ನೀಡುವ ಬದಲಿಗೆ ಟಿ.ಡಿ.ಆರ್ ಮೂಲಕ ಪರಿಹಾರ ನೀಡಲು ಸರ್ಕಾರದ ನಿಯಮದಲ್ಲಿ ಅವಕಾಶ ಇದೆಯೇ ; (ಆದೇಶದ ಪ್ರತಿ ಒದಗಿಸುವುದು)

(ಈ) ಹಾಗಿದ್ದಲ್ಲಿ, ಇದುವರೆಗೂ ಬಿ.ಡಿ.ಎ, ಬಿ.ಬಿ.ಎಂ.ಪಿ ಹಾಗೂ ಕೊಳಗೇರಿ ಅಭಿವೃದ್ಧಿ ಮಂಡಳಿಯಿಂದ ಕಳೆದ ೫ ವರ್ಷದಿಂದ ಎಷ್ಟು ಖಾಸಗಿ ಸ್ವತ್ತುಗಳನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ ; ಇದಕ್ಕೆ ಪರಿಹಾರ ರೂಪದಲ್ಲಿ ಎಷ್ಟು ಮಾಲೀಕರಿಗೆ ಟಿ.ಡಿ.ಆರ್ (Transfer Development Rights) ಮೂಲಕ ಹಾಗೂ ಆರ್ಥಿಕ ರೂಪದಲ್ಲಿ ಪರಿಹಾರ ನೀಡಲಾಗಿದೆ ; (ಪ್ರತ್ಯೇಕ ಮಾಹಿತಿ ಒದಗಿಸುವುದು)

(ಉ) ಇನ್ನು ಎಷ್ಟು ಭೂ ಮಾಲೀಕರಿಗೆ ಪರಿಹಾರ ನೀಡಲು ಬಾಕಿ ಇವೆ ಇದಕ್ಕೆ ಕಾರಣವೇನು ?

## ಲೋಕಸೇವಾ ಆಯೋಗದಿಂದ ಹುದ್ದೆಗಳ ಭರ್ತಿ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೯೨ (೨೪೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಮೂರು ವರ್ಷಗಳಲ್ಲಿ ಕರ್ನಾಟಕ ಲೋಕಸೇವಾ ಆಯೋಗದಿಂದ ಯಾವ ಯಾವ ಇಲಾಖೆಗಳಲ್ಲಿ ಎಷ್ಟೆಷ್ಟು ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಅಧಿಸೂಚನೆ ಹೊರಡಿಸಲಾಗಿದೆ ; (ವಿವರ ನೀಡುವುದು)

(ಆ) ಹೊರಡಿಸಿರುವ ಅಧಿಸೂಚನೆಗಳಿಗೆ ಅನುಸಾರವಾಗಿ ಹುದ್ದೆಗಳನ್ನು ಕಾಲಕಾಲಕ್ಕೆ ಭರ್ತಿ ಮಾಡಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) KPSC ನಿಗದಿತ ಕಾಲಮಿತಿಯೊಳಗೆ ನಿಗದಿತ ಹುದ್ದೆಗಳನ್ನು ಭರ್ತಿ ಮಾಡದೇ ಇರುವುದು ಪ್ರಶ್ನೆ ಪತ್ರಿಕೆಗಳಲ್ಲಿ ದೋಷ

ಅನುವಾದದಲ್ಲಿ ಅರ್ಥಹೀನತೆ, ಪರೀಕ್ಷಾ ವೇಳಾಪಟ್ಟಿಯಲ್ಲಿ ಗೊಂದಲ, ಫಲಿತಾಂಶದಲ್ಲಿ ತಾರತಮ್ಯ ಹಾಗೂ ಪ್ರಶ್ನೆ ಪತ್ರಿಕೆ ಸೋರಿಕೆಯಂತಹ ಕಾರಣಗಳಿಂದಾಗಿ ಉದ್ಯೋಗ ಆಕಾಂಕ್ಷಿಗಳು KPSC ಮೇಲಿನ ನಂಬಿಕೆಯನ್ನು ಕಳೆದುಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ; KPSC ಯಲ್ಲಿ ನಡೆಯುವ ಅಕ್ರಮಗಳನ್ನು ತಡೆಗಟ್ಟಲು ಸರ್ಕಾರವು ಯಾವ ರೀತಿಯಲ್ಲಿ ಕಾರ್ಯೋನ್ಮುಖವಾಗಿದೆ ;

(ಉ) ಪ್ರತಿಭಾವಂತ ಅಭ್ಯರ್ಥಿಗಳಿಗೆ ಪ್ರತಿಬಾರಿ ಅನ್ಯಾಯವಾಗುತ್ತಿದ್ದು, ಈ ಸಮಸ್ಯೆಗಳನ್ನು ಉದ್ದೇಶಪೂರ್ವಕವಾಗಿ ನಿರ್ಲಕ್ಷ ಮಾಡಿದಂತಾಗುವುದಿಲ್ಲವೇ ?

## ಕೊಪ್ಪಳ ಜಿಲ್ಲೆಯ ಕ್ರೀಡಾಂಗಣಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೯೩ (೨೪೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಪ್ಪಳ ಜಿಲ್ಲಾ ಕೇಂದ್ರವನ್ನು ಹೊರತುಪಡಿಸಿ ಕ್ರೀಡಾಂಗಣ ಸೌಲಭ್ಯದಿಂದ ವಂಚಿತವಾಗಿರುವ ತಾಲ್ಲೂಕುಗಳಾವುವು ;

(ಆ) ಸದರಿ ಜಿಲ್ಲೆಯ ತಾಲ್ಲೂಕುಗಳಿಗೆ ತಾಲ್ಲೂಕು ಕ್ರೀಡಾಂಗಣವನ್ನು ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಕೊಪ್ಪಳ ಜಿಲ್ಲೆಯ ತಾಲ್ಲೂಕು ಕೇಂದ್ರಗಳಲ್ಲಿ ಯಾವ ಕಾಲಮಿತಿಯೊಳಗೆ ಕ್ರೀಡಾಂಗಣಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುವುದು ?

## ಕೊಪ್ಪಳ ಜಿಲ್ಲೆಯ ಕೆರೆಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೯೪ (೨೫೦) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಪ್ಪಳ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಿಂದ ಹೂಳುತೆಗೆದು ಅಭಿವೃದ್ಧಿಪಡಿಸಲಾಗಿರುವ ಕೆರೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಸದರಿ ಕಾಮಗಾರಿಗಳಿಗಾಗಿ ಕೊಪ್ಪಳ ಜಿಲ್ಲೆಗೆ ಕಳೆದ ಮೂರು ವರ್ಷಗಳಿಂದ ಬಿಡುಗಡೆ ಮಾಡಿರುವ ಅನುದಾನವೆಷ್ಟು; ಕೆರೆಗಳ ದುರಸ್ತಿ ಹಾಗೂ ಅಭಿವೃದ್ಧಿಪಡಿಸಲು ಖರ್ಚು ಮಾಡಿದ ಹಾಗೂ ಖರ್ಚು ಮಾಡದೇ ಉಳಿದ ಹಣವೆಷ್ಟು ; ಖರ್ಚು ಮಾಡದಿರಲು ಕಾರಣಗಳೇನು ; (ವಿವರ ನೀಡುವುದು)

(ಇ) ಈ ಜಿಲ್ಲೆಯಲ್ಲಿರುವ ಕೆರೆಗಳನ್ನು ಶಾಶ್ವತವಾಗಿ ಉಳಿಸಲು ಹಾಗೂ ಪುನಶ್ಚೇತನ, ದುರಸ್ತಿ ಕಾರ್ಯ ಅಭಿವೃದ್ಧಿಪಡಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ಮಾಹಿತಿ ನೀಡುವುದು)

(ಈ) ಕೊಪ್ಪಳ ಜಿಲ್ಲೆಯಲ್ಲಿ ಇರುವ ಕೆರೆಗಳ ಸಂಖ್ಯೆ ಎಷ್ಟು; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಈ ಕೆರೆಗಳ ವಿಸ್ತೀರ್ಣ ಅವುಗಳಲ್ಲಿ ಇರುವ ನೀರಿನ ಸಾಮರ್ಥ್ಯ ಎಷ್ಟು; (ಪೂರ್ಣ ವಿವರ ನೀಡುವುದು)

(ಊ) ಸದರಿ ಕೆರೆಗಳಲ್ಲಿ ಹೂಳು ತುಂಬಿ ನೀರಿನ ಸಾಮರ್ಥ್ಯ ಕಡಿಮೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ? (ಬಂದಿದ್ದಲ್ಲಿ ಕೆರೆಗಳ ವಿವರ ನೀಡುವುದು)

# ಕೆ.ಪಿ.ಎಸ್.ಸಿ. ಸದಸ್ಯರ ಸಂಖ್ಯೆ ನಿಗದಿಪಡಿಸಲು ಇರುವ ಮಾನದಂಡಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೯೫ (೨೦೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಲೋಕಸೇವಾ ಆಯೋಗದಲ್ಲಿ ಎಷ್ಟು ಸದಸ್ಯರಿದ್ದಾರೆ ; ಯಾವ ಯಾವ ವರ್ಷಗಳಲ್ಲಿ ಸದಸ್ಯರುಗಳ ಸಂಖ್ಯೆಯನ್ನು ಹೆಚ್ಚಿಸಲಾಗಿದೆ ; (ವರ್ಷವಾರು ವಿವರಗಳನ್ನು ನೀಡುವುದು)

(ಆ) ಈ ಸಂಸ್ಥೆಯಲ್ಲಿ ಸದಸ್ಯರ ಸಂಖ್ಯೆಯನ್ನು ನಿಗದಿಪಡಿಸಲು ಅಳವಡಿಸಿಕೊಂಡಿರುವ ಮಾನದಂಡಗಳು ಯಾವುವು ಹಾಗೂ ಸದಸ್ಯರನ್ನು ನೇಮಿಸುವ ಮಾನದಂಡಗಳು ಯಾವುವು ;

(ಇ) ಯುಪಿಎಸ್‌ಸಿ ಮತ್ತು ರಾಜ್ಯಗಳ ಇತರ ಪಿಎಸ್‌ಸಿಗಳಿಗೆ ಹೋಲಿಸಿದರೆ ಸದಸ್ಯರ ಸಂಖ್ಯೆ ಗಣನೀಯವಾಗಿ ಹೆಚ್ಚು ಇರುವುದರಿಂದ ಸೇವೆಗೆ ಆಯ್ಕೆ ಮಾಡುವ ಅಭ್ಯರ್ಥಿಗಳಲ್ಲಿ ಪಾರದರ್ಶಕತೆ ಇಲ್ಲದೆ ಇರುವುದರಿಂದ ಈ ಬಗ್ಗೆ ತೆಗೆದುಕೊಳ್ಳುವ ಕ್ರಮಗಳೇನು ;

(ಈ) ಕೆಪಿಎಸ್‌ಸಿಯಲ್ಲಿ ಯುಪಿಎಸ್‌ಸಿ ಮಾದರಿಯಲ್ಲಿ ಸದಸ್ಯರನ್ನು ನೇಮಿಸಿ ಗುಣಮಟ್ಟವನ್ನು ಹೆಚ್ಚಿಸಲು ಸರ್ಕಾರಕ್ಕೆ ಇರುವ ತೊಂದರೆಗಳೇನು ; (ವಿವರ ನೀಡುವುದು)

(ಉ) ಕೆ.ಪಿ.ಎಸ್.ಸಿ.ಯು ರಾಜಕೀಯ ಕೇಂದ್ರವಾಗಿ ಕಾರ್ಯನಿರ್ವಹಿಸುತ್ತಿದ್ದು, ಅದರ ಗುಣಮಟ್ಟವನ್ನು ಕಾಯ್ದುಕೊಳ್ಳುವುದರಲ್ಲಿ ವಿಫಲಗೊಂಡಿರುವುದರಿಂದ ಸರ್ಕಾರವು ತೆಗೆದುಕೊಳ್ಳುವ ಕ್ರಮವೇನು ?

## ಅಬಕಾರಿ ಇಲಾಖೆಯಿಂದ ಒಂದು ದಿನದ ಮದ್ಯ ಮಾರಾಟಕ್ಕೆ ನೀಡಿದ ಪರವಾನಗಿ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೯೬ (೨೦೬) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೩-೨೪, ೨೦೨೪-೨೫ ಮತ್ತು ೨೦೨೫-೨೬ನೇ ಸಾಲಿನಲ್ಲಿ ಅಬಕಾರಿ ಇಲಾಖೆಯಿಂದ ಒಂದು ದಿನದ ಮದ್ಯ ಮಾರಾಟಕ್ಕೆ ನೀಡಿದ ಪರವಾನಗಿ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಖಾಸಗಿ ಸ್ಥಳಗಳಲ್ಲಿ ಮದುವೆ, ಮತ್ತಿತರ ವಿಶೇಷ ಸಂದರ್ಭದಲ್ಲಿ ಕಾರ್ಯಕ್ರಮಗಳಲ್ಲಿ ಅತಿಥಿಗಳಿಗೆ ಆಹ್ವಾನಿತರಿಗೆ, ಸಂಬಂಧಿಕರಿಗೆ ಮದ್ಯ ವಿತರಿಸಲು ಯಾವ ಮಾನದಂಡವನ್ನು ವಿಧಿಸಲಾಗುವುದು ; (ವಿವರ ನೀಡುವುದು)

(ಇ) ಮದುವೆ ಮತ್ತಿತರ ಕಾರ್ಯಗಳಿಗೆ, ಅತಿಥಿಗಳಿಗೆ ನೀಡುವ ಮದ್ಯ ಸೇವನೆ, ಔತಣಕೂಟದಲ್ಲಿ ಮದ್ಯ ಮಾರಾಟದ ಪರವಾನಗಿ ನೀಡುವುದು ಸರಿಯೇ ; ಈ ಬಗ್ಗೆ ಸರ್ಕಾರದ ಅಭಿಪ್ರಾಯವೇನು ; ಯಾವ ಕಾರಣಕ್ಕಾಗಿ ಮಾರಾಟ ಪರವಾನಗಿ ನೀಡಲಾಗುತ್ತಿದೆ ; ಈ ಬಗ್ಗೆ ಕಾನೂನಿನಲ್ಲಿ ತಿದ್ದುಪಡಿ ತರಲು ಕ್ರಮವಹಿಸಲಾಗಿದೆಯೇ ; (ವಿವರ ನೀಡುವುದು)

(ಈ) ಒಂದು ದಿನದ ಮದ್ಯ ಮಾರಾಟ ಪರವಾನಗಿ ನೀಡುವ ಸಂದರ್ಭದಲ್ಲಿ ಅಬಕಾರಿ ಅಧಿಕಾರಿಗಳು ಕಿರುಕುಳ ನೀಡುವುದರ ಬಗ್ಗೆ ಅನೇಕ ದೂರುಗಳಿದ್ದು, ಪರವಾನಗಿ ನೀಡಲು ನಿಯಮಗಳಲ್ಲಿ ಸರಳೀಕರಣ ಮಾಡಲು ತೆಗೆದುಕೊಳ್ಳುವ ಕ್ರಮವೇನು ;

(ಉ) ಅಬಕಾರಿ ಇಲಾಖೆಯ ಅಧಿಕಾರಿಗಳು ಸರ್ಕಾರಕ್ಕೆ ಸಂಗ್ರಹಿಸುವ ಸುಂಕಗಿಂತ ಅವರುಗಳೇ ಇಂತಿಷ್ಟು ಪ್ರತಿ ತಿಂಗಳು ನೀಡಬೇಕೆಂದು ಫಿಕ್ಸ್ ಮಾಡಿಕೊಂಡಿರುವ ಕುರಿತು ಸರ್ಕಾರವು ಅವರುಗಳ ಮೇಲೆ ತೆಗೆದುಕೊಳ್ಳುವ ಕ್ರಮವೇನು ?

## ಕರಾವಳಿ ಜಿಲ್ಲೆಗಳಲ್ಲಿ ಕೋಮು ಸೌಹಾರ್ದತೆ ಕಾಪಾಡುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೯೭ (೨೦೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲೆ ಕರಾವಳಿ ಜಿಲ್ಲೆಗಳಲ್ಲಿ ಕೋಮು ಸೌಹಾರ್ದತೆ ಕಾಪಾಡಲು ಪೊಲೀಸ್ ಇಲಾಖೆಯಲ್ಲಿ ಯಾವ ರೀತಿ ಕ್ರಮ ಕೈಗೊಳ್ಳಲಾಗಿದೆ ;

(ಆ) ಕೋಮು ಸೌಹಾರ್ದತೆಗೆ ಧಕ್ಕೆ ತರುವ ವ್ಯಕ್ತಿಗಳ ಮೇಲೆ ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ ಕರಾವಳಿ ಭಾಗದ ೦೩ ಜಿಲ್ಲೆಗಳಲ್ಲಿ ಎಷ್ಟು ಪ್ರಕರಣ ದಾಖಲು ಮಾಡಲಾಗಿದೆ ; (ವಿವರ ನೀಡುವುದು)

(ಇ) ಕೋಮು ಸೌಹಾರ್ದತೆಗೆ ಧಕ್ಕೆ ಉಂಟುಮಾಡುವ ಭಾಷಣಗಳನ್ನು ಮಾಡುವ ವ್ಯಕ್ತಿಗಳ ವಿರುದ್ಧ ಎಷ್ಟು ಕೇಸು ದಾಖಲಿಸಲಾಗಿದೆ ಮತ್ತು ಅವರ ವಿರುದ್ಧ ಕ್ರಮಕೈಗೊಳ್ಳಲಾಗಿದೆಯೇ ? (ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆ ಮತ್ತು ಉಡುಪಿ ಜಿಲ್ಲೆಗಳಲ್ಲಿ ಇರುವ ಕಿಂಡಿ ಅಣೆಕಟ್ಟುಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೯೮ (೨೦೮) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಇರುವ ಕಿಂಡಿ ಅಣೆಕಟ್ಟುಗಳ ಸಂಖ್ಯೆ ಎಷ್ಟು ; ಇದರ ನಿರ್ವಹಣೆಗಾಗಿ ಮೀಸಲಿಟ್ಟ ಹಣ ಎಷ್ಟು ; (ವಿವರ ನೀಡುವುದು)

(ಆ) ನೀರಿನ ಮಟ್ಟದ ಅಂತರ್ಜಲವನ್ನು ಏರಿಸಲು ಕರಾವಳಿ ಭಾಗದಲ್ಲಿ ಕೈಗೊಂಡಿರುವ ಯೋಜನೆಗಳಾವುವು ; (ವಿವರ ನೀಡುವುದು)

(ಇ) ಅಂತರ್ಜಲ ಅಭಿವೃದ್ಧಿಗಾಗಿ ಯಾವ ಯಾವ ಕಾಮಗಾರಿಗಳನ್ನು ಕರಾವಳಿ ಜಿಲ್ಲೆಗಳಲ್ಲಿ ಕೈಗೊಳ್ಳಲಾಗಿದೆ ; ಇದಕ್ಕೆ ತಗಲುವ ವೆಚ್ಚ ಎಷ್ಟು ; ಪೂರ್ಣಗೊಂಡಿರುವ ಹಾಗೂ ಪ್ರಗತಿಯಲ್ಲಿರುವ ಕಾಮಗಾರಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಈ) ಅಂತರ್ಜಲ ಅಭಿವೃದ್ಧಿ ಪಡಿಸಲು ಇಲಾಖೆಯು ಸಂಪೂರ್ಣ ವಿಫಲಗೊಂಡಿದೆ ಎಂಬ ದೂರುಗಳಿರುವುದು ನಿಜವೇ : ಈ ಬಗ್ಗೆ ಕೈಗೊಂಡ ಕ್ರಮವೇನು ?

## ಕರಾವಳಿ ಭಾಗದಲ್ಲಿ ಉಚ್ಚ ನ್ಯಾಯಾಲಯ ಸಂಚಾರಿ ಪೀಠ ಸ್ಥಾಪಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೯೯ (೨೦೯) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರಾವಳಿ ಭಾಗದಲ್ಲಿ ಉಚ್ಚ ನ್ಯಾಯಾಲಯ ಸಂಚಾರಿ ಪೀಠ ಸ್ಥಾಪಿಸಬೇಕೆಂಬ ಬೇಡಿಕೆಯನ್ನು ಮಂಡಿಸಲಾಗಿದ್ದು, ಹೈಕೋರ್ಟ್ ಸಂಚಾರಿ ಪೀಠ ಸ್ಥಾಪನೆಗೆ ಕಾನೂನು ಇಲಾಖೆ ಕೈಗೊಂಡ ಕ್ರಮವೇನು ; (ವಿವರ ನೀಡುವುದು)

(ಆ) ಕರಾವಳಿ ಸಂಚಾರಿ ಪೀಠ ಸ್ಥಾಪಿಸಿದ್ದಲ್ಲಿ ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳ ಭಾಗದ ಜನರಿಗೆ ಕಡಿಮೆ ಖರ್ಚಿನಲ್ಲಿ ನ್ಯಾಯ ಒದಗಿಸಲು ಸಾಧ್ಯವಾಗುತ್ತಿರುವುದಲ್ಲದೇ ಈ ಭಾಗದ ಜನರು ಬೆಂಗಳೂರಿಗೆ ಪ್ರಯಾಣಿಸಲು ಉಂಟಾದ ಸಮಯ ಮತ್ತು ಖರ್ಚುಗಳನ್ನು ಗಮನದಲ್ಲಿರಿಸಿ, ನ್ಯಾಯವನ್ನು ವಿಕೇಂದ್ರೀಕರಿಸುವ ಮೂಲಕ ಕಡಿಮೆ ಅವಧಿಯಲ್ಲಿ ನ್ಯಾಯವನ್ನು ಪಡೆಯಲು ಅನುಕೂಲವಾಗಲಿದ್ದು, ಇಲ್ಲಿ ಸಂಚಾರಿ ಪೀಠ ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುವುದೇ ;

(ಇ) ಕರಾವಳಿ ಭಾಗದಲ್ಲಿ ಸಂಚಾರಿ ಪೀಠ ಸ್ಥಾಪನೆಗೆ ಬೇಕಾದ ಸ್ಥಳಾವಕಾಶ, ಕಟ್ಟಡಗಳು, ಮೂಲಭೂತ ಸೌಕರ್ಯ ಇರುವುದರಿಂದ ಈ ಬಗ್ಗೆ "ಅಧ್ಯಯನ ಸಮಿತಿ" ರಚಿಸಲು ಕ್ರಮ ಕೈಗೊಳ್ಳಲಾಗುವುದೇ ; (ವಿವರ ನೀಡುವುದು)

(ಈ) ಉಚ್ಚ ನ್ಯಾಯಾಲಯ ಸರ್ಕ್ಯೂಟ್ ಬೆಂಚ್ ಸ್ಥಾಪನೆಗೆ ಇರುವ ನಿಯಮಗಳೇನು ; ಅವಶ್ಯವಿರುವ ಮೂಲಭೂತ ಸೌಕರ್ಯಗಳಾವುವು ? (ವಿವರ ನೀಡುವುದು)

## ಬಿ.ಡಿ.ಎ ವತಿಯಿಂದ ನಾಡಪ್ರಭು ಕೆಂಪೇಗೌಡ ಬಡಾವಣೆ ನಿರ್ಮಾಣದ ಬಗ್ಗೆ

**ಶ್ರೀ ಟಿ.ಎನ್.ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೦೦ (೨೬೦) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ನಾಡಪ್ರಭು ಕೆಂಪೇಗೌಡ ಬಡಾವಣೆಯನ್ನು ರಚನೆ ಮಾಡಲು ಪ್ರಾಥಮಿಕ ಅಧಿಸೂಚನೆಯನ್ನು

ಯಾವ ವರ್ಷದಲ್ಲಿ ಹೊರಡಿಸಲಾಗಿತ್ತು; ಎಷ್ಟು ಎಕರೆಗೆ ಅಧಿಸೂಚನೆ ಹೊರಡಿಸಲಾಗಿತ್ತು; (ಸಂಪೂರ್ಣ ದಾಖಲೆಗಳೊಂದಿಗೆ ಮಾಹಿತಿ ಒದಗಿಸುವುದು)

(ಅ) ಈ ಬಡಾವಣೆಯ ಅಂತಿಮ ಅಧಿಸೂಚನೆಯನ್ನು ಯಾವ ವರ್ಷದಲ್ಲಿ ಮಾಡಲಾಗಿತ್ತು ಹಾಗೂ ಅಂತಿಮ ಅಧಿಸೂಚನೆಯಲ್ಲಿ ಎಷ್ಟು ಎಕರೆಗೆ ಅಧಿಸೂಚನೆ ಹೊರಡಿಸಲಾಗಿತ್ತು; (ದಾಖಲೆಗಳೊಂದಿಗೆ ವಿವರ ನೀಡುವುದು)

(ಇ) ಪ್ರಾಥಮಿಕ ಅಧಿಸೂಚನೆಯಿಂದ ಅಂತಿಮ ಅಧಿಸೂಚನೆ ಹೊರಡಿಸುವಾಗ ಬಡಾವಣೆಗೆ ಯೋಗ್ಯವಲ್ಲವೆಂದು ಎಷ್ಟು ಎಕರೆ ಜಮೀನನ್ನು ಕೈಬಿಡಲಾಗಿದೆ; (ಮಾಹಿತಿ ಒದಗಿಸುವುದು)

(ಈ) ಇದುವರೆವಿಗೂ ಎಷ್ಟು ಎಕರೆಗೆ ಐತೀರ್ಪು ರಚಿಸಿ ಭೂಸ್ವಾಧೀನವನ್ನು ಪಡೆಯಲಾಗಿದೆ; ಬಾಕಿ ಎಷ್ಟು ಎಕರೆಗೆ ಐತೀರ್ಪು ರಚಿಸಬೇಕಾಗಿದೆ ಹಾಗೂ ಇಲ್ಲಿಯ ತನಕ ವಿಳಂಬಕ್ಕೆ ಕಾರಣಗಳೇನು; (ವಿವರ ನೀಡುವುದು)

(ಉ) ಅಂತಿಮ ಅಧಿಸೂಚನೆ ಆದ ನಂತರ ರೈತರು ನ್ಯಾಯಾಲಯದಲ್ಲಿ ಎಷ್ಟು ಪ್ರಕರಣಗಳನ್ನು ಹೂಡಿದ್ದಾರೆ? (ಸಂಪೂರ್ಣ ವಿವರ ನೀಡುವುದು)

## ಹೊಸದಾಗಿ ನಿರ್ಮಾಣ ಮಾಡುವ ಮೆಟ್ರೋ ಮಾರ್ಗದಲ್ಲಿ ಡಬಲ್ ಡೆಕ್ಕರ್ ಫ್ಲೈ ಓವರ್ ಕುರಿತು

**ಶ್ರೀ ಟಿ.ಎನ್.ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೦೧ (೨೬೧) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದ ಟ್ರಾಫಿಕ್ ಜಾಮ್ ಕಡಿಮೆ ಮಾಡಲು ಹೊಸದಾಗಿ ನಿರ್ಮಾಣ ಮಾಡುವ ಎಲ್ಲಾ ಮೆಟ್ರೋ ಮಾರ್ಗದಲ್ಲಿ

ಡಬಲ್–ಡೆಕ್ಕರ್ ಫ್ಲೈ ಓವರ್ ಮಾಡಲಾಗುತ್ತಿದೆಯೇ ;

(ಆ) ಹಾಗಿದ್ದಲ್ಲಿ, ಯಾವ ಯಾವ ಮಾರ್ಗದಲ್ಲಿ ಇಂತಹ ಮಾರ್ಗಗಳನ್ನು ನಿರ್ಮಾಣ ಮಾಡಲು ಯೋಜಿಸಲಾಗಿದೆ ; (ವಿವರ ನೀಡುವುದು) ಇದೇ ಮಾದರಿಯನ್ನು ಉಪ ನಗರ ರೈಲು ಯೋಜನೆಯಲ್ಲೂ ಅಳವಡಿಸಿಕೊಳ್ಳಲಾಗುವುದೇ ; (ಸಂಪೂರ್ಣ ಮಾಹಿತಿಯೊಂದಿಗೆ ವಿವರಣೆ ನೀಡುವುದು)

(ಇ) ಈ ಯೋಜನೆಯ ಕಾಮಗಾರಿಗಳಿಗೆ ಒಟ್ಟು ಎಷ್ಟು ಮೊತ್ತವನ್ನು ವಿನಿಯೋಗಿಸಲಾಗುವುದು ? (ಮಾಹಿತಿ ಒದಗಿಸುವುದು)

## ರಾಜ್ಯದ ನಕ್ಸಲ್ ನಿಗ್ರಹ ಪಡೆಯ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೨ (೨೮೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನಕ್ಸಲ್ ಚಟುವಟಿಕೆ ಸಂಪೂರ್ಣವಾಗಿ ನಿಂತಿದೆಯೇ ; (ವಿವರ ನೀಡುವುದು)

(ಆ) ನಕ್ಸಲ್ ಚಟುವಟಿಕೆಯನ್ನು ದಮನಗೊಳಿಸಲು ಕಾರ್ಯ ನಿರ್ವಹಿಸುತ್ತಿದ್ದ ಎ.ಎನ್.ಎಫ್ ಕಾರ್ಯಪಡೆ ಇನ್ನೂ ಚಾಲ್ತಿಯಲ್ಲಿದೆಯೇ ಅಥವಾ ಸದರಿ ನಕ್ಸಲ್ ನಿಗ್ರಹ ಪಡೆಯನ್ನು ಮೊಟಕುಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಇ) ಸದರಿ ಎ.ಎನ್.ಎಫ್ ಕಾರ್ಯಪಡೆಗೆ ಹೊಸ ಸಿಬ್ಬಂದಿಗಳನ್ನು ನೇಮಕಾತಿ ಮಾಡಿಕೊಳ್ಳುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಈ) ಶರಣಾಗತರಾದ ನಕ್ಸಲರಿಗೆ ನೀಡುವ ಪ್ಯಾಕೇಜ್‌ಗಳ ವಿವರಗಳೇನು ? (ಮಾಹಿತಿ ಒದಗಿಸುವುದು)

## ಶಿಷ್ಟಾಚಾರ ನಿಯಮಗಳ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೩ (೨೮೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರಿ ಕಾರ್ಯಕ್ರಮಗಳಿಗೆ ಇರುವ ಸರ್ಕಾರದ ಶಿಷ್ಟಾಚಾರ ನಿಯಮಗಳೇನು ; ಸರ್ಕಾರದ ಯಾವ ಯಾವ ಇಲಾಖೆಗಳಿಗೆ ಶಿಷ್ಟಾಚಾರ ನಿಯಮಗಳು ಅನ್ವಯಿಸುತ್ತವೆ ಹಾಗೂ ಅನ್ವಯಿಸುವುದಿಲ್ಲ ;

(ಆ) ನಗರ ಹಾಗೂ ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಮಟ್ಟದಲ್ಲಿ ಜನವಸತಿ ಪ್ರದೇಶ, ಆಯಾ ಚುನಾವಣಾ ಕ್ಷೇತ್ರಗಳ, ಗ್ರಾಮ, ಹೋಬಳಿ, ತಾಲ್ಲೂಕು, ಉಪವಿಭಾಗ, ವಲಯ, ಜಿಲ್ಲೆ ಹಾಗೂ ರಾಜ್ಯಮಟ್ಟದ ಸರ್ಕಾರಿ ಕಾರ್ಯಕ್ರಮಗಳಿಗೆ ಪ್ರತ್ಯೇಕ ಶಿಷ್ಟಾಚಾರ ನಿಯಮಗಳಿವೆಯೇ ; (ಪಾಲಿಸಬೇಕಾದ ಶಿಷ್ಟಾಚಾರ ನಿಯಮಗಳ ವಿವರ ನೀಡುವುದು)

(ಇ) ಆಹ್ವಾನ ಪತ್ರಿಕೆ ಮುದ್ರಿಸದೆ ಮಾಡುವ ಶಂಕುಸ್ಥಾಪನೆ, ಚಾಲನೆ, ಉದ್ಘಾಟನೆ ಇತ್ಯಾದಿ ಕಾರ್ಯಕ್ರಮಗಳಿಗೆ ಶಿಷ್ಟಾಚಾರ ನಿಯಮಗಳಿವೆಯೇ ;

(ಈ) ಶಿಷ್ಟಾಚಾರ ನಿಯಮಗಳ ಉಲ್ಲಂಘನೆಯಾದಲ್ಲಿ ಇದರ ಜವಾಬ್ದಾರಿಯನ್ನು ಯಾರು ವಹಿಸಿಕೊಳ್ಳಬೇಕು ?

## ಪೊಲೀಸ್ ಸಿಬ್ಬಂದಿಗಳ ನೇಮಕಾತಿ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೪ (೨೭೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಕಳೆದ ೦೩ ವರ್ಷಗಳಲ್ಲಿ ಎಷ್ಟು ಪೊಲೀಸ್ ಸಿಬ್ಬಂದಿಗಳ ನೇಮಕಾತಿ ಮಾಡಲಾಗಿದೆ; (ಜಿಲ್ಲಾವಾರು, ನಗರ/ಗ್ರಾಮಾಂತರ ಪ್ರತ್ಯೇಕ ವಿವರ ನೀಡುವುದು)

(ಆ) ಈ ನೇಮಕಾತಿಗಳಲ್ಲಿ ಸ್ಥಳೀಯವಾಗಿ ಆಯ್ಕೆಯಾಗಿರುವ ಹಾಗೂ ಹೊರ ಜಿಲ್ಲೆಗಳಿಂದ ಆಯ್ಕೆಯಾಗಿರುವವರ ಶೇಕಡ ಪ್ರಮಾಣ ಎಷ್ಟು ; (ವಿವರ ನೀಡುವುದು)

(ಇ) ಈ ನೇಮಕಾತಿಗಳಲ್ಲಿ ಎಷ್ಟು ಸ್ಥಳೀಯ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಿದ್ದರು ; ಇವರ ನೇಮಕಾತಿಯಾಗದಿರಲು ಕಾರಣವೇನು ;

(ಈ) ಹೊರ ಜಿಲ್ಲೆಗಳಿಂದ ನೇಮಕಾತಿ ಆಗಿರುವ ಅಭ್ಯರ್ಥಿಗಳು ಹೆಚ್ಚಿರುವುದರಿಂದ ಇವರುಗಳಿಗೆ ಇಲ್ಲಿ ಕಾರ್ಯನಿರ್ವಹಿಸುವಾಗ ಭಾಷೆಯ (ತುಳು) ಸಮಸ್ಯೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದರಿಂದ ಕೆಲವೊಂದು ಪ್ರಕರಣಗಳನ್ನು ಭೇದಿಸುವಲ್ಲಿ ತೊಂದರೆಯಾಗುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಉ) ಮುಂದೆ ನಡೆಯುವ ನೇಮಕಾತಿಗಳಲ್ಲಿ ಸ್ಥಳೀಯ ಅಭ್ಯರ್ಥಿಗಳ ನೇಮಕಾತಿಗೆ ಆದ್ಯತೆ ನೀಡಲಾಗುವುದೇ ;

(ಊ) ಸದರಿ ಜಿಲ್ಲೆಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಪೊಲೀಸ್ ಸಿಬ್ಬಂದಿಗಳು (ಸಿ ವರ್ಗ) ಬೇರೆ ಬೇರೆ ಜಿಲ್ಲೆಗಳಿಗೆ ವರ್ಗಾವಣೆ ಗೊಂಡಿರುತ್ತಾರೆ ? (ಜಿಲ್ಲಾವಾರು ವಿವರ ನೀಡುವುದು)

## ಕೆ.ಪಿ.ಎಸ್.ಸಿ.ಯ ಅವಾಂತರದ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೫ (೨೭೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆ.ಪಿ.ಎಸ್.ಸಿ. ಯಲ್ಲಿ ಹಲವು ಬಾರಿ ಕನ್ನಡ ಅನುವಾದದಲ್ಲಿ ತಪ್ಪಾದಾಗ ರಚಿಸಿರುವ ಸಮಿತಿಯು ಸಂಪೂರ್ಣ ವರದಿಯನ್ನು ನೀಡಿದೆಯೇ ; ನೀಡಿದ್ದಲ್ಲಿ, ವರದಿಯ ಪ್ರತಿಯನ್ನು ನೀಡುವುದು ; ಈ ಸಮಿತಿಯು ಮಾಡಿರುವ ಶಿಫಾರಸ್ಸುಗಳೇನು ; (ವಿವರ ನೀಡುವುದು)

(ಆ) ಸಮಿತಿಯು ವರದಿ ನೀಡಿದ ನಂತರವೇ ಫಲಿತಾಂಶ ಪ್ರಕಟಿಸಲಾಗಿತ್ತೇ ಅಥವಾ ವರದಿ ನೀಡುವ ಮುನ್ನವೇ ಫಲಿತಾಂಶ ಪ್ರಕಟಿಸಲಾಗಿತ್ತೇ ;

(ಇ) ಕೆ.ಪಿ.ಎಸ್.ಸಿ. ಯಲ್ಲಿ ಈ ರೀತಿ ಸಮಸ್ಯೆಗಳು ಉಂಟಾಗಲು ಕಾರಣವೇನು ; ಇದರ ಸುಧಾರಣೆಗೆ ಸರ್ಕಾರ ಏನು ಕ್ರಮ ಕೈಗೊಂಡಿದೆ ;

(ಈ) ಈ ಬಗ್ಗೆ ತಪ್ಪಿತಸ್ಥರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗಿದೆಯೇ ? (ವಿವರ ಒದಗಿಸುವುದು)

## ರಾಜ್ಯ ಸರ್ಕಾರಿ ನೌಕರರ ವೇತನ/ಭತ್ಯೆಗಳ ಪಾವತಿ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೦೬ (೨೭೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ನೌಕರರ ವೇತನ ಭತ್ಯೆಗಳ ಪಾವತಿ ಬಿಲ್ಲುಗಳು ವಿಳಂಬವಾಗುತ್ತಿರಲು ಕಾರಣಗಳೇನು ; (ವಿವರ ನೀಡುವುದು)

(ಆ) ಬಾಕಿ ಬಿಲ್ಲುಗಳ ಪಾವತಿಗೆ ಆರ್ಥಿಕ ಇಲಾಖೆ ಅನುಮತಿ ನೀಡಿರುವುದಿಲ್ಲವೇ ?

(ಇ) ಕೆಲವು ಇಲಾಖೆಗಳಲ್ಲಿ ಸಂಬಳವನ್ನು ಕಾಂಟಿಜೆನ್ಸಿ (ಏಜೆನ್ಸಿ) ಲೆಕ್ಕಶೀರ್ಷಿಕೆಯಲ್ಲಿ ಪಾವತಿ ಮಾಡುತ್ತಿದ್ದು ಹಣ ಬಿಡುಗಡೆಯಾಗದಿದ್ದರೆ ವೇತನ ಪಾವತಿಯಾಗುವುದಿಲ್ಲವಾದ್ದರಿಂದ ಈ ಬಗ್ಗೆ ಅಗತ್ಯ ಮಾರ್ಪಾಡು ಮಾಡಲು ಏನು ಕ್ರಮ ವಹಿಸಲಾಗಿದೆ ;

(ಈ) ಹೆಚ್.ಆರ್.ಎಂ.ಎಸ್. ಮಾಹಿತಿಯಂತೆ ಎಷ್ಟು ನೌಕರರಿಗೆ ೨೦೨೪ರ ವೇತನ/ಭತ್ಯೆ ಪಾವತಿಗೆ ಬಾಕಿಯಿದೆ ; ಬಾಕಿ ಇರುವ ವೇತನ/ಭತ್ಯೆಗಳನ್ನು ಯಾವಾಗ ಪಾವತಿಸಲಾಗುವುದು ?

## ಮಂಡ್ಯದಲ್ಲಿರುವ ಕಾವೇರಿ ನೀರಾವರಿ ನಿಗಮಕ್ಕೆ ಸೇರಿದ ವಸತಿ ಗೃಹಗಳು ಶಿಥಿಲವಾಗಿರುವ ಕುರಿತು

**ಶ್ರೀ ಮಧು ಜಿ.ಮಾದೇಗೌಡ (ಪದವೀಧರರ ಕ್ಷೇತ್ರ) :-**

೨೦೭ (೨೧೬) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯದ ಅಶೋಕನಗರದಲ್ಲಿರುವ ಕಾವೇರಿ ನೀರಾವರಿ ನಿಗಮಕ್ಕೆ ಸೇರಿರುವ ಬಹುತೇಕ ವಸತಿ ಗೃಹಗಳು ಶಿಥಿಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇದ್ದಲ್ಲಿ, ಸದರಿ ಸ್ಥಳದಲ್ಲಿ ವಸತಿ ಗೃಹಗಳನ್ನು ಪುನರ್ ನಿರ್ಮಾಣ ಮಾಡುವ ಕುರಿತು ಸರ್ಕಾರದ ನಿಲುವೇನು ;

(ಇ) ಇಲ್ಲಿ ನಿರ್ಮಿಸಲ್ಪಟ್ಟಿರುವ ವಸತಿ ಗೃಹಗಳ ಸಂಖ್ಯೆ ಎಷ್ಟು; ಈ ವಸತಿ ಗೃಹಗಳನ್ನು ಯಾವ ವರ್ಷ ನಿರ್ಮಿಸಲಾಗಿದೆ; ಇದರ ಒಟ್ಟು ವಿಸ್ತೀರ್ಣ ಎಷ್ಟು;

(ಈ) ನಿರ್ಮಿಸಲ್ಪಟ್ಟಿರುವ ವಸತಿ ಗೃಹಗಳ ಬಾಳಿಕೆ ಅವಧಿ (Lifetime Drability Period) ಎಷ್ಟು;

(ಉ) ಪ್ರಸ್ತುತ ಉಪಯೋಗಿಸುತ್ತಿರುವ, ಖಾಲಿಯಿರುವ ಹಾಗೂ ಉಪಯೋಗಕ್ಕೆ ಯೋಗ್ಯವಲ್ಲದ ವಸತಿ ಗೃಹಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಊ) ಕಳೆದ ೫ ವರ್ಷಗಳಲ್ಲಿ ಇಲ್ಲಿನ ವಸತಿ ಗೃಹಗಳ ದುರಸ್ತಿ, ನಿರ್ವಹಣೆಗಾಗಿ ಭರಿಸಲಾದ ವೆಚ್ಚ ಎಷ್ಟು? (ವರ್ಷವಾರು ಮಾಹಿತಿ ನೀಡುವುದು)

## ಸುಳ್ಳು ಸುದ್ದಿ ಪ್ರಸಾರ ತಡೆ ಕುರಿತು

**ಶ್ರೀ ಮಧು ಜಿ.ಮಾದೇಗೌಡ (ಪದವೀಧರರ ಕ್ಷೇತ್ರ) :-**

೨೦೮ (೨೧೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) "ದಾರಿ ತಪ್ಪಿಸುವ ಇಲ್ಲವೇ ಸುಳ್ಳು ಸುದ್ದಿ'ಗಳ ಪ್ರಕಟಣೆ ಅಥವಾ ಪ್ರಸಾರ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು; (ವರ್ಷವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಪೈಕಿ ಎಷ್ಟು ಪ್ರಕರಣಗಳು ವಿಚಾರಣೆ ಹಂತದಲ್ಲಿವೆ ಹಾಗೂ ಎಷ್ಟು ಪ್ರಕರಣಗಳಲ್ಲಿ ಶಿಕ್ಷೆಯಾಗಿದೆ ;

(ಇ) ರಾಜ್ಯದಲ್ಲಿ ಸುಳ್ಳು ಸುದ್ದಿ ಪ್ರಸಾರ ಹಿನ್ನೆಲೆಯಲ್ಲಿ ಯಾವುದಾದರೂ 'ಯು ಟ್ಯೂಬ್' ಚಾನೆಲ್‌ಗಳನ್ನು ನಿಷೇಧಿಸಲಾಗಿದೆಯೇ ; ಇದ್ದಲ್ಲಿ, ಅವುಗಳಾವುವು ಹಾಗೂ ಯಾವ ಕಾರಣಕ್ಕಾಗಿ ಇವುಗಳನ್ನು ನಿಷೇಧಿಸಲಾಗಿದೆ ; (ವಿವರ ನೀಡುವುದು)

(ಈ) ಸಾಮಾಜಿಕ ಜಾಲತಾಣ ಸೇರಿದಂತೆ ಇನ್ನಿತರ ಮೂಲಗಳ ಮೂಲಕ ಸುಳ್ಳು ಸುದ್ದಿ ಪ್ರಸರಣ ತಡೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಸುಳ್ಳು ಸುದ್ದಿ ಪ್ರಸಾರ ಮಾಡುವವರ ವಿರುದ್ಧ ಕೈಗೊಳ್ಳಬಹುದಾದ, ಕಾನೂನಾತ್ಮಕವಾಗಿ ವಿಧಿಸಬಹುದಾದ ಶಿಕ್ಷೆ ಮತ್ತು ದಂಡನೆ ಕ್ರಮಗಳೇನು ?

## ಕರ್ನಾಟಕ ಕೇಡರ್‌ನ IAS, IPS & IFS ಹುದ್ದೆಗಳ ಕುರಿತು

**ಶ್ರೀ ಮಧು ಜಿ.ಮಾದೇಗೌಡ (ಪದವೀಧರರ ಕ್ಷೇತ್ರ) :-**

೨೦೯ (೨೧೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯಕ್ಕೆ ಮಂಜೂರಾದ IAS, IPS & IFS (Indian Forest Service) ಹುದ್ದೆಗಳ ಸಂಖ್ಯೆ ಎಷ್ಟು; ಇದರಲ್ಲಿ ನೇರ ನೇಮಕಾತಿ ಮತ್ತು ಪದನ್ನೋತಿ ಮೂಲಕ ಭರ್ತಿ ಮಾಡಬೇಕಾದ ಹುದ್ದೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಪ್ರಸ್ತುತ ಭರ್ತಿ ಆಗಿರುವ ಮತ್ತು ಖಾಲಿ ಇರುವ ಹುದ್ದೆಗಳ (ನೇರ ನೇಮಕಾತಿ ಮತ್ತು ಪದೋನ್ನತಿ ಮೂಲಕ) ಸಂಖ್ಯೆ ಎಷ್ಟು;

(ಇ) ಈ ಪೈಕಿ ಕರ್ನಾಟಕ ಕೇಡರ್‌ಗೆ ಸೇರಿದ, ಕೇಂದ್ರ ಸೇವೆಗೆ ತೆರಳಿರುವ IAS, IPS & IFS ಅಧಿಕಾರಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಈ) ರಾಜ್ಯ ಸೇವೆಯಲ್ಲಿ ಇರುವಾಗಲೇ ಅಕಾಲಿಕ ಮರಣಕ್ಕೆ ತುತ್ತಾದವರು ಹಾಗೂ ಸೇವಾವಧಿ ಪೂರ್ಣಗೊಳಿಸುವ ಮೊದಲೇ ಕೆಲಸಕ್ಕೆ ರಾಜೀನಾಮೆ ಸಲ್ಲಿಸಿರುವುದು ಸೇರಿದಂತೆ ನಾನಾ ಕಾರಣಗಳಿಗಾಗಿ ಹುದ್ದೆ ತೊರೆದ IAS, IPS & IFS ಅಧಿಕಾರಿಗಳ ಸಂಖ್ಯೆ ಎಷ್ಟು? (ಸಂಪೂರ್ಣ ವಿವರ ನೀಡುವುದು)

## ರಾಜ್ಯದ ನೀರಾವರಿ ಜಲಾಶಯ/ಅಣೆಕಟ್ಟು ಸ್ಥಳಗಳಲ್ಲಿ ಉದ್ಯಾನ

## ಅಭಿವೃದ್ಧಿಪಡಿಸುವ ಕುರಿತು

**ಶ್ರೀ ಮಧು ಜಿ.ಮಾದೇಗೌಡ (ಪದವೀಧರರ ಕ್ಷೇತ್ರ) :-**

೨೧೦ (೨೧೯) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ವಿವಿಧ ನೀರಾವರಿ ಜಲಾಶಯ/ಅಣೆಕಟ್ಟು ಸ್ಥಳಗಳಲ್ಲಿ ಉದ್ಯಾನ/ಉಪವನಗಳ ಅಭಿವೃದ್ಧಿಪಡಿಸಲು ಸರ್ಕಾರ ಯೋಜನೆ ರೂಪಿಸಿದೆಯೇ ;

(ಆ) ಇದ್ದಲ್ಲಿ, ರಾಜ್ಯದ ಯಾವ ಯಾವ ನೀರಾವರಿ ಜಲಾಶಯ/ ಅಣೆಕಟ್ಟು ಸ್ಥಳಗಳಲ್ಲಿ ಉದ್ಯಾನ/ಉಪವನಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ಈ ಸಂಬಂಧ ಉನ್ನತ ಮಟ್ಟದ ಸಮಿತಿಯನ್ನು ರಚಿಸಲು ಸರ್ಕಾರ ಉದ್ದೇಶಿಸಿದೆಯೇ; ಇದ್ದಲ್ಲಿ, ಈ ಬಗ್ಗೆ ಮಾಹಿತಿ ನೀಡುವುದು ;

(ಈ) ಇದುವರೆವಿಗೂ ಉದ್ಯಾನ/ಉಪವನಗಳನ್ನು ಯಾವ ಯಾವ ಜಲಾಶಯ/ಅಣೆಕಟ್ಟು ಸ್ಥಳಗಳಲ್ಲಿ ನಿರ್ಮಿಸಲಾಗಿದೆ ; ಇವುಗಳ ನಿರ್ವಹಣೆಯ ಜವಾಬ್ದಾರಿ ಯಾರದ್ದು ಹಾಗೂ ಉದ್ಯಾನಗಳ ವಾರ್ಷಿಕ ನಿರ್ವಹಣಾ ವೆಚ್ಚ, ಇಲ್ಲಿಗೆ ಆಗಮಿಸುತ್ತಿರುವ ಪ್ರವಾಸಿಗರ ಸಂಖ್ಯೆ ಹಾಗೂ ಅವರಿಂದ ಸಂಗ್ರಹಿಸಲಾದ ಶುಲ್ಕದ ಒಟ್ಟು ಮೊತ್ತ ಎಷ್ಟು? (ಉದ್ಯಾನವಾರು ಮಾಹಿತಿ ನೀಡುವುದು)

## ಮಂಗಳೂರು ಪಿಲಿಕುಳ ಪ್ರಾಧಿಕಾರವನ್ನು ಪಿಲಿಕುಳ ಮಂಡಳಿಯನ್ನಾಗಿ ರಚಿಸುವ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೧೧ (೨೪೦) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಗಳೂರಿನಲ್ಲಿ ಪಿಲಿಕುಳ ಪ್ರಾಧಿಕಾರವನ್ನು ಪಿಲಿಕುಳ ಮಂಡಳಿಯನ್ನಾಗಿ ಮಾರ್ಪಡಿಸುವ ಬಗ್ಗೆ ಮನವಿ ಸರ್ಕಾರಕ್ಕೆ ಈಗಾಗಲೇ ಸಲ್ಲಿಕೆಯಾಗಿದ್ದು ಈ ಕುರಿತು ಪ್ರಸ್ತಾವನೆ ಯಾವ ಹಂತದಲ್ಲಿದೆ ಮತ್ತು ಸದರಿ ಕಡತವು ಯಾರ ಹಂತದಲ್ಲಿ ವಿಲೇವಾರಿಗೆ ಬಾಕಿಯಿದೆ; ಈ ರೀತಿ ಬಾಕಿಂಯಾಗಲು ಕಾರಣಗಳೇನು; ಈ ಪ್ರಸ್ತಾವನೆಯ ಬಗ್ಗೆ ಅಗತ್ಯ ಕ್ರಮವಹಿಸಲು ಕಾಲಮಿತಿ ನಿಗಧಿಪಡಿಸಲಾಗಿದೆಯೇ;

(ಆ) ಪಿಲಿಕುಳ ಪ್ರಾಧಿಕಾರವನ್ನು ಪಿಲಿಕುಳ ಮಂಡಳಿಯನ್ನಾಗಿ ಮಾಡುವ ಬಗ್ಗೆ ಈಗಿರುವ ಪಿಲಿಕುಳ ಪ್ರಾಧಿಕಾರದಿಂದ ಮತ್ತು ಅದಕ್ಕೆ ಸಂಬಂಧಪಟ್ಟ ಇಲಾಖೆಗಳಿಂದ ಅಗತ್ಯ ಮಾಹಿತಿಯನ್ನು ಸಂಗ್ರಹಿಸಲಾಗಿದೆಯೇ; ಹಾಗೆಯೇ ಕಾನೂನು ಸಮಾಲೋಚನೆ ಮಾಡಿ ಕಾರ್ಯ ಸಾಧ್ಯತಾ ವರದಿಯನ್ನು (Feasibilty report) ತಯಾರಿಸಲಾಗಿದೆಯೇ; ಇಲ್ಲದಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ತಯಾರಿಸಲಾಗುವುದು;

(ಇ) ಪಿಲಿಕುಳ ಪ್ರಾಧಿಕಾರದಲ್ಲಿ ಮೃಗಾಲಯ ಮತ್ತು ವಿಜ್ಞಾನ ಕೇಂದ್ರಗಳ ನಿರ್ವಹಣೆ ಮೇಲ್ವಿಚಾರಣೆಗೆ ಪೂರ್ಣಕಾಲಿಕ ಅಧಿಕಾರಿಗಳ ಅನುಪಸ್ಥಿತಿಯ ಕಾರಣ ಪಿಲಿಕುಳ ನಿಸರ್ಗಧಾಮದ ನೈಜ ತಳ ಹಂತದ ವರದಿ (ground report) ಸಂಬಂಧಪಟ್ಟವರಿಗೆ ತಲುಪದೆ ಅಗತ್ಯ ಕ್ರಮವಹಿಸಲು ಇಲಾಖೆಗೆ ಸಾಧ್ಯವಾಗದಿರುವುದರಿಂದ ಪೂರ್ಣಕಾಲಿಕ ಅಧಿಕಾರಿಗಳ ನೇಮಕ ಬಗ್ಗೆ ಇಲಾಖೆ ಏನು ಕ್ರಮವಹಿಸುತ್ತಿದೆ;

(ಈ) ಪಿಲಿಕುಳ ನಿಸರ್ಗಧಾಮದ ಸಿಬ್ಬಂದಿಗಳಿಗೆ ಕಳೆದ ೨೦ ವರ್ಷಗಳಿಂದ ವೃಂದ ಮತ್ತು ನೇಮಕಾತಿ ನಿಯಮಗಳನ್ನು

ರಚಿಸದೆ ಇರಲು ಕಾರಣಗಳೇನು; ಈ ವಿಷಯ ಪ್ರಸ್ತುತ ಇಲಾಖೆಯ ಗಮನಕ್ಕೆ ಬಂದಿದ್ದು ಇನ್ನು ಎಷ್ಟು ಅವಧಿಯೊಳಗೆ ಸಮಸ್ಯೆಗೆ ಪರಿಹಾರ ರೂಪಿಸಲು ಕ್ರಮವಹಿಸಲಾಗುವುದು ?

## ಕರ್ನಾಟಕ ರಾಜ್ಯದಲ್ಲಿ ಎಲ್ಲಾ ಇಲಾಖೆಗಳಿಗೆ ವೃಂದ ಮತ್ತು ನೇಮಕಾತಿ ನಿಯಮಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೧೨ (೨೪೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಸುಮಾರು 42 ಇಲಾಖೆಗಳಲ್ಲಿ 22 ಇಲಾಖೆಗಳಿಗೆ ವೃಂದ ಮತ್ತು ನೇಮಕಾತಿ ನಿಯಮಗಳು ಇಲ್ಲದೆ ಮತ್ತು ಅದನ್ನು ರಚಿಸಲು ಸೂಚಿಸಲಾಗಿದ್ದ ಆದೇಶದಂತೆ ಎಷ್ಟು ಇಲಾಖೆಗಳಿಗೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಲಾಗಿದೆ;

(ಆ) ಬಾಕಿ ಉಳಿದಿರುವ ಇಲಾಖೆಗಳಿಗೆ ಮತ್ತು ಸಂಸ್ಥೆಗಳಿಗೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಯಾವಾಗ ರಚಿಸಲಾಗುವುದು;

(ಇ) ರಾಜ್ಯದಲ್ಲಿನ ಯಾವ್ಯಾವ ಇಲಾಖೆ ಮತ್ತು ಸರ್ಕಾರಿ, ಅರೆ ಸರ್ಕಾರಿ ಸಂಸ್ಥೆಗಳಿಗೆ ಹೆಚ್.ಆರ್.ಎಂ.ಎಸ್. ಮೂಲಕ ವೇತನ/ ಭತ್ಯೆ ನೀಡಲಾಗುತ್ತಿದೆ;

(ಈ) ಹೆಚ್.ಆರ್.ಎಂ.ಎಸ್. ರಹಿತವಾಗಿ ವೇತನವಾಗುವ ಸರ್ಕಾರಿ ಸಂಸ್ಥೆಗಳು ಯಾವುವು? ಇವುಗಳನ್ನು ಎಚ್.ಆರ್.ಎಂ.ಎಸ್. ನ ವ್ಯಾಪ್ತಿಗೆ ತರಲಾಗುವುದೇ;

(ಉ) ವೃಂದ ಮತ್ತು ನೇಮಕಾತಿ ನಿಯಮಗಳಿಲ್ಲದೆ ಹೆಚ್.ಆರ್.ಎಂ.ಎಸ್. ಮೂಲಕ ವೇತನ ಪಾವತಿಯಿಲ್ಲದೆ ಹಲವಾರು ಇಲಾಖೆಗಳ

ಸರ್ಕಾರಿ ನೌಕರರು ಧೀರ್ಘ ಅವಧಿಯಿಂದ ಸೂಕ್ತ ವೇತನ ಶ್ರೇಣಿಯಿಲ್ಲದಿರುವ ಹಾಗೂ ವೇತನ ಪಾವತಿ ತಡವಾಗುತ್ತಿರುವ ಸಮಸ್ಯೆಯನ್ನು ಪರಿಹರಿಸಲು ಏನು ಕ್ರಮ ವಹಿಸಲಾಗಿದೆ ? (ವಿವರ ನೀಡುವುದು)

## ಕರ್ನಾಟಕದಲ್ಲಿ ಪರಿಶಿಷ್ಟ ಪಂಗಡಗಳ ಪಟ್ಟಿಯನ್ನು ಮಾರ್ಪಾಡು ಮಾಡುವ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೧೩ (೨೪೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕದಲ್ಲಿ ಏಕೀಕರಣದ ನಂತರ ಇಲ್ಲಿಯವರೆಗೆ ಎಷ್ಟು ಪರಿಶಿಷ್ಟ ಸಮುದಾಯಗಳ ಹೆಸರನ್ನು ಕೇಂದ್ರ ಪರಿಶಿಷ್ಟ ಪಂಗಡಗಳ ಪಟ್ಟಿಗೆ ಸೇರಿಸಲು ಅಥವಾ ಪಟ್ಟಿಯಿಂದ ತೆಗೆಯಲು ಶಿಫಾರಸ್ಸು ಮಾಡಲಾಗಿದೆ ; ಹೀಗೆ ಶಿಫಾರಸ್ಸು ಮಾಡಲು ಪರಿಗಣಿಸಿದ ಮಾನದಂಡಗಳು ಯಾವುವು ; ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಲು ರಾಜ್ಯಕ್ಕೆ ಅವಕಾಶವಿರುವ ನಿಯಮಗಳು ಯಾವುವು ;

(ಆ) ಪರಿಶಿಷ್ಟ ಸಮುದಾಯಗಳ ಹೆಸರನ್ನು ಕೇಂದ್ರ ಪರಿಶಿಷ್ಟ ಪಂಗಡಗಳ ಪಟ್ಟಿಗೆ ಸೇರಿಸಲು ಅಥವಾ ಪಟ್ಟಿಯಿಂದ ತೆಗೆಯುವ ಬಗ್ಗೆ ಎಷ್ಟು ಸಮುದಾಯಗಳ ಕುರಿತಂತೆ ಮೈಸೂರಿನ ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯ (ಟ್ರೈಬಲ್ ರಿಸರ್ಚ್ ಇನ್ಸ್ಟಿಟ್ಯೂಟ್) ಮೂಲಕ ಕುಲಶಾಸ್ತ್ರೀಯ ಸಂಶೋಧನೆ ನಡೆಸಿ ವರದಿಯನ್ನು ಸರ್ಕಾರ ಪಡೆದುಕೊಂಡಿದೆ ;

(ಇ) ಹೀಗೆ ಸರ್ಕಾರ ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯ ಮೂಲಕ ಅಥವಾ ಇತರ ಸಂಸ್ಥೆಗಳಿಂದ ಸರ್ಕಾರಕ್ಕೆ ಸಲ್ಲಿಸಲ್ಪಟ್ಟ ವರದಿಗಳಲ್ಲಿ ಎಷ್ಟು ವರದಿಗಳನ್ನು ಸರ್ಕಾರ ಒಪ್ಪಿಕೊಂಡಿದೆ ಮತ್ತು ತಿರಸ್ಕರಿಸಿದೆ ; (ಈ ಕುರಿತಂತೆ ಇಲಾಖೆಯು ಕೈಗೊಂಡ ಕ್ರಮಗಳ ಮಾಹಿತಿ ನೀಡುವುದು)

(ಈ) ಕರ್ನಾಟಕ ರಾಜ್ಯದ ಕರಾವಳಿ ಭಾಗದ ಕುಡುಬಿ ಸಮುದಾಯದ ಬಗ್ಗೆ ಎರಡು ವಿಭಿನ್ನ ಕುಲಶಾಸ್ತ್ರೀಯ ಸಂಶೋಧನಾ ವರದಿಗಳಾದ ಪ್ರೋ. ಟಿ ಟಿ ಬಸವನ ಗೌಡ (ಕವಿವಿ) ಮತ್ತು ಪ್ರೋ. ಮನೋಹರ್ ಯಾದವ್ ಇವರುಗಳಿಂದ (ಐಸೆಕ್) ಸರ್ಕಾರ ಸ್ವೀಕರಿಸಿದ್ದ ಸಂದರ್ಭಗಳಲ್ಲಿ ಯಾವ ವರದಿಯನ್ನು ಪರಿಗಣಿಸಿ ಯಾವ ಕ್ರಮವಹಿಸಲಾಗಿದೆ ?

## ಕರ್ನಾಟಕ ರಾಜ್ಯದಲ್ಲಿ ದಾಖಲಾಗುವ ಪ್ರಥಮ ಮಾಹಿತಿ ವರದಿಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೧೪ (೨೪೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯದ ಪೊಲೀಸ್ ಇಲಾಖೆಯಲ್ಲಿ ಕಾನೂನು ಸುವ್ಯವಸ್ಥೆ ಮತ್ತು ಪ್ರಕೃತಿ ವಿಕೋಪ ಹಾಗೂ ಇತರ ದುರ್ಘಟನೆಗಳ ಕುರಿತಂತೆ ವಾರ್ಷಿಕವಾಗಿ ಪೊಲೀಸ್ ಇಲಾಖೆಯಲ್ಲಿ ದಾಖಲಾಗುವ ಪ್ರಥಮ ಮಾಹಿತಿ ವರದಿಗಳ ಸಂಖ್ಯೆಯೆಷ್ಟು ; ಈ ಕುರಿತಂತೆ ಜಿಲ್ಲಾವಾರು ಪ್ರಥಮ ಮಾಹಿತಿ ವಿಧವಾರು (Type of FIR) ವರದಿಗಳು ಲಭ್ಯವಿದೆಯೇ ; ಇದ್ದಲ್ಲಿ, ಕ್ರೂಢೀಕೃತ ವರದಿಯನ್ನು ನೀಡುವುದು ;

(ಆ) ಪೊಲೀಸ್ ಇಲಾಖೆಯಲ್ಲಿ ದಾಖಲಾಗುವ ಪ್ರಥಮ ಮಾಹಿತಿ ವರದಿಗಳ ಆಧಾರದಲ್ಲಿ ಹೆಚ್ಚು ಪ್ರಕರಣಗಳು ವರದಿಯಾಗುವ ವಿಷಯ ಮತ್ತು ಕಾರಣಗಳಿಗೆ ಸಂಬಂಧಿಸಿದಂತೆ ಆಯಾಯ ಇಲಾಖೆಗಳಿಗೆ ಸೂಕ್ತ ಪರಿಹಾರ ಕ್ರಮ ಮತ್ತು ಪ್ರಕರಣಗಳ ಸಂಖ್ಯೆಗಳನ್ನು ನಿಯಂತ್ರಿಸುವ ಕ್ರಮವಹಿಸುವ ಬಗ್ಗೆ ಅಗತ್ಯ ಮಾಹಿತಿಯನ್ನು ಮುಖ್ಯ ಕಾರ್ಯದರ್ಶಿಗಳ ಹಾಗೂ ಜಿಲ್ಲಾಧಿಕಾರಿಗಳ ಮೂಲಕ ನೀಡಲಾಗುತ್ತಿದೆಯೇ ;

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ದಾಖಲಾದ ಒಟ್ಟು ಪ್ರಥಮ ಮಾಹಿತಿ, ವರದಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಈ) ಅವುಗಳಲ್ಲಿ ಈವರೆಗೆ ವರದಿಯಾದ ಪ್ರಕೃತಿ ವಿಕೋಪಗಳಾದ ನೆರೆ, ಮನೆ ಕುಸಿತ, ಮರಗಳು ಬಿದ್ದು ಮಾರಣಾಂತಿಕ ಮತ್ತು ಸ್ವತ್ತು ಹಾನಿ, ಸಿಡಿಲು ಅಪಘಾತ ಇತ್ಯಾದಿಗಳಿಗೆ ಸಂಬಂಧಿಸಿದ ಪ್ರಕರಣಗಳು ಎಷ್ಟು ;

(ಉ) ಈ ಕುರಿತು ಮುಂದಿನ ದಿನಗಳಲ್ಲಿ ಇಂತಹ ಪ್ರಕರಣಗಳ ನಿಯಂತ್ರಣಕ್ಕಾಗಿ ಆಯಾಯ ಇಲಾಖೆಗಳಿಗೆ ಸೂಕ್ತ ಪರಿಹಾರ ಕ್ರಮ ರೂಪಿಸುವ ಬಗ್ಗೆ ಏನು ನಿರ್ದೇಶನ ನೀಡಲಾಗಿದೆ ; ಏನು ಕ್ರಮವಹಿಸಲಾಗಿದೆ ? (ವಿವರ ನೀಡುವುದು)

## ನಾಗರೀಕ ಸೇವೆಗಳ ದರ ಏರಿಕೆ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೧೫ (೩೦೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಸರ್ಕಾರವು ಕಳೆದ ಎರಡು ವರ್ಷಗಳಲ್ಲಿ ತಾನು ನೀಡುವ ನಾಗರೀಕ ಸೇವೆಗಳ ದರ ಏರಿಕೆ ಸೇರಿದಂತೆ ಯಾವ ಯಾವ ತೆರಿಗೆಗಳನ್ನು ಹೆಚ್ಚು ಮಾಡಲಾಗಿದೆ ; (ದಿನಾಂಕವಾರು ಮಾಹಿತಿ ಒದಗಿಸುವುದು)

(ಆ) ಪೆಟ್ರೋಲ್, ಡೀಸೆಲ್, ವಿದ್ಯುತ್, ನೀರು, ಹಾಲು ನೋಂದಣಿ ಶುಲ್ಕ ಸೇರಿದಂತೆ ಎಲ್ಲಾ ಸೇವೆಗಳ ಮತ್ತು ಪದಾರ್ಥಗಳ ದರ ಏರಿಕೆಗಳ ಬಗ್ಗೆ ದಿನಾಂಕವಾರು ಮಾಹಿತಿ ಒದಗಿಸುವುದು ;

(ಇ) ಈ ವಸ್ತುಗಳ ಏರಿಕೆಗಳಿಂದ ಸರ್ಕಾರಕ್ಕೆ ಬರುತ್ತಿರುವ ಆದಾಯದ ಪ್ರಮಾಣದಲ್ಲಿ ಎಷ್ಟು ಪಟ್ಟು ಹೆಚ್ಚಾಗಿದೆ ;

(ಈ) ಹಿಂದಿನ ದರಕ್ಕೆ ಪ್ರಸ್ತುತ ದರವನ್ನು ಹೋಲಿಕೆ ಮಾಡಿದ್ದಲ್ಲಿ ಆಗಿರುವ ಆದಾಯ ಎಷ್ಟು ; (ವ್ಯತ್ಯಾಸದ ಮಾಹಿತಿ ಒದಗಿಸುವುದು)

(ಉ) ನಷ್ಟವಾಗಿದ್ದಲ್ಲಿ ಅದರ ಮಾಹಿತಿಯನ್ನೂ ನೀಡುವುದು ಮತ್ತು ನಷ್ಟದ ಕೊರತೆಯನ್ನು ನೀಗಿಸಲು ಕೈಗೊಂಡಿರುವ ಕ್ರಮಗಳೇನು ?

## ಮೆಟ್ರೋ ದರ ಏರಿಕೆ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೧೬ (೩೦೨) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನಮ್ಮ ಮೆಟ್ರೋಗೆ ಸಂಬಂಧಿಸಿದಂತೆ ಕೇಂದ್ರ ಮತ್ತು ರಾಜ್ಯ ಸರ್ಕಾರದ ನಡುವೆ ಇರುವ ಬಡಂಬಡಿಕೆಗಳೇನು ;

(ಆ) ನಮ್ಮ ಮೆಟ್ರೋ ರೈಲು ಟಿಕೆಟ್ ದರ ದುಬಾರಿಯಿಂದ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಟಿಕೆಟ್ ದರ ದುಬಾರಿಯಾಗುವುದಕ್ಕೆ ಕಾರಣವಾದ ಅಂಶಗಳೇನು ;

(ಈ) ಮೆಟ್ರೋ ದರ ಕಡಿಮೆ ಮಾಡಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆಯೇ ?

## ಮದ್ಯವ್ಯಸನಿಗಳಿಂದ ಆಗುತ್ತಿರುವ ತೊಂದರೆಗಳ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೧೭ (೩೦೩) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಕೇರಳ ಗಡಿಗೆ ಹೊಂದಿಕೊಂಡಿರುವ ಮೈಸೂರು ಜಿಲ್ಲೆಯ ಬಾವಲಿ, ಕಡೆಗದ್ದೆ, ತಿಮ್ಮನಹೊಸಹಳ್ಳಿ, ಡಿ.ಬಿ ಕುಪ್ಪೆ ಆನೆಮಾಲದಲ್ಲಿರುವ ವಿವಿಧ ಹಾಡಿಗಳವರು ಮದ್ಯದಂಗಡಿಗಳನ್ನು ಮುಚ್ಚಿಸುವಂತೆ ಹಾಗೂ ಮದ್ಯವ್ಯಸನಿಗಳಿಂದ ಆಗುತ್ತಿರುವ ತೊಂದರೆಯನ್ನು ತಪ್ಪಿಸುವಂತೆ ಕಳೆದ ೧೦ ವರ್ಷಗಳಿಂದ ಸರ್ಕಾರವನ್ನು ಒತ್ತಾಯಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಪರಿಸರ ಸೂಕ್ಷ್ಮ ವಲಯದಲ್ಲಿರುವ ಈ ಸ್ಥಳದಲ್ಲಿ ನಿಯಮ ಮೀರಿ ಸಿಎಲ್–೭ ಪರವಾನಿಗೆ ನೀಡಿರುವುದರ ಪರಿಣಾಮ ಈ ಸ್ಥಳದಲ್ಲಿ ನಿವಾಸಿಗಳು ಕುಡುಕರ ಹಾವಳಿಯಿಂದ ಬೇಸತ್ತು ಆತಂಕದಿಂದ ಜೀವನ ನಿರ್ವಹಣೆ ಮಾಡುತ್ತಿರುವುದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಕೇರಳದ ಯುವಕರು ಮದ್ಯದ ಜೊತೆಗೆ ಗಾಂಜಾ ಸೇವಿಸಿ ಅರಣ್ಯ ಪ್ರವೇಶಿಸಿ ಅನಾಹುತ ಎಸಗುತ್ತಿದ್ದು ಇದನ್ನು ನಿಯಂತ್ರಿಸಲು ಹಾಗೂ ಅದಕ್ಕೆ ಕಡಿವಾಣ ಹಾಕಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಬೆಂಗಳೂರು ನಗರದಲ್ಲಿರುವ ಕೊಳಚೆ ಪ್ರದೇಶಗಳ ಅಭಿವೃದ್ಧಿ ಬಗ್ಗೆ

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೧೮ (೬೯) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದಲ್ಲಿ ಎಷ್ಟು ಕೊಳಚೆ ಪ್ರದೇಶಗಳಿವೆ; ಹಾಗೂ ಅವು ಯಾವ ಯಾವ ಪ್ರದೇಶದಲ್ಲಿವೆ ; (ವಿವರ ನೀಡುವುದು)

(ಆ) ಕೊಳಚೆ ನಿರ್ಮೂಲನಾ ಮಂಡಳಿಯ ಕೊಳಚೆ ಪ್ರದೇಶಗಳ ಅಭಿವೃದ್ಧಿಗೆ ಹಾಕಿಕೊಂಡಿರುವ ಯೋಜನೆಗಳಾವುವು ; ಅದಕ್ಕೆ ಮೀಸಲಿಸಿರುವ ಹಣ ಎಷ್ಟು ;

(ಇ) ಅವುಗಳಲ್ಲಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳಾವುವು ; (ವಿವರ ನೀಡುವುದು)

(ಈ) ಕೊಳಚೆ ನಿರ್ಮೂಲನಾ ಮಂಡಳಿಯಿಂದ ನಿರ್ಮಿಸುತ್ತಿರುವ ಕಟ್ಟಡಗಳ ಗುಣಮಟ್ಟ ಸರಿಯಾಗಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ; ಬಂದಿದ್ದರೆ, ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ?

## ಕಾರಂಜಾ ಯೋಜನೆಗಾಗಿ ಭೂಮಿ ಕಳೆದುಕೊಂಡ ರೈತರಿಗೆ ನ್ಯಾಯ ದೊರಕಿಸಿಕೊಡುವ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೧೯ (೩೨೧) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯ ಕಾರಂಜಾ ಯೋಜನೆ ಪ್ರಾರಂಭವಾಗಿ ಹಲವು ವರ್ಷಗಳು ಕಳೆದರೂ ಸಂತ್ರಸ್ಥ ರೈತರಿಗೆ ಇನ್ನು ನ್ಯಾಯ ಸಿಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಭೂಮಿ ಕಳೆದುಕೊಂಡ ರೈತರಿಗೆ ಸಿಗಬೇಕಾದ ಪರಿಹಾರ ಧನ ಸಿಗದೆ ತೊಂದರೆಗೊಳಗಾಗಿದ್ದು ತ್ವರಿತ ಕ್ರಮಗಳನ್ನು ಸರ್ಕಾರ ಕೈಗೊಳ್ಳದಿರಲು ಕಾರಣಗಳೇನು ;

(ಇ) ಭೂಮಿ ಕಳೆದುಕೊಂಡ ರೈತರಿಗೆ ಮಾನವೀಯತೆ ದೃಷ್ಟಿಯಿಂದ ವೈಜ್ಞಾನಿಕ ಮಾನದಂಡ ಆಧರಿಸಿ ವಿಶೇಷ ಪ್ಯಾಕೇಜ್ ನೀಡಲು ಸರ್ಕಾರ ಕೂಡಲೇ ಕ್ರಮ ಕೈಗೊಳ್ಳಲಾಗುವುದೇ ; ಯಾವ ಕಾಲಮಿತಿಯಲ್ಲಿ ಸಂತ್ರಸ್ಥ ರೈತರಿಗೆ ಪರಿಹಾರ ನೀಡಿ ನ್ಯಾಯ ದೊರಕಿಸಿಕೊಡಲಾಗುವುದು ?

## ಸಂಚಾರಿ ಅಪರಾಧಗಳ ಶುಲ್ಕ ಕಡಿಮೆ ಮಾಡುವ ಬಗ್ಗೆ

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೨೦ (೩೨೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಂಚಾರಿ ಅಪರಾಧಗಳ ಶುಲ್ಕವನ್ನು ಮೊದಲಿಗಿಂತ ಮೂರುಪಟ್ಟು ಹೆಚ್ಚಿಸಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ನೋ ಪಾರ್ಕಿಂಗ್ ಶುಲ್ಕ ದ್ವಿಚಕ್ರ ವಾಹನಗಳಿಗೆ ೫೦೦ ರೂಪಾಯಿ ಇರುವುದನ್ನು ೧೬೦೦ ರೂಪಾಯಿಗೆ ಏರಿಸಿರುವುದರಿಂದ ಸಾರ್ವಜನಿಕರಿಗೆ ಹೊರೆ ಜಾಸ್ತಿಯಾಗಿದ್ದು, ಇದರಿಂದ ತಪ್ಪಿಸಿಕೊಳ್ಳಲು ಪೊಲೀಸರಿಗೆ ಅನಧಿಕೃತವಾಗಿ ಹಣ ನೀಡಿ ವಾಹನ ಬಿಡಿಸಿಕೊಂಡು ಹೋಗುತ್ತಿರುವುದರಿಂದ ಸರ್ಕಾರಕ್ಕೆ ಆದಾಯ ಕಡಿಮೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸರ್ಕಾರವು ನಿಗದಿಪಡಿಸಿರುವ ದಂಡದ ಹಣವನ್ನು ಕಡಿಮೆ ಮಾಡಿ ಸರ್ಕಾರಕ್ಕೆ ಬರುವ ಆದಾಯವನ್ನು ಹೆಚ್ಚಿಸಿಕೊಳ್ಳುವುದರ ಜೊತೆಗೆ ಸಾರ್ವಜನಿಕರಿಗೂ ಆರ್ಥಿಕ ಹೊರೆಯನ್ನು ಕಡಿಮೆ ಮಾಡುವ ಬಗ್ಗೆ ಪರಿಶೀಲನೆ ಮಾಡಲಾಗುವುದೇ ?

## ಸೈಬರ್ ಅಪರಾಧಗಳ ಬಗ್ಗೆ

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೨೧ (೩೨೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಎರಡು ವರ್ಷಗಳಲ್ಲಿ ರಾಜ್ಯದಲ್ಲಿ ಎಷ್ಟು ಸೈಬರ್ ಅಪರಾಧ ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ ;

(ಆ) ಸೈಬರ್ ಅಪರಾಧಗಳ ಬಗ್ಗೆ ತನಿಖೆ ಮಾಡಲು ಎಷ್ಟು ಪೊಲೀಸ್ ಠಾಣೆಗಳಿವೆ; ಎಷ್ಟು ಸಿಬ್ಬಂದಿಗಳು ಕೆಲಸ ಮಾಡುತ್ತಿದ್ದಾರೆ ; ಸಿಬ್ಬಂದಿಗಳ ಕೊರತೆಯಿಂದ ತನಿಖೆಗೆ ಅಡಚಣೆಯಾಗಿದೆಯೇ ;

(ಇ) ಸೈಬರ್ ಅಪರಾಧಗಳ ತನಿಖೆಗೆ ವಿಶೇಷ ತಾಂತ್ರಿಕ ಪರಿಣಿತರನ್ನು ನೇಮಕ ಮಾಡಲಾಗಿದೆ ; ಸಿಬ್ಬಂದಿಗಳಿಗೆ ವಿಶೇಷ ತರಬೇತಿ ನೀಡಲು ಕೈಗೊಂಡ ಕ್ರಮಗಳೇನು ;

(ಈ) ಕಳೆದ ಎರಡು ವರ್ಷಗಳಲ್ಲಿ ವಿಶೇಷವಾಗಿ ಬ್ಯಾಂಕ್ ಖಾತೆಗಳಿಂದ ಗ್ರಾಹಕರ ಹಣ ಅಪಹರಿಸಿರುವ ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಿ ಹಣ ಕಳೆದುಕೊಂಡವರಿಗೆ ಹಣ ಮರಳಿಸಲಾಗಿದೆ ? (ವಿವರ ನೀಡುವುದು)

## ಬೆಂಗಳೂರು ನಗರ ವ್ಯಾಪ್ತಿಗೆ ಬರುವ ರಸ್ತೆಗಳ ಅಭಿವೃದ್ಧಿ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೨೨ (೨೬೭) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರ ವ್ಯಾಪ್ತಿಯ ರಾಷ್ಟ್ರೀಯ ಹೆದ್ದಾರಿ, ರಾಜ್ಯ ಹೆದ್ದಾರಿ, ಜಿಲ್ಲಾ ಹೆದ್ದಾರಿ ಹಾಗೂ ಬಿ.ಬಿ.ಎಂ.ಪಿ. ವ್ಯಾಪ್ತಿಗೆ ಬರುವ ರಸ್ತೆಗಳು ಯಾವುವು ; (ಪೂರ್ಣ ವಿವರ ಒದಗಿಸುವುದು)

(ಆ) ಸದರಿ ರಸ್ತೆಗಳು ಹಾಳಾಗಿದ್ದು, ಇಲ್ಲಿಯವರೆಗೂ ಎಷ್ಟು ರಸ್ತೆಗಳನ್ನು ದುರಸ್ತಿ ಪಡಿಸಲಾಗಿದೆ ; ಇಲ್ಲಿಯವರೆಗೂ ದುರಸ್ತಿ ಕಾರ್ಯ ಕೈಗೊಳ್ಳದೇ ಇರಲು ಕಾರಣವೇನು ; ರಸ್ತೆಗಳ ದುರಸ್ತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ಒದಗಿಸುವುದು)

(ಇ) ದಿನಾಂಕ : ೦೧.೦೬.೨೦೨೩ ರಿಂದ ಇಲ್ಲಿಯವರೆಗೆ ಬೆಂಗಳೂರು ನಗರ ವ್ಯಾಪ್ತಿಗೆ ಬರುವ ರಸ್ತೆಗಳ ಅಭಿವೃದ್ಧಿಗೆ ಎಷ್ಟು ಅನುದಾನ ಮೀಸಲಿಡಲಾಗಿದೆ ; ಈವರೆಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ? (ಸಂಪೂರ್ಣ ವಿವರ ಒದಗಿಸುವುದು)

## ರಾಜ್ಯದಲ್ಲಿರುವ ಪೊಲೀಸ್ ಇನ್ಸ್‌ಪೆಕ್ಟರ್‌ಗಳ ವರ್ಗಾವಣೆ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೨೩ (೨೬೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಳೆದ ೦೩ ವರ್ಷಗಳಿಂದ ವರ್ಗಾವಣೆಯಾಗದೇ ಒಂದೇ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಇನ್ಸ್‌ಪೆಕ್ಟರ್‌ಗಳ ಸಂಖ್ಯೆ ಎಷ್ಟು ; (ಇನ್ಸ್‌ಪೆಕ್ಟರ್ ಹಾಗೂ ಠಾಣೆಗಳ ಜಿಲ್ಲಾವಾರು ವಿವರ ಒದಗಿಸುವುದು)

(ಆ) ಸದರಿ ಇನ್ಸ್‌ಪೆಕ್ಟರ್‌ಗಳನ್ನು ವರ್ಗಾವಣೆ ಮಾಡದಿರಲು ಕಾರಣವೇನು ; (ವಿವರ ಒದಗಿಸುವುದು)

(ಇ) ಇನ್ಸ್‌ಪೆಕ್ಟರ್‌ಗಳನ್ನು ವರ್ಗಾವಣೆ ಮಾಡಲು ಯಾವ ಯಾವ ಮಾನದಂಡಗಳನ್ನು ಅನುಸರಿಸಲಾಗುತ್ತಿದೆ ? (ವಿವರ ಒದಗಿಸುವುದು)

## ಬೆಳಗಾವಿ ಜಿಲ್ಲೆಯಲ್ಲಿ ಕ್ರೀಡಾಂಗಣಗಳನ್ನು ನಿರ್ಮಿಸುವ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೨೨೪ (೩೦೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ನಗರದಲ್ಲಿ ಹಾದು ಹೋಗುವ ರಾಷ್ಟ್ರೀಯ ಹೆದ್ದಾರಿ–೪೮ರ ಪಕ್ಕದಲ್ಲಿ ಹೊಸ ಜಿಲ್ಲಾ ಮಟ್ಟದ ಕ್ರೀಡಾಂಗಣವನ್ನು ನಿರ್ಮಿಸಲು ಸರ್ಕಾರದ ವತಿಯಿಂದ ಯೋಜಿಸಿದ್ದು, ಸದರಿ ಕಾಮಗಾರಿಗೆ ಟೆಂಡರ್ ಕರೆಯಲಾಗಿದೆಯೇ ;

(ಆ) ಇದ್ದಲ್ಲಿ, ಸದರಿ ಕಾಮಗಾರಿಯನ್ನು ಯಾವ ಕಾಲಮಿತಿಯಲ್ಲಿ ಪ್ರಾರಂಭಿಸಲಾಗುವುದು ಮತ್ತು ಪೂರ್ಣಗೊಳಿಸಲಾಗುವುದು ಯಾವಾಗ ;

(ಇ) ಬೆಳಗಾವಿ ಜಿಲ್ಲೆಯ ಯಲ್ಲೂರು ಗ್ರಾಮದ ಹತ್ತಿರ ಸುಮಾರು ೬೬ ಎಕರೆ ಸರ್ಕಾರಿ ಭೂಮಿಯಲ್ಲಿ ಅತ್ಯಾಧುನಿಕ ಅಂತರರಾಷ್ಟ್ರೀಯ ಒಳಾಂಗಣ ಕ್ರೀಡಾಂಗಣ ನಿರ್ಮಿಸಲು ಸರ್ಕಾರದ ವತಿಯಿಂದ ಯೋಜಿಸಿದ್ದು ನಿಜವೇ ;

(ಈ) ಹಾಗಿದ್ದಲ್ಲಿ, ಸದರಿ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು ಮತ್ತು ಯಾವಾಗ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು ;

(ಉ) ಬೆಳಗಾವಿ ನಗರದಲ್ಲಿ ಸರ್ಕಾರದ ವತಿಯಿಂದ ಈ ಹಿಂದೆ ಅಟೋ ನಗರ, ಕನ್ನಬರಗಿಯಲ್ಲಿ ಕ್ರಿಕೆಟ್ ಕ್ರೀಡಾಂಗಣವನ್ನು ನಿರ್ಮಿಸಿ

ಬೆಳಗಾವಿ ಜಿಲ್ಲೆ ಯುವಕರಿಗೆ ಕ್ರಿಕೆಟ್ ಕ್ರೀಡೆಯಲ್ಲಿ ಹೆಚ್ಚಿನ ಅವಕಾಶಗಳನ್ನು ನೀಡಲು ಯೋಜಿಸಿದ್ದು, ಸದರಿ ಕ್ರೀಡಾಂಗಣದ ಪ್ರಸ್ತುತ ಹಂತವೇನು ;

(ಊ) ಸದರಿ ಕಾಮಗಾರಿಗಳನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಿ ಲೋಕಾರ್ಪಣೆ ಮಾಡಲಾಗುತ್ತದೆ ? (ಮಾಹಿತಿ ನೀಡುವುದು)

## ಬಿ.ಬಿ.ಎಂ.ಪಿ ವ್ಯಾಪ್ತಿಯ ರಸ್ತೆ ಅಗಲೀಕರಣ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೨೨೫ (೩೦೫) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಾಧವ ಮುದಿಲಿಯಾರ್ ರಸ್ತೆಯಿಂದ ನಾಗವಾರ ಜಂಕ್ಷನ್‌ವರೆಗೆ ಟ್ಯಾನರಿ ರಸ್ತೆಯ ಉದ್ದಕ್ಕೂ ಉದ್ದೇಶಿತ ಎಲಿವೇಟೆಡ್ ಕಾರಿಡಾರ್ ನಿರ್ಮಾಣ ಮಾಡಲು ವಿವರವಾದ ಯೋಜನಾ ವರದಿಯನ್ನು ತಯಾರಿಸಲು ಬಿ.ಬಿ.ಎಂ.ಪಿ ವತಿಯಿಂದ ಅಲ್ಪಾವಧಿ ಟೆಂಡರ್ ಕರೆದಿರುವುದು ನಿಜವೇ ;

(ಆ) ಹಾಗೆಯೇ ಆರ್.ಟಿ. ನಗರ ಪೊಲೀಸ್ ಠಾಣೆಯಿಂದ ಡಾ॥ ಬಿ.ಆರ್. ಅಂಬೇಡ್ಕರ್ ಮೆಡಿಕಲ್ ಕಾಲೇಜುವರೆಗೆ ಸಂಪರ್ಕ ಕಲ್ಪಿಸುವ ದಿನ್ನೂರು ಮುಖ್ಯ ರಸ್ತೆ ಉದ್ದಕ್ಕೂ ಎಲಿವೇಟೆಡ್ ಕಾರಿಡಾರ್ ನಿರ್ಮಾಣ ಮಾಡಲು ಬಿ.ಬಿ.ಎಂ.ಪಿ ವತಿಯಿಂದ ಟೆಂಡರ್ ಕರೆಯಲಾಗುವುದೇ ;

(ಇ) ಎಲಿವೇಟೆಡ್ ಕಾರಿಡಾರ್ ನಿರ್ಮಾಣ ಮಾಡಲು ರಸ್ತೆ ಅಗಲೀಕರಣಕ್ಕೆ ಬೇಕಾಗುವ ವೆಚ್ಚಕ್ಕಿಂತ ೪ ಪಟ್ಟು ಹೆಚ್ಚು ವೆಚ್ಚ

ಆಗುವುದರಿಂದ ಎಲಿವೇಟೆಡ್ ಕಾರಿಡಾರ್ ನಿರ್ಮಾಣ ಮಾಡುವ ಯೋಜನೆಯನ್ನು ಕೈಬಿಟ್ಟು ರಸ್ತೆ ಅಗಲೀಕರಣಕ್ಕಾಗಿ ಸರ್ಕಾರ ಕ್ರಮ ಕೈಗೊಳ್ಳುವುದು ಸೂಕ್ತವಲ್ಲವೇ ; (ಮಾಹಿತಿ ಒದಗಿಸುವುದು)

(ಈ) ದಿನ್ನೂರು ಮುಖ್ಯರಸ್ತೆ ಮತ್ತು ಆದಿ ಕಬೀರ್ ಆಶ್ರಮ ರಸ್ತೆಯ/ ಜಂಕ್ಷನ್‌ನಲ್ಲಿ ದಿನನಿತ್ಯವು ಸಾವಿರಾರು ವಾಹನಗಳ ಓಡಾಟದಿಂದ ವಾಹನ ದಟ್ಟಣೆ ಉಂಟಾಗಿ ಗಂಟೆಗಟ್ಟಲೇ ಟ್ರಾಫಿಕ್ ಜಾಮ್ ಆಗಿ ಸಂಚಾರಕ್ಕೆ ತೀವ್ರ ಅಡಚಣೆ ಉಂಟಾಗುತ್ತಿರುವುದು ಹಾಗೂ ಅಂಬ್ಯುಲೆನ್ಸ್ ವಾಹನಗಳು ಸಂಚರಿಸಲೂ ಸಹ ಆಗದ ಪರಿಸ್ಥಿತಿ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಇದಕ್ಕೆ ಪರಿಹಾರ ಕೈಗೊಳ್ಳಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ನೀಡುವುದು)

## ಬೆಂಗಳೂರು ನಗರದ ಟ್ರಾಫಿಕ್ ಸಮಸ್ಯೆ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೨೨೬ (೩೦೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದಲ್ಲಿ ಹೆಚ್ಚಾಗುತ್ತಿರುವ ಸಂಚಾರ ದಟ್ಟಣೆ ಮತ್ತು ಅದರ ದುಷ್ಪರಿಣಾಮಗಳು ಸಾರ್ವಜನಿಕರ ಮೇಲೆ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬೆಂಗಳೂರು ನಗರದಲ್ಲಿ ಸುಮಾರು ೧ ಕೋಟಿ ೪೦ ಸಾವಿರ ಜನಸಂಖ್ಯೆವಿದ್ದು ಸುಮಾರು ೧ ಕೋಟಿಕ್ಕಿಂತ ಹೆಚ್ಚು ಖಾಸಗಿ ವಾಹನಗಳು ಇರುವುದು ನಿಜವೇ ;

(ಇ) ಬೆಂಗಳೂರು ನಗರದಲ್ಲಿ ಸಂಚಾರ ದಟ್ಟಣೆ ಹೆಚ್ಚಾಗಲು ಕಾರಣವೇನು ;

(ಈ) ಸದರಿ ಸಂಚಾರ ದಟ್ಟಣೆ ವ್ಯವಸ್ಥೆ ಸುಧಾರಿಸಲು ಕೃತಕ ಬುದ್ಧಿಮತ್ತೆ (AI) ತಂತ್ರಾಂಶವನ್ನು ಬಳಸಲಾಗುತ್ತಿದೆಯೇ ಅಥವಾ Intelligent Transport System ನಂತಹ ತಂತ್ರಾಂಶಗಳ ಬಳಕೆ ಮಾಡಲಾಗುತ್ತಿದೆಯೇ ; (ಮಾಹಿತಿ ನೀಡುವುದು)

(ಉ) ವಾಹನ ದಟ್ಟಣೆ ನಿಯಂತ್ರಿಸಲು ಗೃಹ ಇಲಾಖೆಯಲ್ಲಿ ಬೇಕಾಗಿರುವಷ್ಟು ಟ್ರಾಫಿಕ್ ಪೋಲೀಸ್ ಸಿಬ್ಬಂದಿ ಇದ್ದಾರೆಯೇ; ಇಲ್ಲದಿದ್ದಲ್ಲಿ, ಸಂಚಾರ ದಟ್ಟಣೆಯನ್ನು ನಿಯಂತ್ರಿಸಲು ಏನು ಕ್ರಮಗಳನ್ನು ಕೈಗೊಳ್ಳಲಾಗಿದೆ ?

## ರಾಜ್ಯದಲ್ಲಿರುವ ಪ್ರವಾಸಿ ತಾಣಗಳ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೨೨೭ (೩೦೭) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಪ್ರವಾಸಿ ತಾಣಗಳ ಸಂಖ್ಯೆ ಎಷ್ಟು; ಈ ಪ್ರವಾಸಿ ತಾಣಗಳಲ್ಲಿ ಸಾರ್ವಜನಿಕರಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ ;

(ಆ) ರಾಜ್ಯದಲ್ಲಿರುವ ಪ್ರವಾಸಿ ತಾಣಗಳಲ್ಲಿ ಎಷ್ಟು ಪ್ರವಾಸಿ ತಾಣಗಳನ್ನು ಆದ್ಯತೆ ಮೇಲೆ ಪರಿಗಣಿಸಿ ಅಭಿವೃದ್ಧಿ ಪಡಿಸಲಾಗುತ್ತಿದೆ ;

(ಇ) ರಾಜ್ಯದಲ್ಲಿರುವ ಪಾರಂಪಾರಿಕ ಪ್ರವಾಸಿ ತಾಣಗಳಲ್ಲಿ ಮೂಲಭೂತ ಸೌಕರ್ಯಗಳಿಲ್ಲದೇ ಸಾರ್ವಜನಿಕರು ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ರಾಜ್ಯದ ಪ್ರವಾಸಿ ತಾಣಗಳನ್ನು ವೀಕ್ಷಿಸಲು ಬರುತ್ತಿರುವ ಪ್ರವಾಸಿಗರ ಸುರಕ್ಷತೆಗಾಗಿ ಸರ್ಕಾರ ಕೈಗೊಂಡಿರುವ ಸುರಕ್ಷತ ಕ್ರಮಗಳೇನು ?

# ಸಣ್ಣ ನೀರಾವರಿ ಯೋಜನೆಗಳ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೨೨೮ (೩೦೮) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕುಡಿಯುವ ನೀರು, ಕೃಷಿ ಹಾಗೂ ಕೈಗಾರಿಕೆಗಳಿಗೆ ನೀರನ್ನು ಸಮರ್ಪಕವಾಗಿ ಪೂರೈಸಲು ಕೆರೆಗಳ ಅಭಿವೃದ್ಧಿ, ಚೆಕ್ ಡ್ಯಾಂ ಮತ್ತು ಬ್ರಿಡ್ಜ್ ಕಂ ಬ್ಯಾರೇಜ್ ನಂತಹ ೧೧೫ ಕಾಮಗಾರಿಗಳನ್ನು ೨೦೦ ಕೋಟಿ ರೂ. ಅಂದಾಜು ವೆಚ್ಚದಲ್ಲಿ ೨೦೨೪-೨೫ ಸಾಲಿನಲ್ಲಿ ಕೈಗೆತ್ತಿಕೊಳ್ಳಲಾಗುವುದು ಎಂದು ಆಯ-ವ್ಯಯದಲ್ಲಿ ಘೋಷಿಸಿದ್ದು, ಸದರಿ ಕಾಮಗಾರಿಗಳನ್ನು ಯಾವ ಯಾವ ಜಿಲ್ಲೆಗಳಲ್ಲಿ ಕೈಗೊಳ್ಳಲಾಗಿದೆ ;

(ಆ) ೧೧೫ ಕಾಮಗಾರಿಗಳಲ್ಲಿ ಎಷ್ಟು ಕಾಮಗಾರಿಗಳನ್ನು ಕೈಗೆತ್ತಿಕೊಂಡು ಪೂರ್ಣಗೊಳಿಸಲಾಗಿದೆ ಮತ್ತು ಎಷ್ಟು ಕಾಮಗಾರಿ ಬಾಕಿ ಉಳಿದಿವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಸದರಿ ಕಾಮಗಾರಿಗಳನ್ನು ಯಾವ ಗುತ್ತಿಗೆದಾರರಿಗೆ ನೀಡಲಾಗಿದೆ ; (ಗುತ್ತಿಗೆದಾರರ ಸಂಪೂರ್ಣ ಮಾಹಿತಿ ನೀಡುವುದು)

(ಈ) ಬಾಕಿ ಉಳಿದಿರುವ ಕಾಮಗಾರಿಗಳು ವಿಳಂಬವಾಗುವುದಕ್ಕೆ ಕಾರಣಗಳೇನು; ಈ ವಿಳಂಬದಿಂದ ಸರ್ಕಾರದ ಬೊಕ್ಕಸಕ್ಕೆ ಎಷ್ಟು ನಷ್ಟ ಉಂಟಾಗಿದೆ ;

(ಉ) ಗುತ್ತಿಗೆದಾರರಿಗೆ ನೀಡಲಾದ ಕಾಮಗಾರಿಗಳು ಕಾಲಮಿತಿಯೊಳಗೆ ಪೂರ್ಣಗೊಂಡಿವೆಯೇ ; ಇಲ್ಲವಾದಲ್ಲಿ ಸದರಿ ಗುತ್ತಿಗೆದಾರರ ವಿರುದ್ಧ ಕೈಗೊಂಡ ಕ್ರಮಗಳೇನು ?

# ಕೆ.ಪಿ.ಎಸ್.ಸಿ ಯಿಂದ ನಡೆಸುವ ನೇಮಕಾತಿ ಪರೀಕ್ಷೆಗಳ ಲೋಪದೋಷಗಳ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೨೨೯ (೨೨೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೨ ವರ್ಷದಿಂದ ಕೆ.ಪಿ.ಎಸ್.ಸಿ ಯು ಒಟ್ಟು ಎಷ್ಟು ನೇಮಕಾತಿ ಪರೀಕ್ಷೆಗಳನ್ನು ನಡೆಸಿದೆ ; (ಇಲಾಖೆವಾರು ಮಾಹಿತಿ ಒದಗಿಸುವುದು)

(ಆ) ನೇಮಕಾತಿ ಪರೀಕ್ಷೆಯಲ್ಲಿ ಪದೇ ಪದೇ ಲೋಪ ದೋಷಗಳು ಕಂಡುಬರಲು ಕಾರಣವೇನು; ಇಲ್ಲಿಯುವರೆಗೂ ಎಷ್ಟು ಲೋಪದೋಷಗಳು ಕಂಡುಬಂದಿದೆ; ಲೋಪದೋಷಗಳಿಗೆ ಅಧಿಕಾರಿಗಳ ಪಾತ್ರ ಕಂಡುಬಂದಿದೆಯೇ; ಹಾಗಿದ್ದರೇ ಯಾವ ಯಾವ ಅಧಿಕಾರಿಗಳ ವಿರುದ್ಧ ಸರ್ಕಾರ ಕ್ರಮ ಕೈಗೊಳ್ಳಲಾಗಿದೆ ; (ವಿವರಣೆಯೊಂದಿಗೆ ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಇಂತಹ ಲೋಪ ದೋಷಗಳಿಂದಾಗಿ ವಯೋಮಿತಿ ವಂಚಿತ ಅಭ್ಯರ್ಥಿಗಳು ಕಂಗಾಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಅಭ್ಯರ್ಥಿಗಳ ಮುಂದಿನ ಭವಿಷ್ಯಕ್ಕಾಗಿ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ಒದಗಿಸುವುದು)

(ಈ) ನೇಮಕಾತಿ ಪರೀಕ್ಷೆಗಳ ಲೋಪದೋಷದಿಂದಾಗಿ ಸರ್ಕಾರಕ್ಕೆ ಆಗಿರುವ ನಷ್ಟ ಎಷ್ಟು; ಸದರಿ ನಷ್ಟದ ಮೊತ್ತವನ್ನು ಸರ್ಕಾರವು ಯಾವ ಮೂಲದಿಂದ ಭರಿಸುವುದು ; (ವಿವರ ಒದಗಿಸುವುದು)

(ಉ) ಇಂತಹ ಲೋಪ ದೋಷಗಳಿಗೆ ಹೊಣೆಗಾರರು ಯಾರು ? (ಸಂಪೂರ್ಣ ವಿವರ ಒದಗಿಸುವುದು)

## ಬಿ.ಬಿ.ಎಂ.ಪಿ ವ್ಯಾಪ್ತಿಯ ಶಾಲಾ ಕಾಲೇಜುಗಳ ಹೊರಗುತ್ತಿಗೆ ಶಿಕ್ಷಕರಿಗೆ ವೇತನ ಹೆಚ್ಚಳ ಮಾಡುವ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :-**

೨೩೦ (೨೨೧) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಪ್ರಾಥಮಿಕ, ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜು, ಪದವಿ ಕಾಲೇಜುಗಳ ಸಂಖ್ಯೆ ಎಷ್ಟು ; (ವಿಳಾಸ ಸಹಿತ ವಿವರ ನೀಡುವುದು)

(ಆ) ಸದರಿ ಶಾಲಾ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಖಾಯಂ ಬೋಧಕ ಬೋಧಕೇತರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಈ ಶಾಲಾ ಕಾಲೇಜುಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ ಬೋಧಕೇತರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಈ) ಸದರಿ ಶಾಲಾ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರಿಗೆ ೭ನೇ ವೇತನ ಆಯೋಗದ ವರದಿಯಂತೆ ವೇತನ ಭತ್ಯೆಗಳನ್ನು ಪರಿಷ್ಕರಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಇದುವರೆಗೆ ವೇತನ ಭತ್ಯೆಗಳನ್ನು ಪರಿಷ್ಕರಿಸಿದೇ ಇರಲು ಕಾರಣಗಳೇನು ; ಯಾವ ಕಾಲಮಿತಿಯಲ್ಲಿ ವೇತನ ಭತ್ಯೆ ಪರಿಷ್ಕರಿಸಲಾಗುತ್ತದೆ ? (ವಿವರ ನೀಡುವುದು)

## ಪ್ರಾದೇಶಿಕ ಅಸಮತೋಲನ ದೃಷ್ಟಿಯಿಂದ ಉತ್ತರ ಕರ್ನಾಟಕ ಅಭಿವೃದ್ಧಿಗಾಗಿ ಕೈಗೊಂಡಿರುವ ಕ್ರಮಗಳ ಬಗ್ಗೆ

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩೧ (೨೭೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಾದೇಶಿಕ ಅಸಮತೋಲನ ದೃಷ್ಟಿಯಿಂದ ಉತ್ತರ ಕರ್ನಾಟಕದ ಅಭಿವೃದ್ಧಿಗಾಗಿ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ;

(ಆ) ಉತ್ತರ ಕರ್ನಾಟಕದ ಅಭಿವೃದ್ಧಿಗಾಗಿ ಇಲಾಖಾವಾರು ಕೈಗೊಂಡಿರುವ ಯೋಜನೆಗಳಾವುವು; ಈ ಯೋಜನೆಗಳಿಗೆ ನಿಗಧಿಪಡಿಸಿದ ಅನುದಾನ ಎಷ್ಟು ? (ಮಾಹಿತಿ ನೀಡುವುದು)

## "ಡಿಜಿಟಲ್ ಅರೆಸ್ಟ್" ವಂಚನೆಯಿಂದ ಅಮಾಯಕರು ನಿರಂತರವಾಗಿ ವಂಚನೆಗೆ ಒಳಗಾಗುತ್ತಿರುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೨ (೨೫೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ "ಡಿಜಿಟಲ್ ಅರೆಸ್ಟ್" ನಿಂದಾಗಿ, ಅಮಾಯಕರ ಬ್ಯಾಂಕ್ ಖಾತೆಯಿಂದ ಕೋಟಿ ಕೋಟಿ ರೂಪಾಯಿ ವಂಚನೆ ಆಗುತ್ತಿದ್ದು, ನೊಂದವರು ಮಾನಸಿಕವಾಗಿ ಕುಗ್ಗುತ್ತಿರುವ ಪ್ರಕರಣಗಳು ದಿನೇ ದಿನೇ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇದನ್ನು ತಡೆಯಲು ಸರ್ಕಾರ ಇದುವರೆಗೆ ತೆಗೆದುಕೊಂಡಿರುವ ಕ್ರಮಗಳೇನು ;

(ಇ) ರಾಜ್ಯದಲ್ಲಿ ಈವರೆಗೆ ಈ ಸಂಬಂಧ ದಾಖಲಾದ ಒಟ್ಟು ಪ್ರಕರಣಗಳೆಷ್ಟು: ಸದರಿ ಪ್ರಕರಣಗಳಲ್ಲಿ ವಂಚಕರಿಂದ ಸಾರ್ವಜನಿಕರು ಕಳೆದುಕೊಂಡಿರುವ ಹಣದ ವಿವರ ನೀಡುವುದು ;

(ಈ) ಎಷ್ಟು ಪ್ರಕರಣಗಳಲ್ಲಿ ಇದುವರೆಗೆ ವಂಚಕರಿಂದ ವಂಚನೆಯ ಹಣವನ್ನು ವಶಪಡಿಸಿಕೊಳ್ಳಲಾಗಿದೆ ;

(ಉ) "ಡಿಜಿಟಲ್ ಅರೆಸ್ಟ್" ವಂಚನೆಯನ್ನು ತಡೆಯುವ ಸಲುವಾಗಿ ಜಾಗೃತಿ ಮೂಡಿಸಲು ಸರ್ಕಾರ ಇದುವರೆಗೆ ಕೈಗೊಂಡಿರುವ ಕ್ರಮಗಳೇನು ?

## ಮದ್ಯದಂಗಡಿಗಳ ಪರವಾನಗಿಗಳನ್ನು ಹರಾಜು ಹಾಕುವ ಪ್ರಸ್ತಾವನೆ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೩ (೨೫೩) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಸ್ತಿತ್ವದಲ್ಲಿಲ್ಲದ ಮದ್ಯದಂಗಡಿಗಳ ಪರವಾನಗಿಗಳನ್ನು ಹರಾಜು ಹಾಕುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ರೀತಿ ಅಸ್ತಿತ್ವದಲ್ಲಿಲ್ಲದ ಎಷ್ಟು ಮದ್ಯದಂಗಡಿಗಳ ಪರವಾನಗಿಗಳನ್ನು ಹರಾಜು ಹಾಕುವ ಪ್ರಕ್ರಿಯೆ ಚಾಲ್ತಿಯಲ್ಲಿದೆ ; (ಸಕಾರಣಗಳೊಂದಿಗೆ ವಿವರ ನೀಡುವುದು)

(ಇ) ಈ ಹರಾಜು ಹಾಕುವ ಪ್ರಕ್ರಿಯೆಯಿಂದಾಗಿ ಕೋಟಾ ಹರಾಜಿಗೆ ತಾಂತ್ರಿಕ ಸಮಸ್ಯೆ ಎದುರಾಗುವುದರ ಜೊತೆಗೆ ರಿಟೇಲ್ ದೈತ್ಯರ ಪಾಲಾಗುವ ಆತಂಕವಿರುವುದು ಹಾಗೂ ಮಾರುಕಟ್ಟೆ ಏಕಸ್ವಾಮ್ಯ ಸೃಷ್ಟಿಯಾಗುವ ಭೀತಿಯಿರುವುದರ ಕುರಿತು ಸರ್ಕಾರದ ನಿಲುವು ಮತ್ತು ಸ್ಪಷ್ಟನೆಗಳೇನು ?

# 'ಹಳೆಯ ಪಿಂಚಣಿ ಯೋಜನೆ' ಜಾರಿ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೪ (೨೫೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೦೬ರ ನಂತರದಲ್ಲಿ ನೇಮಕಗೊಂಡ ರಾಜ್ಯ ಸರ್ಕಾರಿ ನೌಕರರು, ಈ ಹಿಂದೆ ಇದ್ದ "ಹಳೆಯ ಪಿಂಚಣಿ ಯೋಜನೆ" ಯನ್ನು ಜಾರಿಗೊಳಿಸಲು ಆಗ್ರಹಿಸಿ, ಪ್ರತಿಭಟನೆಗಿಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಆರ್ಥಿಕ ಸಂಪನ್ಮೂಲ ಮತ್ತು ಆದಾಯಗಳ ಕ್ರೋಢೀಕರಣದ ದೃಷ್ಟಿಯಿಂದ ಕರ್ನಾಟಕ ರಾಜ್ಯಕ್ಕಿಂತ ಬಹಳ ಹಿಂದಿರುವ ದೇಶದಲ್ಲಿನ ಬಹುತೇಕ ರಾಜ್ಯಗಳು ಈಗಾಗಲೇ ತನ್ನ ಸರ್ಕಾರಿ ನೌಕರರಿಗೆ "ಹಳೆಯ ಪಿಂಚಣಿ ಯೋಜನೆ" ಯನ್ನು ಮರು ಜಾರಿಗೊಳಿಸಿದ್ದು, ಕರ್ನಾಟಕ ಸರ್ಕಾರ ಮಾತ್ರ ಇದುವರೆವಿಗೂ ಈ ಯೋಜನೆ ಜಾರಿಗೊಳಿಸದೇ ಇರಲು ಯಾವುದಾದರೂ ಸಕಾರಣಗಳಿವೆಯೇ ; (ವಿವರ ನೀಡುವುದು)

(ಇ) ಆರ್ಥಿಕ ಪ್ರಗತಿ ಹಾಗೂ ಅಭಿವೃದ್ಧಿ ದೃಷ್ಟಿಯಲ್ಲಿ ದೇಶದ ಬಹುತೇಕ ರಾಜ್ಯಗಳಿಗಿಂತ ಸಾಕಷ್ಟು ಮುಂದಿರುವ ಕರ್ನಾಟಕ ರಾಜ್ಯ ಸರ್ಕಾರಿ ನೌಕರರಿಗೆ "ಹಳೆಯ ಪಿಂಚಣಿ ಯೋಜನೆ" ಯನ್ನು ಮರು ಜಾರಿಗೊಳಿಸಲು ಈ ಕೂಡಲೇ ಕ್ರಮವಹಿಸುವುದೇ ;

(ಈ) ಯಾವ ಕಾಲಮಿತಿಯೊಳಗೆ "ಹಳೆಯ ಪಿಂಚಣಿ ಯೋಜನೆ" ಯನ್ನು ಸರ್ಕಾರ ಮರು ಜಾರಿಗೊಳಿಸುವುದು ?

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಕ್ರೀಡಾ ಹಾಸ್ಟೆಲ್‌ಗಳ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :-**

೨೩೫ (೨೫೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಸ್ತುತ ಒಟ್ಟು ಎಷ್ಟು ಕ್ರೀಡಾ ಹಾಸ್ಟೆಲ್‌ಗಳು ಕಾರ್ಯನಿರ್ವಹಿಸುತ್ತಿವೆ ಹಾಗೂ ಸದರಿ ಕ್ರೀಡಾ ಹಾಸ್ಟೆಲ್‌ಗಳಿಗೆ ಮಂಜೂರಾಗಿರುವ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಈ ಎಲ್ಲಾ ಕ್ರೀಡಾ ಹಾಸ್ಟೆಲ್‌ಗಳು ಸ್ವಂತ ಕಟ್ಟಡ ಹೊಂದಿವೆಯೇ; ಹಾಗೂ ಅವುಗಳಲ್ಲಿ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದೆಯೇ ;

(ಇ) ಸದರಿ ಕ್ರೀಡಾ ಹಾಸ್ಟೆಲ್‌ಗಳಲ್ಲಿ ಪ್ರಸ್ತುತ ಇರುವ ದಾಖಲಾತಿ ಸಾಮರ್ಥ್ಯವೆಷ್ಟು ; ಹಾಗೂ ದಾಖಲಾಗಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಈ) ಸದರಿ ಕ್ರೀಡಾ ಹಾಸ್ಟೆಲ್‌ಗಳಲ್ಲಿ ದಾಖಲಾಗಿರುವ ವಿದ್ಯಾರ್ಥಿಗಳಿಗೆ ದೊರೆಯುತ್ತಿರುವ ಸೌಲಭ್ಯಗಳು ಹಾಗೂ ತರಬೇತಿಗಳು ಯಾವುವು ? (ವಿವರ ನೀಡುವುದು)

## ರಾಜ್ಯದಲ್ಲಿ ಅಪರಾಧ ಪ್ರಕರಣಗಳು ಹೆಚ್ಚಾಗಿರುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೩೬ (೨೧೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸೈಬರ್ ಅಪರಾಧಗಳು, ಡಿಜಿಟಲ್ ಅರೆಸ್ಟ್ ಸೇರಿದಂತೆ ಅಪರಾಧ ಕೃತ್ಯಗಳು ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಅಪರಾಧ ಪ್ರಕರಣಗಳು ಹೆಚ್ಚಾಗಲು ಕಾರಣಗಳೇನು ;

(ಆ) ಕಳೆದ ಎರಡು ವರ್ಷಗಳಿಂದ ಡಿಜಿಟಲ್ ಅರೆಸ್ಟ್, ಸೈಬರ್ ಅಪರಾಧ ಸೇರಿದಂತೆ ರಾಜ್ಯಾದ್ಯಂತ ನಡೆದಿರುವ ಅಪರಾಧ ಕೃತ್ಯಗಳೆಷ್ಟು; ಎಷ್ಟು ಪ್ರಕರಣಗಳಲ್ಲಿ ಎಫ್.ಐ.ಆರ್. ದಾಖಲಾಗಿದೆ; ಪತ್ತೆ ಹಚ್ಚಲಾದ ಪ್ರಕರಣಗಳೆಷ್ಟು ; (ಅಂಕಿ/ಅಂಶಗಳ ಸಹಿತ ಪೂರ್ಣ ವಿವರವನ್ನು ಜಿಲ್ಲಾವಾರು ನೀಡುವುದು)

(ಇ) ಡಿಜಿಟಲ್ ಅರೆಸ್ಟ್ ಸೇರಿದಂತೆ ಸೈಬರ್ ಅಪರಾಧ ಪ್ರಕರಣಗಳಲ್ಲಿ ಆಗಿರುವ ವಂಚನೆಯ ಮೊತ್ತ ಎಷ್ಟು ; ಎಷ್ಟು ಪ್ರಕರಣಗಳಲ್ಲಿ ಹಣವನ್ನು ವಸೂಲಿ ಮಾಡಲಾಗಿದೆ ; ಎಷ್ಟು ಜನರ ವಿರುದ್ಧ ಪ್ರಕರಣ ದಾಖಲಾಗಿವೆ; ಎಷ್ಟು ಜನರನ್ನು ಬಂಧಿಸಲಾಗಿದೆ ; (ಜಿಲ್ಲಾವಾರು ವಿವರವನ್ನು ಪ್ರಕರಣವಾರು ನೀಡುವುದು)

(ಈ) ಕಾವೇರಿ ೨.೦ ತಂತ್ರಾಂಶದ ಮೇಲೆ ಸೈಬರ್ ದಾಳಿ ನಡೆದಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಅಪರಾಧ ಪ್ರಕರಣಗಳನ್ನು ಪತ್ತೆ ಹಚ್ಚುವಲ್ಲಿ ವಿಫಲವಾಗಿರಲು ಕಾರಣಗಳೇನು ; ಅಪರಾಧ ಕೃತ್ಯಗಳನ್ನು ತಡೆಯಲು ಸರ್ಕಾರ ಕೈಗೊಂಡಿರುವ ಮುಂಜಾಗ್ರತಾ ಕ್ರಮಗಳು ಏನು ?

## ಗ್ಯಾರಂಟಿ ಯೋಜನೆಗಳಿಂದ ಅಭಿವೃದ್ಧಿ ಕಾಮಗಾರಿ ಕುಂಠಿತವಾಗಿರುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು)** :-

೨೩೭ (೨೧೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಲ್ಲಾ ಮೂಲಗಳಿಂದ ಎಷ್ಟು ತೆರಿಗೆ ಸಂಗ್ರಹವಾಗುತ್ತಿದೆ ;೨೦೨೪-೨೫ನೇ ಸಾಲಿನ (ಜನವರಿ ಅಂತ್ಯದವರೆಗೆ) ಗುರಿ ಹೊಂದಲಾಗಿದ್ದ/ಸಂಗ್ರಹವಾಗಿರುವ ಮತ್ತು ಕೊರತೆಯಾಗಿರುವ ತೆರಿಗೆ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಆ) ಗ್ಯಾರಂಟಿ ಯೋಜನೆಗಳಿಗಾಗಿ ಪ್ರತೀ ತಿಂಗಳು ಅಗತ್ಯವಿರುವ ಹಣ ಎಷ್ಟು ; ಗ್ಯಾರಂಟಿ ಯೋಜನೆಗಳು ಅಸ್ತಿತ್ವಕ್ಕೆ ಬಂದಾಗಿನಿಂದ ಸದರಿ ಯೋಜನೆಗಳಿಗೆ (೨೦೨೫, ಜನವರಿ ಅಂತ್ಯದವರೆಗೆ) ವೆಚ್ಚವಾಗಿರುವ ಹಣ ಎಷ್ಟು ; (ಗ್ಯಾರಂಟಿ ಯೋಜನೆವಾರು ಸಮಗ್ರ ಮಾಹಿತಿಯನ್ನು ಮಾಹೆಯಾನ ಒದಗಿಸುವುದು)

(ಇ) ಗ್ಯಾರಂಟಿ ಯೋಜನೆ ವಿಫಲವಾಗಿರುವುದನ್ನು ಸರ್ಕಾರ ಒಪ್ಪುತ್ತದೆಯೇ ; ಈ ಯೋಜನೆಯಡಿ ಫಲಾನುಭವಿಗಳಿಗೆ ಸಮಯಕ್ಕೆ ಸರಿಯಾಗಿ ಹಣ ಜಮೆ ಆಗದಿರುವುದರ ಮತ್ತು ಶಕ್ತಿ ಯೋಜನೆಯಡಿ ಸಾರಿಗೆ ನಿಗಮಗಳಿಗೆ ಪಾವತಿಸಲು ಬಾಕಿ ಇರುವ ಮೊತ್ತ ಎಷ್ಟು ; ಬಾಕಿ ಹಣವನ್ನು ಯಾವಾಗ ಪಾವತಿಸಲಾಗುವುದು ;

(ಈ) ಗ್ಯಾರಂಟಿ ಯೋಜನೆಗಳನ್ನು ಹೊರತುಪಡಿಸಿ ಇಲಾಖೆಗಳ ಕಾರ್ಯ ನಿರ್ವಹಣೆಗೆ ಮತ್ತು ನೌಕರರ ವೇತನ/ಪಿಂಚಣಿ ಸೇರಿದಂತೆ ಇನ್ನಿತರೆ ಸರ್ಕಾರಿ ವೆಚ್ಚಗಳಿಗೆ ಪ್ರತೀ ತಿಂಗಳು ಅಗತ್ಯವಿರುವ ಹಣ ಎಷ್ಟು ;

(ಉ) ರಾಜ್ಯ ಸರ್ಕಾರದ ಮೇಲಿರುವ ಒಟ್ಟು ಸಾಲ ಎಷ್ಟು ; ದಿನಾಂಕ ೦೧-೦೬-೨೦೨೩ ರಿಂದ ૩೧-೦೧-೨೦೨೫ ರವರೆಗೆ ಸರ್ಕಾರ

ಯಾವ ಯಾವ ಸಂಸ್ಥೆಯಿಂದ ಎಷ್ಟು ಬಾಹ್ಯ ಮತ್ತು ಆಂತರಿಕ ಸಾಲವನ್ನು ಪಡೆದಿದೆ ; ಸಾಲಕ್ಕೆ ಪ್ರತೀ ತಿಂಗಳು ಪಾವತಿಸುತ್ತಿರುವ ಅಸಲು ಹಾಗೂ ಬಡ್ಡಿ ಎಷ್ಟು ; (ಸಮಗ್ರ ವಿವರ ನೀಡುವುದು)

(ಊ) ಗ್ಯಾರಂಟಿ ಯೋಜನೆ ಅನುಷ್ಠಾನದಿಂದಾಗಿ ಕ್ಷೇತ್ರಗಳ ಅಭಿವೃದ್ಧಿಗೆ ಅನುದಾನದ ಕೊರತೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಕಳೆದ ೨ ವರ್ಷದಿಂದ (೨೦೨೫ ರ ಜನವರಿ ಅಂತ್ಯದವರೆಗೆ) ಕ್ಷೇತ್ರಗಳಲ್ಲಿ ಅಭಿವೃದ್ಧಿ ಕಾಮಗಾಲಗಳನ್ನು ಕೈಗೊಳ್ಳಲು ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ? (ಇಲಾಖಾವಾರು ವಿವರವನ್ನು ಕ್ಷೇತ್ರವಾರು ಒದಗಿಸುವುದು)

## ಭದ್ರಾ ಅಣೆಕಟ್ಟಿನಿಂದ ಕುಡಿಯುವ ನೀರು ಒದಗಿಸುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೩೮ (೨೧೧) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಭದ್ರಾ ಅಣೆಕಟ್ಟಿನಿಂದ ಚಿಕ್ಕಮಗಳೂರು ಜಿಲ್ಲೆಯ ತರೀಕೆರೆ, ಕಡೂರು, ಹಾಗೂ ಚಿಕ್ಕಮಗಳೂರು ತಾಲ್ಲೂಕಿನ ವಿವಿಧ ಗ್ರಾಮಗಳಿಗೆ ಕುಡಿಯುವ ನೀರೊದಗಿಸುವ ಕಾಮಗಾರಿಗೆ ಮಂಜೂರಾತಿ ದೊರೆತಿದ್ದು ಯಾವಾಗ ; ಈ ಯೋಜನೆಯ ಅಂದಾಜು ಮೊತ್ತವೆಷ್ಟು ;

(ಆ) ಸದರಿ ತಾಲ್ಲೂಕುಗಳ ಯಾವ್ಯಾವ ಗ್ರಾಮಗಳಿಗೆ ಈ ಯೋಜನೆಯಿಂದ ನೀರೊದಗಿಸಲಾಗುವುದು ; (ತಾಲ್ಲೂಕುವಾರು ಗ್ರಾಮಗಳ ಪಟ್ಟಿ ಒದಗಿಸುವುದು)

(ಇ) ಕಾಮಗಾರಿ ಪ್ರಾರಂಭಗೊಂಡಿದ್ದು ಯಾವಾಗ ; ಕಾಮಗಾರಿಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ; ಈವರೆಗೆ ಪ್ರಗತಿಯಲ್ಲಿರುವ ಹಾಗೂ ಬಾಕಿ ಇರುವ ಕಾಮಗಾರಿಗಳ ಸಂಖ್ಯೆ ಎಷ್ಟು ; ಕಾಮಗಾರಿಗಳಿಗೆ ಇದುವರೆಗೂ ಮಾಡಲಾಗಿರುವ; ವೆಚ್ಚ ಎಷ್ಟು ? (ಕಾಮಗಾರಿವಾರು ವಿವರ ಒದಗಿಸುವುದು)

## ಚಿಕ್ಕಮಗಳೂರು ಜಿಲ್ಲಾ ಕೇಂದ್ರದಲ್ಲಿ ಒಳಾಂಗಣ/ ಪುಟ್ಬಾಲ್ ಟರ್ಫ್ ಕ್ರೀಡಾಂಗಣ ನಿರ್ಮಿಸುವ ಕಾಮಗಾರಿ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೯ (೨೧೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲಾ ಕೇಂದ್ರದಲ್ಲಿ ಒಳಾಂಗಣ ಕ್ರೀಡಾಂಗಣ ಹಾಗೂ ಫುಟ್ಬಾಲ್ ಟರ್ಫ್ ಕ್ರೀಡಾಂಗಣ ನಿರ್ಮಾಣ ಕಾಮಗಾರಿಗೆ ಮಂಜೂರಾತಿ ದೊರೆತಿದ್ದು ಯಾವಾಗ ; ಈ ಕಾಮಗಾರಿಗಳಿಗೆ ಮಂಜೂರಾಗಿದ್ದ ಅನುದಾನವೆಷ್ಟು ;

(ಆ) ಈ ಕಾಮಗಾರಿಗಳು ಪ್ರಾರಂಭವಾಗಿದ್ದು ಹಾಗೂ ಮುಕ್ತಾಯಗೊಳಿಸುವುದು ಯಾವಾಗ ;

(ಇ) ಈ ಕಾಮಗಾರಿಗಳು ಇದುವರೆಗೂ ಪೂರ್ಣಗೊಳ್ಳದೆ ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ; ಬಂದಿದ್ದಲ್ಲಿ ಇದಕ್ಕೆ ಕಾರಣಗಳೇನು ;

(ಈ) ಈ ಕಾಮಗಾರಿಗಳನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ?

## ಚಿಕ್ಕಮಗಳೂರು ಜಿಲ್ಲಾ ಕೇಂದ್ರದಲ್ಲಿ ಕ್ರಿಕೆಟ್ ಸ್ಟೇಡಿಯಂ ನಿರ್ಮಿಸುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೪೦ (೨೧೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಿಕ್ಕಮಗಳೂರು ಜಿಲ್ಲಾ ಕೇಂದ್ರದಲ್ಲಿ ಕ್ರಿಕೆಟ್ ಸ್ಟೇಡಿಯಂ ನಿರ್ಮಾಣ ಮಾಡಬೇಕೆನ್ನುವ ಸಾರ್ವಜನಿಕರ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಆ) ಹಾಗಿದ್ದಲ್ಲಿ, ಚಿಕ್ಕಮಗಳೂರು ಜಿಲ್ಲಾ ಕೇಂದ್ರದಲ್ಲಿ ಕ್ರಿಕೆಟ್ ಸ್ಟೇಡಿಯಂ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೆ ; ಇದ್ದರೆ ಯಾವ ಹಂತದಲ್ಲಿದೆ ;

(ಇ) ಇದಕ್ಕಾಗಿ ಜಾಗ ಗುರುತಿಸಲಾಗಿದೆಯೆ ; ಗುರುತಿಸಿದ್ದರೆ, ಎಲ್ಲಿ ಎಷ್ಟು ಜಾಗವನ್ನು ಗುರುತಿಸಿ ಕಾಯ್ದಿರಿಸಲಾಗಿದೆ ; (ವಿವರ ಒದಗಿಸುವುದು)

(ಈ) ಯಾವ ಕಾಲ ಮಿತಿಯಲ್ಲಿ ಚಿಕ್ಕಮಗಳೂರು ಜಿಲ್ಲಾ ಕೇಂದ್ರದಲ್ಲಿ ಕ್ರಿಕೆಟ್ ಸ್ಟೇಡಿಯಂ ನಿರ್ಮಾಣ ಮಾಡಲಾಗುವುದು ?

## ಅಕ್ರಮವಾಗಿ ನೆಲಸಿರುವ ವಿದೇಶಿಯರ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೪೧ (೨೩೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಅಕ್ರಮವಾಗಿ ನೆಲೆಸಿರುವ ಪಾಕಿಸ್ತಾನಿ, ಬಾಂಗ್ಲದೇಶಿ, ಮತ್ತು ರೊಹಿಂಗ್ಯಾ ಮುಸ್ಲಿಮರು ಧರ್ಮದ ಹೆಸರಿನಲ್ಲಿ ನಡೆಯುವ ದೊಂಭಿ ಮತ್ತು ಗಲಭೆಗಳಲ್ಲಿ ನೇರವಾಗಿ ಭಾಗಿಯಾಗುತ್ತಿರುವ ಕುರಿತು ಸರ್ಕಾರದ ನಿಲುವೇನು; ಗಡಿಪಾರು ಮಾಡಲಾಗಿರುವ ಅಕ್ರಮ ವಲಸಿಗರ ಸಂಖ್ಯೆ ಎಷ್ಟು ;

(ಆ) ಕಳೆದ ೩ ವರ್ಷಗಳಲ್ಲಿ ಅಕ್ರಮವಾಗಿ ನೆಲೆಸಿರುವ ಮುಸ್ಲಿಂಮರು ರಾಜ್ಯದಲ್ಲಿ ನಡೆಸಿರುವ ಕ್ರಮಿನಲ್ ಪ್ರಕರಣಗಳ ಸಂಖ್ಯೆ ಎಷ್ಟು ; ಇದರಲ್ಲಿ ಎಷ್ಟು ಪ್ರಕರಣಗಳಲ್ಲಿ ಆರೋಪಿತರಿಗೆ ಶಿಕ್ಷೆಯಾಗಿದೆ ;

(ಇ) ರಾಜ್ಯದಲ್ಲಿ ಅಕ್ರಮವಾಗಿ ನೆಲೆಸಿರುವ ಪಾಕಿಸ್ತಾನ, ಬಾಂಗ್ಲದೇಶಿ, ಮತ್ತು ರೊಹಿಂಗ್ಯಾ ಮುಸ್ಲಿಮರು ಭಾರತದ ಪ್ರಜೆಗಳಾಗದೇ ಇರುವುದರಿಂದ ಸರ್ಕಾರವು ನೀಡುವ ಉಚಿತ ಸೌಲಭ್ಯಗಳಾದ. ಆರೋಗ್ಯ, ಶಿಕ್ಷಣ, ಆಹಾರದಂತಹ ಸೌಲಭ್ಯಗಳನ್ನು ಬಳಸಿಕೊಳ್ಳುತ್ತಿರುವುದರಿಂದ ರಾಜ್ಯದ ಬಡ ಜನರಿಗೆ ಅನ್ಯಾಯವಾಗುತ್ತಿರುವ ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕುರಿತು ಸರ್ಕಾರದ ನಿಲುವೇನು ;

(ಈ) ಕಳೆದ ೨ ವರ್ಷಗಳಲ್ಲಿ ಎಷ್ಟು ಅಕ್ರಮ ವಲಸಿಗರನ್ನು ಗುರುತಿಸಲಾಗಿದೆ; ಎಷ್ಟು ಅಕ್ರಮ ವಲಸಿಗರನ್ನು ಗಡೀಪಾರು ಮಾಡಲಾಗಿದೆ; ಅಕ್ರಮ ವಲಸಿಗರ ಅಕ್ರಮ ವಾಸ್ಥವ್ಯಕ್ಕೆ ಸಹಕರಿಸಿದ ಎಷ್ಟು ಜನರ ಮೇಲೆ ಪ್ರಕರಣ ದಾಖಲು ಮಾಡಲಾಗಿದೆ ? (ಜಿಲ್ಲಾವಾರು ವಿವರ ನೀಡುವುದು)

## ಅನಧಿಕೃತ ಕಟ್ಟಡಗಳನ್ನು ತೆರವುಗೊಳಿಸುವ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೨ (೨೨೭) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನ್ಯಾಯಾಲಯದಲ್ಲಿ ಪ್ರಕರಣ ದಾಖಲಾಗಿದೆ ಎಂಬ ಕಾರಣಕ್ಕಾಗಿ ಅನಧಿಕೃತ ಕಟ್ಟಡಗಳನ್ನು ತೆರವುಗೊಳಿಸದಿರುವ ಪ್ರಕರಣಗಳ ಸಂಖ್ಯೆ ಎಷ್ಟು; ಈ ರೀತಿಯ ಅನಧಿಕೃತ ಕಟ್ಟಡಗಳಿಂದ ಬೆಂಗಳೂರು ನಗರವು ಕೃತಕ ಮಳೆಗಾಲದಲ್ಲಿ ಕೃತಕ ನೆರೆ ಹಾವಳಿಯಿಂದ ಬಳಲುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಅನಧಿಕೃತ ಕಟ್ಟಡಗಳನ್ನು ಅಕ್ರಮವಾಗಿ ರಕ್ಷಿಸುವ ಮೂಲಕ ಕೃತಕ ನೆರೆ ಹಾವಳಿಗೆ ಕಾರಣರಾದ ಅಧಿಕಾರಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಆ) ಬೆಂಗಳೂರು ನಗರ ಜಿಲ್ಲೆಯ ಪಿ&ಟಿ ಲೇಔಟ್, ಅನ್ನದಾನ ಪುರ, ಟಿಸಿ ಪಾಳ್ಯ, ೫ನೇ ಕ್ರಾಸ್ ೨ನೇ ಮೈನ್ ಸೈಟ್ ನಂ ೭೮ರಲ್ಲಿನ ಅನಧಿಕೃತ ನಿರ್ಮಾಣದ ಕುರಿತು ಮಾನ್ಯ ನ್ಯಾಯಾಲಯವು ಅನಧಿಕೃತ ಕಟ್ಟಡವನ್ನು ರಕ್ಷಿಸುವಂತೆ ನಿರ್ದೇಶನ ನೀಡಿದೆಯೇ ; (ಈ ಕುರಿತು ನ್ಯಾಯಾಲಯದ ಆದೇಶದ ಪ್ರತಿಯನ್ನು ಒದಗಿಸುವುದು)

(ಇ) ಮಾನ್ಯ ನ್ಯಾಯಾಲಯದಲ್ಲಿ ಪ್ರಕರಣ ದಾಖಲಾಗಿದೆ ಎಂಬ ಒಂದೇ ಕಾರಣಕ್ಕಾಗಿ ಅನಧಿಕೃತ ನಿರ್ಮಾಣ ತೆರವುಗೊಳಿಸಲು ಸಾಧ್ಯವಿಲ್ಲ ಎಂಬುದರ ಕುರಿತು ಸರ್ಕಾರದ ಆದೇಶವಿದ್ದಲ್ಲಿ ಅದರ ಪ್ರತಿಯನ್ನು ಒದಗಿಸುವುದು ;

(ಈ) ಬಿ.ಬಿ.ಎಂ.ಪಿ ಅಧಿಕಾರಿಗಳ ಕರ್ತವ್ಯದಲ್ಲಿನ ನಿರ್ಲಕ್ಷದಿಂದಾಗಿ ನಗರದಲ್ಲಿ ಅನಧಿಕೃತ ಕಟ್ಟಡಗಳ ನಿರ್ಮಾಣ ನಿಯಂತ್ರಣ ಮೀರಿರುವುದರ ಕುರಿತು ಸರ್ಕಾರದ ನಿಲುವೇನು; ಇದರಿಂದಾಗಿ ನಗರದಲ್ಲಿ ನೆರೆಯಂತಹ ಪರಿಸ್ಥಿತಿ ನಿರ್ಮಾಣವಾಗುತ್ತಿದ್ದು

ಅಂತರಾಷ್ಟ್ರೀಯ ಮಟ್ಟದಲ್ಲಿ ನಗರಕ್ಕೆ ಕೆಟ್ಟ ಹೆಸರು ಬರಲು ಕಾರಣರಾದ ಹಾಗೂ ಈ ಅನಧಿಕೃತ ನಿರ್ಮಾಣಗಳಿಗೆ ಪ್ರೋತ್ಸಾಹ ನೀಡುತ್ತಿರುವ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳದಿರಲು ಕಾರಣವೇನು ? (ವಿವರ ನೀಡುವುದು)

## ನಾರಾಯಣಪುರ ಬಲದಂಡೆ ಕಾಲುವೆಯ ಅಕ್ರಮಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೪೩ (೨೨೮) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನಾರಾಯಣಪುರ ಬಲದಂಡೆ ಮುಖ್ಯ ಕಾಲುವೆಯ ಆರಂಭದಿಂದ ೯೫ ಕಿ,ಮೀ ವರೆಗಿನ ಆಧುನೀಕರಣ ಪ್ಯಾಕೇಜ್ ಕಾಮಗಾರಿ ಹಾಗೂ ೧ ರಿಂದ ೧೮ರವರೆಗಿನ ಉಪ/ಸೀಳು ಕಾಲುವೆಗಳ ನಿರ್ಮಾಣ ವಿಸ್ತರಣೆ ಮತ್ತು ನವೀಕರಣ ಕಾಮಗಾರಿಗಳಲ್ಲಿ ನಡೆದಿರುವ ಅಕ್ರಮಗಳಾವುವು ; (ಸಮಗ್ರ ವಿವರ ಒದಗಿಸುವುದು)

(ಆ) ಸದರಿ ಕಾಮಗಾರಿಗಳ ಒಟ್ಟು ಅಂದಾಜು ಮೊತ್ತ ಹಾಗೂ ಕಾಮಗಾರಿಗಳಲ್ಲಿ ಅಕ್ರಮಗಳು ನಡೆದಿರುವ ಹಿನ್ನೆಲೆಯಲ್ಲಿ ಸರ್ಕಾರಕ್ಕೆ ಆಗಿರುವ ನಷ್ಟ ಎಷ್ಟು; ಅಕ್ರಮಕ್ಕೆ ಹೊಣೆಗಾರರು ಯಾರು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಕಾಮಗಾರಿಗೆ ಗುತ್ತಿಗೆ ನೀಡುವಾಗ ಟೆಂಡರ್ ಕರೆಯಲಾಗಿತ್ತೇ; ಟೆಂಡರ್‌ನಲ್ಲಿ ಭಾಗವಹಿಸಿದ್ದ ಸಂಸ್ಥೆಗಳು ನಮೂದಿಸಿದ್ದ ಟೆಂಡರ್ ಮೊತ್ತ ಎಷ್ಟು; ಅಂತಿಮವಾಗಿ ಯಾವ ಸಂಸ್ಥೆಗೆ ಟೆಂಡರ್ ನೀಡಲಾಗಿತ್ತು; ಅವರು ನಮೂದಿಸಿದ್ದ ಮೊತ್ತ ಎಷ್ಟು ; (ಟೆಂಡರ್ ಕರೆಯಲಾದ ಜಾಹಿರಾತು ಪ್ರತಿ ಹಾಗೂ ಟೆಂಡರ್ ಅನುಮೋದನೆಗೊಂಡ ಕಡತಗಳ ಪ್ರತಿ ಒದಗಿಸುವುದು)

(ಈ) ಟೆಂಡರ್ ಪಡೆದಿದ್ದ ಸಂಸ್ಥೆಗೆ ಪೂರ್ಣ ಪ್ರಮಾಣದಲ್ಲಿ ಬಿಲ್ ಪಾವತಿ ಮಾಡಲಾಗಿದೆಯೇ; ಅಕ್ರಮಗಳು ನಡೆದಿದ್ದರೂ ಬಿಲ್ ಪಾವತಿ ಮಾಡಲು ಕಾರಣಕರ್ತರು ಯಾರು ಹಾಗೂ ಬಿಲ್ ಪಾವತಿಸುವಂತೆ ಸೂಚನೆ ನೀಡಿದ್ದು ಯಾರು ; (ಹಣ ಪಾವತಿಸುವಂತೆ ಆದೇಶ ಹೊರಡಿಸಲಾದ ಕಡತಗಳ ಪ್ರತಿ ಒದಗಿಸುವುದು)

(ಉ) ಕಾಮಗಾರಿ ಕುರಿತು ಕರ್ನಾಟಕ ವಿಧಾನ ಮಂಡಲದ ಅಂದಾಜು ಸಮಿತಿ ನೀಡಿದ್ದ ಅಭಿಪ್ರಾಯವೇನು; ಸಮಿತಿಯ ವ್ಯವಸ್ಥಾಪಕ ನಿರ್ದೇಶಕರಿಗೆ ಬರೆದಿರುವ ಪತ್ರಗಳ ಪ್ರತಿ ಒದಗಿಸುವುದು ;

(ಊ) ಸಮಿತಿಯು ಅಭಿಪ್ರಾಯವನ್ನು ಮೀರಿ ಹಣ ಬಿಡುಗಡೆ ಮಾಡಿರುವವರ ವಿರುದ್ಧ ಕೈಗೊಂಡಿರುವ ಕ್ರಮಗಳೇನು ?

## ಅಕ್ರಮವಾಗಿ ರಸ್ತೆ ವಿಭಾಜಕಗಳನ್ನು ತೆರವುಗೊಳಿಸಿದ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೪೪೪ (೨೨೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೊಮ್ಮನಹಳ್ಳಿ ಜಂಕ್ಷನ್ ಮತ್ತು ಗಾರೇಬಾವಿಪಾಳ್ಯ ಜಂಕ್ಷನ್ ನಡುವೆ ಖಾಸಗಿ ಬಿಲ್ಡರ್‌ರವರ ವಸತಿ ಸಮುಚ್ಚಯ ಇದೆ ಎನ್ನುವ ಕಾರಣಕ್ಕಾಗಿ ಸದರಿ ವಸತಿ ಸಮುಚ್ಚಯದ ಮುಖ್ಯದ್ವಾರಕ್ಕೆ ಅನುಕೂಲ ಮಾಡಿ ಕೊಡುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆಯ ಅಧಿಕಾರಿಗಳು ದಿನಾಂಕ: ೧೬.೦೯.೨೦೨೧ರ ರಾತ್ರಿ ಅಕ್ರಮವಾಗಿ ಪಿಲ್ಲರ್ ಸಂಖ್ಯೆ ೨೦ ಮತ್ತು ೨೧ರ ನಡುವಿನ ರಾಷ್ಟ್ರೀಯ ಹೆದ್ದಾರಿಯು ೭ರ ನಡುವಿನ ರಸ್ತೆ ವಿಭಾಜಕಗಳನ್ನು ತೆರವುಗೊಳಿಸಿರುವುದರ ಕುರಿತು ಸರ್ಕಾರದ ನಿಲುವೇನು ;

(ಆ) ಈ ರೀತಿ ಅಕ್ರಮವಾಗಿ ರಸ್ತೆ ವಿಭಾಜಕಗಳನ್ನು ತೆರವುಗೊಳಿಸಿದ ಇಲಾಖೆಯ ಅಧಿಕಾರಿಗಳ ಮೇಲೆ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಅಗ್ನಿಶಾಮಕ ಇಲಾಖೆಯ ನಿರ್ಲಕ್ಷದ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):-**

೨೪೫ (೨೩೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅಗ್ನಿಶಾಮಕ ಇಲಾಖೆಯ ನಿರ್ಲಕ್ಷದಿಂದ ರೂ.೧೬೫.೨೪ ಕೋಟಿ ಆದಾಯ ಸರ್ಕಾರಕ್ಕೆ ನಷ್ಟವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಸರ್ಕಾರದ ನಿಲುವೇನು ; (ವಿವರ ನೀಡುವುದು)

(ಆ) ಅಗ್ನಿಸಂರಕ್ಷಣಾ ನಿಬಂದನೆಗಳನ್ನು ಪರಿಶೀಲನೆ ನಡೆಸದೇ ಇರಲು ಕಾರಣಗಳೇನು ರಾಜ್ಯದ ಪ್ರಮುಖ ೭ ನಗರಗಳ ೧೯,೬೪೦ ಕಟ್ಟಡಗಳ ಪೈಕಿ ಕೇವಲ ೨೦೬೨ ಕಟ್ಟಡಗಳಿಗೆ ಮಾತ್ರವೇ ಅಗ್ನಿ ಸುರಕ್ಷತಾ ಪ್ರಮಾಣ ಪತ್ರವನ್ನು ಪಡೆದ ಬಳಿಕ ಒಸಿಗಳನ್ನು ಪಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಇದರಿಂದಾಗುವ ಪ್ರಾಣ ಹಾನಿಗಳಿಗೆ ಯಾರನ್ನು ಹೊಣೆಗಾರರನ್ನಾಗಿ ಮಾಡಲಾಗಿದೆ ; ಈ ಕುರಿತು ಸರ್ಕಾರದ ನಿಲುವೇನು ?

## ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿಯಿರುವ ಹುದ್ದೆಗಳ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :-**

೨೪೬ (೨೯೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಸರ್ಕಾರದಲ್ಲಿರುವ ಇಲಾಖೆಗಳ ಸಂಖ್ಯೆ ಎಷ್ಟು ; (ಪಟ್ಟಿ ನೀಡಿ)

(ಆ) ಪ್ರತಿಯೊಂದು ಇಲಾಖೆಗಳಲ್ಲಿ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮತ್ತು ನಿವೃತ್ತಿ, ರಾಜೀನಾಮೆಯಿಂದ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ಇಲಾಖೆವಾರು ಹಾಗೂ ವೃಂದವಾರು ವಿವರವಾದ ಮಾಹಿತಿ ನೀಡುವುದು ;

(ಇ) ವಿವಿಧ ಇಲಾಖೆಗಳಲ್ಲಿ ೨೦೨೪–೨೫ನೇ ಸಾಲಿನಲ್ಲಿ ನೇಮಕಾತಿಗಾಗಿ ಪ್ರಕ್ರಿಯೆ ನಡೆಸಲಾಗಿದೆಯೇ ; ನಡೆಸಿದ್ದಲ್ಲಿ ವಿವರವಾದ ಮಾಹಿತಿ ನೀಡುವುದು ;

(ಈ) ೨೦೨೫–೨೦೨೬ನೇ ಸಾಲಿನಲ್ಲಿ ಮತ್ತು ನಂತರ ಯಾವ ಯಾವ ಇಲಾಖೆಗಳಲ್ಲಿ ನೇಮಕಾತಿಗಳನ್ನು ಮಾಡಲು ಸರ್ಕಾರ ಕ್ರಮ ಕೈಗೊಂಡಿದೆ ? (ಮಾಹಿತಿ ನೀಡುವುದು)

## ಅಂಗವಿಕಲರ ಕಲ್ಯಾಣ ಇಲಾಖೆಗೆ ಅನುದಾನ ನೀಡದೆ ಅಂಗವಿಕಲರುಗಳಿಗೆ ಆಗಿರುವ ತೊಂದರೆ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೭ (೨೨೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಂಗವಿಕಲರ ಕಲ್ಯಾಣ ಇಲಾಖೆಗೆ ಕಳೆದ ಮೂರು ವರ್ಷಗಳಲ್ಲಿ ಆರ್ಥಿಕ ಇಲಾಖೆಯಿಂದ ಬಿಡುಗಡೆಯಾದ ಅನುದಾನ ಎಷ್ಟು ; (ಸಂಬಳ, ಸಾರಿಗೆ ಮತ್ತು ಕಾರ್ಯಕ್ರಮಗಳು ಮತ್ತು ಅಭಿವೃದ್ಧಿ ವಿಷಯುಗಳ ಪ್ರತ್ಯೇಕವಾಗಿ ವಿವರಗಳೊಂದಿಗೆ ಮಾಹಿತಿ ಒದಗಿಸುವುದು)

(ಆ) ಪ್ರಸ್ತುತ ಸಾಲಿನಲ್ಲಿ ಅಂಗವಿಕಲರ ಕಲ್ಯಾಣ ಇಲಾಖೆಗೆ ಹಂಚಿಕೆ ಮಾಡಿ ಬಿಡುಗಡೆ ಮಾಡಲಾದ ಅನುದಾನ ಎಷ್ಟು; ಕಳೆದ ಮೂರು ವರ್ಷಗಳಿಗಿಂತ ಈ ವರ್ಷ ಕಡಿಮೆ ಹಣ ಬಿಡುಗಡೆ ಮಾಡಲು ಕಾರಣವೇನು ; (ಮಾಹಿತಿ ಒದಗಿಸುವುದು)

(ಇ) ಈ ಆರ್ಥಿಕ ವರ್ಷದಲ್ಲಿ ಅಂಗವಿಕಲರ ಕಲ್ಯಾಣ ಇಲಾಖೆಯಿಂದ ಹೆಚ್ಚುವರಿ ಅಥವಾ ಪೂರ್ಣ ಪ್ರಮಾಣದ ಅನುದಾನಕ್ಕೆ ಪತ್ರ ವ್ಯವಹಾರವನ್ನು ನಡೆಸಲಾಗಿದೆಯೇ ; ಇದ್ದಲ್ಲಿ, ಅವರ ಕೋರಿಕೆಯ ಪತ್ರ ಮತ್ತು ಬಿಡುಗಡೆಯಾದ ಅನುದಾನದ ವಿವರಗಳನ್ನು ಒದಗಿಸುವುದು ;

(ಈ) ಅಂಗವಿಕಲರ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುವ ಸಂಘ, ಸಂಸ್ಥೆಗಳಿಗೆ ಅನುದಾನವನ್ನು ಬಿಡುಗಡೆ ಮಾಡಲು ೨೬ ಕೋಟಿಗಳ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ಕಳುಹಿಸಿರುವುದು ನಿಜವೇ; ಹಾಗಿದ್ದಲ್ಲಿ, ಈ ಹಣವನ್ನು ಯಾವ ಕಾಲಮಿತಿಯಲ್ಲಿ ಬಿಡುಗಡೆ ಮಾಡಲಾಗುವುದು ; (ಮಾಹಿತಿ ಒದಗಿಸುವುದು)

(ಉ) ಅಂಗವಿಕಲರ ಕಲ್ಯಾಣ ಇಲಾಖೆಗೆ ಬೇಕಾಗುವ ಪೂರ್ಣ ಪ್ರಮಾಣದ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರ ಕ್ರಮವಹಿಸುವುದೆ ?

## ಸರ್ಕಾರದ ವಿವಿಧ ಸ್ಥಳಗಳಲ್ಲಿ ನಿವೃತ್ತಿ ನೌಕರರನ್ನು ನೇಮಕ ಮಾಡಿಕೊಳ್ಳುತ್ತಿರುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೪೮ (೨೨೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರದ ವಿವಿಧ ಸ್ಥಳಗಳಲ್ಲಿ ನಿವೃತ್ತಿ ಅಧಿಕಾರಿಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿರುವುದರಿಂದ ಸರ್ಕಾರದ ಬೊಕ್ಕಸಕ್ಕೆ ಆಗುತ್ತಿರುವ ಹೊರೆ ಎಷ್ಟು ; ಈ ನಿವೃತ್ತ ಅಧಿಕಾರಿಗಳ ಗುತ್ತಿಗೆ ಆಧಾರದ ಮೇಲೆ ಮರುನೇಮಕದ ಬಗ್ಗೆ ಸರ್ಕಾರದ ಅಭಿಪ್ರಾಯವೇನು ; (ಮಾಹಿತಿ ಒದಗಿಸುವುದು)

(ಆ) ಸಚಿವರ ಅಪ್ತಶಾಖೆ ಮತ್ತು ಸಚಿವಾಲಯಗಳಲ್ಲಿ ನೇಮಕ ಮಾಡಿಕೊಂಡಿರುವ ನಿವೃತ್ತ ನೌಕರರ ಸಂಖ್ಯೆ ಎಷ್ಟು ; (ಮಾಹಿತಿಯನ್ನು ಅವರುಗಳ ಗುತ್ತಿಗೆ ವೇತನದ ಸಹಿತ ಒದಗಿಸುವುದು)

(ಇ) ಈ ಹಿಂದೆ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ನಿವೃತ್ತ ನೌಕರರ ಸೇವೆಯನ್ನು ಹಿಂಪಡೆಯುವ ಬಗ್ಗೆ ಹೊರಡಿಸಿರುವ ಸುತ್ತೋಲೆಯನ್ನು ಪಾಲಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರದ ನೀಲುವೇನು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ನಿವೃತ್ತ ಸರ್ಕಾರಿ ನೌಕರರನ್ನು ಸರ್ಕಾರಿ ಸೇವೆಗೆ ನಿಯೋಜಿಸುವುದನ್ನು ನಿರ್ಬಂಧಿಸಿ ಸರ್ಕಾರದಿಂದ ಹೊರಡಿಸಿರುವ ಆದೇಶದ ಬಗ್ಗೆ

**ಶ್ರೀ ಹೆಚ್.ಪಿ. ಸುಧಾಮ್ ದಾಸ್ (ನಾಮನಿರ್ದೇಶನ ಹೊಂದಿದವರು) :-**

೨೪೯ (೨೩೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನಿವೃತ್ತ ಸರ್ಕಾರಿ ನೌಕರರನ್ನು ಸರ್ಕಾರಿ ಸೇವೆಗೆ ನಿಯೋಜಿಸುವುದನ್ನು ನಿರ್ಬಂಧಿಸಿ ಸರ್ಕಾರದಿಂದ ಆದೇಶ ಹೊರಡಿಸಲಾಗಿದೆಯೇ ;

(ಆ) ನಿರ್ಬಂಧದ ಆದೇಶದ ತರುವಾಯ ನಿವೃತ್ತಿ ನಂತರವೂ ಸರ್ಕಾರಿ ಸೇವೆಗೆ ನಿಯೋಜಿಸಲಾಗಿರುವ ಸರ್ಕಾರಿ ನೌಕರರುಗಳ/ ಅಧಿಕಾರಿಗಳ ಸಂಖ್ಯೆ ಎಷ್ಟು ? (ಪ್ರತಿಯೊಬ್ಬ ಅಧಿಕಾರಿಯ ವಿವರ ಹಾಗೂ ನಿಯೋಜಿಸಲಾದ ಹುದ್ದೆಯ ವಿವರ ಒದಗಿಸುವುದು)

## ಆನ್‌ಲೈನ್ ವಂಚನೆ ಪ್ರಕರಣ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೫೦ (೨೫೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ದಾಖಲಾದ ಆನ್‌ಲೈನ್ ಉದ್ಯೋಗ ನಕಲಿ ಲೋನ್ ಆಪ್‌ಗಳಿಂದ ವಂಚನೆಗೀಡಾದ ಪ್ರಕರಣಗಳು ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಪ್ರಕರಣಗಳಲ್ಲಿ ಎಷ್ಟು ಜನಕ್ಕೆ ನ್ಯಾಯ ಸಿಕ್ಕಿದೆ ಹಾಗೂ ಅವರು ಕಳೆದುಕೊಂಡ ಹಣ ವಾಪಸ್ ಮಾಡಲಾಗಿದೆಯೇ ;

(ಇ) ಪ್ರಸಿದ್ಧ ವ್ಯಕ್ತಿಗಳ ನಕಲಿ ಫೇಸ್‌ಬುಕ್ ಮತ್ತು ಇನ್ಸ್ಟಾಗ್ರಾಂ ಖಾತೆಯಲ್ಲಿ ಅವರ ಭಾವಚಿತ್ರ ಹಾಕಿ ನಕಲಿ ಮಾಡುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಎಷ್ಟು ಪ್ರಕರಣಗಳು ದಾಖಲಾಗಿವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಇದನ್ನು ತಡೆಯಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ಹಾಗೂ ಎಷ್ಟು ಆಪಾಧಿತರನ್ನು ಬಂಧಿಸಿದೆ ಮತ್ತು ಶಿಕ್ಷೆಯಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಇಂತಹ ಪ್ರಕರಣಗಳಲ್ಲಿ ಭಾಗಿಯಾದವರಲ್ಲಿ ನಮ್ಮ ರಾಜ್ಯದವರು ಎಷ್ಟು ; ಹೊರರಾಜ್ಯದವರು ಎಷ್ಟು ? (ವಿವರ ನೀಡುವುದು)

## ಸಣ್ಣ ಕೆರೆಗಳು ಮತ್ತು ಅಂತರ್ಜಲ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೫೧ (೨೫೮) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಈ) ಕಳೆದ ಒಂದು ವರ್ಷದಲ್ಲಿ ರಾಜ್ಯದಲ್ಲಿ ಎಷ್ಟು ಕೆರೆಗಳ ಹೂಳೆತ್ತುವ ಕಾರ್ಯವನ್ನು ಕೈಗೊಳ್ಳಲಾಗಿದೆ ; ಇದಕ್ಕಾಗಿ ಖರ್ಚಾಗಿರುವ ಹಣ ಎಷ್ಟು ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಸಣ್ಣ ನೀರಾವರಿ ಇಲಾಖೆಯಿಂದ ನಿರ್ವಹಣೆ ಮಾಡುತ್ತಿರುವ ಕೆರೆಗಳ ಸಂಖ್ಯೆ ಎಷ್ಟು ; (ಕೆರೆಗಳ ವಿಸ್ತೀರ್ಣದೊಂದಿಗೆ ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಕಳೆದ ಐದು ವರ್ಷಗಳಲ್ಲಿ ಸಣ್ಣ ನೀರಾವರಿ ಇಲಾಖೆಗೆ ನೀಡಲಾದ ಅನುದಾನ ಎಷ್ಟು ; ಯಾವ ಯಾವ ಯೋಜನೆಗೆ ಎಷ್ಟು ಮೊತ್ತ ನಿಗದಿಪಡಿಸಲಾಗಿದೆ ಮತ್ತು ಎಷ್ಟು ಮೊತ್ತ ಖರ್ಚು ಮಾಡಲಾಗಿದೆ ; (ಯೋಜನಾವಾರು, ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಅಂತರ್ಜಲ ಮರುಪೂರಣಕ್ಕೆ ಸರ್ಕಾರ ಕೈಗೊಂಡ ಕಾರ್ಯಕ್ರಮಗಳು ಯಾವುವು ; ಇದಕ್ಕಾಗಿ ಕಳೆದ ಐದು ವರ್ಷಗಳಲ್ಲಿ ಖರ್ಚು ಮಾಡಲಾದ ಅನುದಾನ ಎಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಮೈಕ್ರೊ ಫೈನಾನ್ಸ್‌ಗಳ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೫೨ (೨೫೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ನೋಂದಾಯಿತ ಮತ್ತು ನೋಂದಣಿಯಾಗದ ಮೈಕ್ರೊ ಫೈನಾನ್ಸ್ ಕಂಪನಿಗಳು ಕಾರ್ಯನಿರ್ವಹಿಸುತ್ತಿವೆ ; ಈ ಕಂಪನಿಗಳು ನೀಡಿರುವ ಸಾಲದ ಮೊತ್ತ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಮೈಕ್ರೊ ಫೈನಾನ್ಸ್‌ಗೆ ನಿಗದಿಪಡಿಸಿರುವ ಬಡ್ಡಿ ದರ ಎಷ್ಟು ; ಅತಿ ಹೆಚ್ಚು ಬಡ್ಡಿ, ಚಕ್ರ ಬಡ್ಡಿ ಪಡೆದಿರುವ ಮೈಕ್ರೊ ಫೈನಾನ್ಸ್ ಕಂಪನಿಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಮೈಕ್ರೊ ಫೈನಾನ್ಸ್ ಕಂಪನಿಗಳು ಒಬ್ಬ ವ್ಯಕ್ತಿಗೆ ಯಾವ ದಾಖಲಾತಿ ಇಲ್ಲದೆ ಎಷ್ಟು ಸಾಲ ನೀಡಬಹುದು ; ಸಾಲ ಪಡೆದ ವ್ಯಕ್ತಿಗೆ ವಿಮೆ ಮಾಡಿಸುವುದು ಕಡ್ಡಾಯವೇ ;

(ಈ) ಮೈಕ್ರೊ ಫೈನಾನ್ಸ್ ಕಂಪನಿಗಳು ಸಾಲ ಪಡೆಯುವಾಗ ವಿಮೆ ಹಣ ಎಂದು ಪಡೆಯುತ್ತಿದ್ದು, ಆತ್ಮಹತ್ಯೆ ಮಾಡಿಕೊಂಡ ವ್ಯಕ್ತಿಗೆ ಅಥವಾ ಆಕಸ್ಮಿಕ ಸಾವನ್ನಪ್ಪಿದ ವ್ಯಕ್ತಿಗೆ ಕಂಪನಿಗಳು ವಿಮೆ ಹಣವನ್ನು ನೀಡಿದೆಯೇ ; ನೀಡಿದ್ದಲ್ಲಿ, ಎಷ್ಟು ಹಣ ನೀಡಲಾಗಿದೆ ;

(ಉ) ರಾಜ್ಯದಲ್ಲಿ ಮೈಕ್ರೊ ಫೈನಾನ್ಸ್ ನಿಲ್ಲಿಸುವ ಯೋಜನೆ ಸರ್ಕಾರಕ್ಕೆ ಇದೆಯೇ ;

(ಊ) ಸಹಕಾರ ಬ್ಯಾಂಕ್‌ಗಳಲ್ಲಿ ಸಾಲ ಪಡೆಯಲು ಸುಲಭವಾಗುವಂತೆ ನಿಯಮಗಳಲ್ಲಿ ಬದಲಾವಣೆ ಮಾಡಲು ಸರ್ಕಾರ ಚಿಂತಿಸಿದೆಯೇ ?

## ಪಿ.ಆರ್.ಆರ್–೨ ಯೋಜನೆಯ ಅನುಷ್ಠಾನದ ಕುರಿತು

**ಶ್ರೀ ಶರವಣ ಟಿ.ಎ. (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೩ (೩೦೯) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಿ.ಆರ್.ಆರ್–೨ ಯೋಜನೆಗಾಗಿ ಯಾವಾಗ ಅಧಿಸೂಚನೆ ಹೊರಡಿಸಲಾಯಿತು ; (ಅಧಿಸೂಚನೆ ಪ್ರತಿಯನ್ನು ನೀಡುವುದು)

(ಆ) ಈ ಅಧಿಸೂಚನೆ ವ್ಯಾಪ್ತಿಗೆ ಬರುವ ಹಲವು ಸರ್ವೆ ನಂಬರಗಳನ್ನು ಅಧಿಸೂಚನೆ ನಂತರ ಭೂ ಪರಿವರ್ತನೆ, ನಿವೇಶನ ರಚಿಸಿ ಮಾರಾಟ ಮಾಡಿ ಮನೆ ನಿರ್ಮಾಣ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಪಿ.ಆರ್.ಆರ್–೨ ವ್ಯಾಪ್ತಿಗೆ ಒಳಪಟ್ಟ ಸರ್ವೆ ನಂಬರ್‌ಗಳ ಮಾರಾಟ ಪ್ರಕ್ರಿಯೆಯನ್ನು ತಡೆಯದಿರಲು ಕಾರಣಗಳೇನು ;

(ಈ) ಅಧಿಸೂಚನೆ ಅರಿವು ಇಲ್ಲದೆ ಸಾರ್ವಜನಿಕರು ನಿವೇಶನ ಖರೀದಿಸಿ ಮನೆ ನಿರ್ಮಿಸಿದ್ದು, ಸದರಿ ಮನೆಗಳನ್ನು ಕಳೆದುಕೊಳ್ಳುವ ಭೀತಿಯಲ್ಲಿರುವ ಸಾರ್ವಜನಿಕರಿಗೆ ಸರ್ಕಾರ ನೀಡುವ ಪರಿಹಾರಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ದರ ಹೆಚ್ಚಳದ ಕುರಿತು

**ಶ್ರೀ ಶರವಣ ಟಿ.ಎ. (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೪ (೩೧೦) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನಲ್ಲಿ ಕುಡಿಯುವ ನೀರಿನ ದರವನ್ನು ಹೆಚ್ಚು ಮಾಡುವ ಪ್ರಸ್ತಾವ ಇದೆಯೇ ; ಪ್ರಸ್ತಾವದ ಸಂಪೂರ್ಣ ಮಾಹಿತಿ ನೀಡುವುದು ;

(ಆ) ನೀರಿನ ದರ ಹೆಚ್ಚಳಕ್ಕಾಗಿ ಯಾವುದಾದರು ಸಮಿತಿಯನ್ನು ರಚಿಸಲಾಗಿದೆಯೇ; ಹಾಗಿದ್ದಲ್ಲಿ, ಸಮಿತಿಯ ಸದಸ್ಯರ ವಿವರ ಮತ್ತು ಸಮಿತಿ ನೀಡಿದ ವರದಿಯ ವಿವರ ನೀಡುವುದು ;

(ಇ) ಪ್ರಸ್ತುತ ಬೇಸಿಗೆಯಲ್ಲಿ ಖಾಸಗಿ ಟ್ಯಾಂಕರ್‌ಗಳು ಮನಸೋ ಇಚ್ಛೆ ನೀರಿನ ದರ ನಿಗದಿ ಮಾಡಿ ಸಾರ್ವಜನಿಕರ ಸುಲಿಗೆ ಮಾಡುತ್ತಿದ್ದು ಇದರ ನಿಯಂತ್ರಣಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಬೆಂಗಳೂರಿನಲ್ಲಿ ನೀರಿನ ಕೊರತೆ ಇರುವ ಕಡೆಗಳಲ್ಲಿ ಖಾಸಗಿ ಬೋರ್‌ವೆಲ್‌ಗಳನ್ನು ಸಾರ್ವಜನಿಕ ಉದ್ದೇಶಕ್ಕೆ ಬಳಕೆ ಮಾಡಲು ಉದ್ದೇಶಿಸಿದೆಯೇ ; ಉದ್ದೇಶಿಸಿದ್ದಲ್ಲಿ, ಖಾಸಗಿ ಬೋರ್‌ವೆಲ್‌ಗಳ ಮಾಲೀಕರಿಗೆ ನೀಡುವ ಪರಿಹಾರಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಕಲಬುರಗಿ ಜಿಲ್ಲೆಯ ಜೇವರ್ಗಿ ಪುರಸಭೆ ಚುನಾವಣೆಯಲ್ಲಿ ಏಕ ಪಕ್ಷೀಯವಾಗಿ ಕಾನೂನು ಉಲಂಘನೆ ಮಾಡಿ ಸದಸ್ಯರನ್ನು ಅಪಹರಿಸಿದ್ದಲ್ಲದೆ ಜಿಲ್ಲೆಯ ಶಾಸಕರ ಮೇಲೆ ದೌರ್ಜನ್ಯ ನಡೆಸಿದ ಪೊಲೀಸ್ ಅಧಿಕಾರಿಗಳ ಬಗ್ಗೆ

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೨೫೫ (೩೦೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಜಿಲ್ಲೆಯ ಜೇವರ್ಗಿ ತಾಲ್ಲೂಕಿನ ಪುರಸಭೆಗೆ ದಿನಾಂಕ:೧೨.೦೨.೨೦೨೫ ರಂದು ನಡೆದ ಚುನಾವಣೆಯಲ್ಲಿ ಭದ್ರತೆಗೆ ನಿಯೋಜನೆಗೊಂಡಿದ್ದ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಹಾಗೂ ತಾಲ್ಲೂಕಿನ ಪೊಲೀಸ್ ವೃತ್ತ ನಿರೀಕ್ಷಕರುಗಳಿಂದ ಕರ್ತವ್ಯ ಲೋಪವಾಗಿದ್ದು ಏಕ ಪಕ್ಷಿಯ ನಡವಳಿಕೆ ತೋರಿಸಿ ಕಾನೂನುಬಾಹಿರ ಕೆಲಸ ಮಾಡಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಆ ದಿನದ ಚುನಾವಣೆಯಲ್ಲಿ ಬಿಜೆಪಿ ಬೆಂಬಲಿತ ಸದಸ್ಯರನ್ನು ಹೆಣ್ಣುಮಕ್ಕಳೆಂದು ಕೂಡ ಲೆಕ್ಕಿಸದೆ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಹಾಗೂ ಪೊಲೀಸ್ ವೃತ್ತ ನಿರೀಕ್ಷಕರು ಜನ ಸಾಮಾನ್ಯರ ಮುಂದೆಯೇ ಅಪಹರಿಸಿಕೊಂಡು ಹೋಗಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಅ ಸಮಯದಲ್ಲಿ ಪ್ರಶ್ನಿಸಿದ ಆ ಜಿಲ್ಲೆಯ ವಿಧಾನ ಸಭಾ ಸದಸ್ಯರು ಹಾಗೂ ವಿಧಾನ ಪರಿಷತ್ ಸದಸ್ಯರು ಎಂಬುದನ್ನು ಕೂಡ ಲೆಕ್ಕಿಸದೆ ಅವರನ್ನು ತಳ್ಳಿ ನೂಕಾಡಿ ಹಕ್ಕು ಚ್ಯುತಿ ಮಾಡಿ ಸರ್ವಾಧಿಕಾರಿ ಧೋರಣೆ ತೋರಿಸಿದ್ದ ಈ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೨೫೬ (೩೫೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೧, ೨೦೧೪, ೨೦೧೫ ಮತ್ತು ೨೦೧೭-೧೮ನೇ ಸಾಲಿನ ಕರ್ನಾಟಕ ಲೋಕಸೇವಾ ಆಯೋಗವು ಕೆಎಎಸ್ ಗೆಜೆಟೆಡ್ ಪ್ರೊಬೇಷನರಿ ಪರೀಕ್ಷೆಯಲ್ಲಿ ಒಟ್ಟು ಎಷ್ಟು ಜನ ಅಭ್ಯರ್ಥಿಗಳು ಮುಖ್ಯ ಪರೀಕ್ಷೆಯನ್ನು ಬರೆದಿದ್ದಾರೆ ; ಇದರಲ್ಲಿ ಎಷ್ಟು ಜನ ಅಭ್ಯರ್ಥಿಗಳು ಕನ್ನಡ ಮಾಧ್ಯಮ ಮತ್ತು ಆಂಗ್ಲ ಮಾಧ್ಯಮದಲ್ಲಿ ಮುಖ್ಯ ಪರೀಕ್ಷೆಯನ್ನು ಬರೆದಿದ್ದಾರೆ ಹಾಗೂ ಅಂತಿಮ ಆಯ್ಕೆ ಪಟ್ಟಿಯಲ್ಲಿ ಎಷ್ಟು ಜನ ಅಭ್ಯರ್ಥಿಗಳು ಕನ್ನಡ ಮಾಧ್ಯಮ ಮತ್ತು ಆಂಗ್ಲ ಮಾಧ್ಯಮದಲ್ಲಿ ಮುಖ್ಯ ಪರೀಕ್ಷೆಯನ್ನು ಬರೆದವರಾಗಿದ್ದಾರೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ೨೦೨೩-೨೪ನೇ ಸಾಲಿನ ಕೆಎಎಸ್ ಗೆಜೆಟೆಡ್ ಪ್ರೊಬೇಷನರ್ ಪೂರ್ವ ಭಾವಿ ಪರೀಕ್ಷೆಯ ಮುಖ್ಯ ಪರೀಕ್ಷೆಗೆ ಅರ್ಹತೆ ಪಡೆದ ಒಟ್ಟು ಎಷ್ಟು ಜನ ಅಭ್ಯರ್ಥಿಗಳು ಕನ್ನಡ ಮಾಧ್ಯಮ ಮತ್ತು ಆಂಗ್ಲ ಮಾಧ್ಯಮದವರಾಗಿದ್ದಾರೆ ; ಈ ಕುರಿತು ಮಾಹಿತಿಯನ್ನು ಒದಗಿಸುವುದು ;

(ಇ) ೨೦೨೪ರ ಡಿಸೆಂಬರ್ ೨೯ ರಂದು ಕೆಎಎಸ್ ಮರು ಪರೀಕ್ಷೆಯನ್ನು ನಡೆಸಲು ಕಾರಣವೇನು ;

(ಈ) ಮರು ಪರೀಕ್ಷೆಗೆ ತಗುಲಿರುವ ಒಟ್ಟು ವೆಚ್ಚ ಎಷ್ಟು ; (ವೆಚ್ಚದ ಪೂರ್ಣ ವಿವರ ನೀಡುವುದು)

(ಉ) ಕೆಲವು ರಾಜ್ಯಗಳಲ್ಲಿ ಲೋಕಸೇವಾ ಆಯೋಗಗಳ ಮೂಲಕ ನಡೆಸುವ ಪರೀಕ್ಷೆಗಳಲ್ಲಿ ಆ ರಾಜ್ಯದ ಆಡಳಿತ ಭಾಷೆಗೆ ಮೊದಲ ಪ್ರಾಶಸ್ತ್ಯ ನೀಡಿ ಪರೀಕ್ಷೆ ನಡೆಸುತ್ತಿದ್ದು, ಕರ್ನಾಟಕ ಲೋಕಸೇವಾ ಆಯೋಗವು ಯಾವುದೇ ಪರೀಕ್ಷೆ ನಡೆಸಿದರೂ ಆಂಗ್ಲ ಭಾಷೆಗೆ ಮೊದಲ ಪ್ರಾಶಸ್ತ್ಯ ನೀಡುತ್ತಿರುವುದು ಕರ್ನಾಟಕ ಸರ್ಕಾರದ ಆಡಳಿತ ಭಾಷಾ ಅನುಷ್ಠಾನ ನಿಯಮದ ಉಲ್ಲಂಘನೆಯಲ್ಲವೇ ; ಈ ಕುರಿತು ಸರ್ಕಾರ ಕೈಗೊಳ್ಳಬಹುದಾದ ಸ್ಪಷ್ಟ ನಿಲುವೇನು ? (ವಿವರ ನೀಡುವುದು)

## ಮುಖ್ಯಮಂತ್ರಿಗಳ ಪರಿಹಾರ ನಿಧಿಯ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೨೫೭ (೩೫೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮುಖ್ಯಮಂತ್ರಿ ಪರಿಹಾರ ನಿಧಿ ಅಡಿಯಲ್ಲಿ ಯಾವ ಯಾವ ಕಾಯಿಲೆಗಳಿಗೆ ಚಿಕಿತ್ಸೆ ಹಾಗೂ ಪರಿಹಾರ ಧನವನ್ನು ನೀಡಲಾಗುತ್ತದೆ ; ಚಿಕಿತ್ಸೆ ಹಾಗೂ ಪರಿಹಾರ ಧನಕ್ಕೆ ಇರುವ ನಿಯಮ ಹಾಗೂ ನಿಬಂಧನೆಗಳು ಯಾವುವು ; (ಸಂಪೂರ್ಣ ವಿವರಣೆ ನೀಡುವುದು)

(ಆ) ಒಬ್ಬ ವ್ಯಕ್ತಿಯು ಅಥವಾ ರೋಗಿಯು ತನ್ನ ಜೀವಿತಾವಧಿಯಲ್ಲಿ ಎಷ್ಟು ಬಾರಿ ಚಿಕಿತ್ಸೆಗೆ ಪರಿಹಾರ ಧನವನ್ನು ಪಡೆಯಬಹುದು ; ಕೇವಲ ಒಂದು ಬಾರಿ ಎಂತಾದರೆ ಹೆಚ್ಚು ಪರಿಹಾರ ಧನ ಪಡೆದ ವ್ಯಕ್ತಿ ಹಾಗೂ ಕಡಿಮೆ ಪರಿಹಾರ ಧನ ಪಡೆದ ವ್ಯಕ್ತಿಗೆ ಒಂದೇ ನಿಯಮ ಎನ್ನುವುದು ಯಾವ ರೀತಿಯ ಮಾನದಂಡ ಈ ನಿಯಮದಿಂದ ತಾರತಮ್ಯವಾಗುವುದಿಲ್ಲವೇ ; ಒಬ್ಬ ವ್ಯಕ್ತಿಗೆ ಜೀವಿತಾವಧಿಯಲ್ಲಿ ಪರಿಹಾರ ಧನವನ್ನು ಒಂದು ಮಿತಿಗೆ ನಿರ್ಧರಿಸುವ ಆಲೋಚನೆ ಇದೆಯೇ ; (ವಿವರಣೆ ನೀಡುವುದು)

(ಇ) ಮುಖ್ಯಮಂತ್ರಿ ಪರಿಹಾರ ನಿಧಿಯಿಂದ ಕ್ಯಾನ್ಸರ್ ಹಾಗೂ ಕಿಡ್ನಿ ಸಂಬಂಧಿತ ಕಾಯಿಲೆಗಳಿಗೆ ಮಾತ್ರ ಔಷಧಿ ಹಾಗೂ ಚಿಕಿತ್ಸೆ ವೆಚ್ಚ ಎರಡನ್ನೂ ಪರಿಗಣಿಸಲಾಗುತ್ತಿದ್ದು, ಬೇರೆ ಬೇರೆ ಚಿಕಿತ್ಸೆಗಳ ವೆಚ್ಚವು ಹೆಚ್ಚಾಗಿದ್ದರೂ ಕೂಡ ಕೇವಲ ಚಿಕಿತ್ಸೆಗೆ ಮಾತ್ರ ಪರಿಹಾರ ಧನ ನೀಡಲು ಕಾರಣವೇನು ; ಈ ಬಗ್ಗೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ?

## ಬೀದರ್ ಜಿಲ್ಲೆಯಲ್ಲಿ ನಡೆದ ಬ್ಯಾಂಕ್ ದರೋಡೆಯಲ್ಲಿ ಸಾವಿಗೀಡಾದ ಹಾಗೂ ಗಾಯಗೊಂಡವರಿಗೆ ಪರಿಹಾರ ನೀಡುವ ಬಗ್ಗೆ

**ಶ್ರೀ ಶಶೀಲ್ ಜಿ ನಮೋಶಿ (ಶಿಕ್ಷಕರ ಕ್ಷೇತ್ರ) :-**

೨೫೮ (೩೫೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಿನಾಂಕ : ೧೬.೧೧.೨೦೨೫ರಂದು ಬೀದರ್ ಜಿಲ್ಲೆಯಲ್ಲಿ ಹಗಲೇ ಎಸ್.ಬಿ.ಐ ಬ್ಯಾಂಕ್ ನಿಂದ ಎ.ಟಿ.ಎಂ ಗೆ ಹಣವನ್ನು ಸಾಗಿಸುವ ಸಮಯದಲ್ಲಿ ದರೋಡೆ ಕೋರರು ಗುಂಡಿನ ದಾಳಿ ನಡೆಸಿದ ಪರಿಣಾಮ ಎಸ್.ಬಿ.ಐ ನ ಸಿಎಂಸಿ ಕಂಪನಿಯ ಕ್ಯಾಶ್ ಕಸ್ಟೋಡಿಯನ್‌ಗಳಾದ ವೆಂಕಟೇಶ ಮಲ್ಲಪ್ಪ, ಇವರುಗಳು ಸ್ಥಳದಲ್ಲೇ ಸಾವನ್ನಪ್ಪಿದ್ದು ಹಾಗೂ ಇನೋರ್ವರಾದ ಶಿವಕುಮಾರ್ ಕಾಶಿನಾಥ್ ರವರು ತೀವ್ರವಾಗಿ ಗಾಯಗೊಂಡಿದ್ದು. ಈ ಇಬ್ಬರಿಗೂ ಸರ್ಕಾರ ಯಾವ ಪರಿಹಾರವನ್ನು ನೀಡಿದೆ ;

(ಆ) ದಾಳಿಗೀಡಾಗಿ ಸಾವನ್ನಪ್ಪಿದ ವೆಂಕಟೇಶ ಮಲ್ಲಪ್ಪ ಹಾಗೂ ತೀವ್ರ ದಾಳಿಗೊಳಗಾಗಿದ್ದ ಶಿವಕುಮಾರ್ ಕಾಶಿನಾಥ್ ರವರು ತಮ್ಮ ಕುಟುಂಬ ನಿರ್ವಹಣೆಯ ಏಕ ಮಾತ್ರ ಜವಾಬ್ದಾರಿಯವರಾಗಿದ್ದು, ಈ ಪೈಕಿ ದಿವಂಗತ ವೆಂಕಟೇಶ ಮಲ್ಲಪ್ಪ ಅವರಿಗೆ ಸಮಾಜ

ಕಲ್ಯಾಣ ಇಲಾಖೆಯಿಂದ ೮ ಲಕ್ಷ ರೂಪಾಯಿ ಪರಿಹಾರ ಹಾಗೂ ಅವರ ತಾಯಿಗೆ ೫೦೦೦ ಮಾಶಾಸನ ಕುಟುಂಬದ ಒಬ್ಬರಿಗೆ ಸಮಾಜ ಕಲ್ಯಾಣ ಇಲಾಖೆಯಿಂದ ಹೊರಗುತ್ತಿಗೆ ನೌಕರಿ ನೀಡುವುದಾಗಿ ಹಾಗೂ ಮುಖ್ಯಮಂತ್ರಿ ಪರಿಹಾರ ನಿಧಿಯಿಂದ ೧೦ ಲಕ್ಷ ರೂಪಾಯಿ ಹೆಚ್ಚುವರಿ ಪರಿಹಾರ ಒದಗಿಸುವ ಭರವಸೆಯನ್ನು ಅಲ್ಲಿನ ಜಿಲ್ಲಾ ಉಸ್ತುವಾರಿ ಸಚಿವರು ನೀಡಿದ್ದು ಇನ್ನೊರ್ವರಾದ ಶಿವಕುಮಾರ್ ಕಾಶಿನಾಥ್ ರವರ ಕುಟುಂಬವು ಕೂಡ ಸಂಪೂರ್ಣವಾಗಿ ಅವರ ಮೇಲೆ ಅವಲಂಬಿತವಾಗಿದ್ದರೂ ಕೂಡ ಅವರಿಗೆ ಇಲ್ಲಿಯವರೆಗೂ ಇಲಾಖೆಯಿಂದ ಆಗಲಿ ಅಥವಾ ಮುಖ್ಯಮಂತ್ರಿ ಪರಿಹಾರದಿಂದಾಗಲಿ ಯಾವುದೇ ಪರಿಹಾರವನ್ನು ನೀಡದ್ದೆ ಇರಲು ಕಾರಣವೇನು ; (ವಿವರ ನೀಡುವುದು)

(ಇ) ಯಾವ ಕಾಲಮಿತಿಯಲ್ಲಿ ಶಿವಕುಮಾರ್ ಕಾಶಿನಾಥ್ ರವರಿಗೆ ಪರಿಹಾರ ಧನ ಹಾಗೂ ಕುಟುಂಬ ನಿರ್ವಹಣೆಗಾಗಿ ಒಬ್ಬ ಕುಟುಂಬ ಸದಸ್ಯರಿಗೆ ಹೊರಗುತ್ತಿಗೆ ಕೆಲಸ ನೀಡಲಾಗುವುದು ಹಾಗೂ ಕುಟುಂಬ ಸದಸ್ಯರೊಬ್ಬರಿಗೆ ಮಾಶಾಸನ ವ್ಯವಸ್ಥೆ ಮಾಡಲಾಗುತ್ತದೆಯೇ ?

## ಉತ್ತರ ಕನ್ನಡ ಜಿಲ್ಲೆಯ ಬುಡಕಟ್ಟು ಜನಾಂಗದವರಿಗೆ ನೀರಿನ ಸಮಸ್ಯೆ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೨೫೯ (೨೯೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉತ್ತರ ಕನ್ನಡ ಜಿಲ್ಲೆಯಲ್ಲಿ ಬಹುತೇಕ ಬುಡಕಟ್ಟು ಜನಾಂಗದ ಹಳ್ಳಿಗಳು ಜನವಸತಿ ಕಾಲೋನಿ ರೂಪದಲ್ಲಿ ಇರದೆ ಒಂದೊಂದೆ ಮನೆಗಳು ದೂರ ದೂರದಲ್ಲಿ ಇರುವುದರಿಂದ ಸರಿಯಾದ ಕುಡಿಯುವ ನೀರಿನ ವ್ಯವಸ್ಥೆ ಇಲ್ಲದೆ ಹತ್ತಿರದ ಹಳ್ಳ, ನದಿ, ಬೆಟ್ಟದಿಂದ ಬರುವ ನೀರನ್ನೆ ಕುಡಿಯಲು ಉಪಯೋಗಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಉತ್ತರ ಕನ್ನಡ ಜಿಲ್ಲೆಯ ಬುಡಕಟ್ಟು ಜನಾಂಗದವರ ಕುಡಿಯುವ ನೀರಿನ ಸಮಸ್ಯೆಗಾಗಿ ವಿಶೇಷ ಅನುದಾನ ಘೋಷಿಸಿ ಇವರಿಗೆ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವ ಯೋಜನೆ ಸರ್ಕಾರಕ್ಕೆ ಇದೆಯೇ ; ಇದ್ದಲ್ಲಿ ಮುಂದಿನ ಕ್ರಮಗಳೇನು ?

## ಬುಡಕಟ್ಟು ಜನರ ಪುನರ್ವಸತಿ ಕೇಂದ್ರಗಳ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೨೬೦ (೨೯ಳ) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಅರಣ್ಯ ಪ್ರದೇಶದಿಂದ ಒಕ್ಕಲೆಬ್ಬಿಸಿದ ಬುಡಕಟ್ಟು ಜನಾಂಗಕ್ಕಾಗಿ ನಿರ್ಮಾಣಗೊಂಡ ಪುನರ್ವಸತಿ ಕೇಂದ್ರಗಳು ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಪುನರ್ವಸತಿ ಕೇಂದ್ರಗಳಲ್ಲಿ ಸಂಪೂರ್ಣ ಮುಲಭೂತ ವ್ಯವಸ್ಥೆ ಪೂರ್ಣಗೊಂಡ ಕೇಂದ್ರಗಳು ಮತ್ತು ಪೂರ್ಣಗೊಳ್ಳದೆ ಇರುವ ಕೇಂದ್ರಗಳು ಯಾವುವು ;

(ಇ) ಮೂಲಭೂತ ಸೌಲಭ್ಯ ಪೂರ್ಣಗೊಳ್ಳದೆ ಇರುವ ಪುನರ್ವಸತಿ ಕೇಂದ್ರಗಳಿಗೆ ಮೂಲಭೂತ ಸೌಲಭ್ಯ ಕಲ್ಪಿಸದಿರಲು ಕಾರಣವೇನು; ಈ ಕುರಿತು ಸರ್ಕಾರದ ನಿಲುವೇನು ?

## ಚಾಮರಾಜನಗರ ಜಿಲ್ಲೆಯ "ಡೊಂಗ್ರಿ ಗರಾಸಿಯ" ಜನಾಂಗದ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೨೬೧ (೩೧೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಾಮರಾಜನಗರ ಜಿಲ್ಲೆಯಲ್ಲಿ ಅಸ್ತಿತ್ವದ ಅಳಿವಿನಂಚಿರುವ ಬುಡಕಟ್ಟು ಡೊಂಗ್ರಿ ಗರಾಸಿಯ ಜನಾಂಗದ ಒಟ್ಟು ಎಷ್ಟು ಕುಟುಂಬಗಳಿವೆ ; ಇದರಲ್ಲಿ ಜಮೀನು ಮತ್ತು ಮನೆಗಳನ್ನು ಹೊಂದಿರುವ ಕುಟುಂಬಗಳೆಷ್ಟು ;

(ಆ) ಗುಂಡ್ಲುಪೇಟೆ ನಗರದ ವಾರ್ಡ್ ನಂಬರ್-೨೩ರ ಬಿ.ಜೆ.ಆರ್. ಬಡಾವಣೆಯಲ್ಲಿ ಇರುವ ೧೫ ಡೊಂಗ್ರಿ ಗರಾಸಿಯ ಕುಟುಂಬಗಳು ಸ್ವಂತ ಜಾಗ ಮತ್ತು ಮನೆಗಳಿಲ್ಲದೆ ಮೂಲಭೂತ ಸೌಕರ್ಯಗಳಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇವರುಗಳಿಗೆ ವಸತಿ ಮತ್ತು ಮೂಲಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ಕ್ರಮವಹಿಸುವುದೆ ?

## ಅಭಿವೃದ್ಧಿ ನಿಗಮಗಳಿಗೆ ನೀಡಿರುವ ಅನುದಾನದ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :-**

೨೬೨ (೨೮೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಐದು ವರ್ಷಗಳಲ್ಲಿ ಜಾತಿ ಆಧಾರಿತ ಅಭಿವೃದ್ಧಿ ನಿಗಮಗಳಿಗೆ ನೀಡಿರುವ ಅನುದಾನ ಎಷ್ಟು ; (ವರ್ಷವಾರು ಮತ್ತು ನಿಗಮವಾರು ಮಾಹಿತಿ ನೀಡುವುದು)

(ಆ) ಈ ನಿಗಮಗಳಿಗೆ ಅನುದಾನ ಹಂಚಿಕೆ ಮಾಡುವಾಗ ತಾರತಮ್ಯ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಈ) ಕಡಿಮೆ ಅನುದಾನವನ್ನು ನೀಡಿದ್ದಲ್ಲಿ ನಿಗಮದ ವ್ಯಾಪ್ತಿಗೆ ಬರುವ ಜನಾಂಗದವರಿಗೆ ಅನುಕೂಲ ಮಾಡಲು ಸಾಧ್ಯವಾಗದಿರುವುದು ಸರ್ಕಾರಕ್ಕೆ ಗಮನಕ್ಕೆ ಬಂದಿದೆಯೇ ;

(ಉ) ಹಿಂದುಳಿದ ವರ್ಗಗಳ ಜಾತಿ ಆಧಾರಿತ ಅಭಿವೃದ್ಧಿ ನಿಗಮಕ್ಕೆ ಹೆಚ್ಚಿನ ಅನುದಾನ ನೀಡಲು ಸರ್ಕಾರ ಕ್ರಮಕೈಗೊಳ್ಳುವುದೆ ?

## ಪ್ರವಾಸೋದ್ಯಮ ಇಲಾಖೆಯಿಂದ ಲಘು ವಾಹನಗಳನ್ನು ನೀಡಿರುವ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :-**

೨೬೩ (೨೮೨) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೪-೨೫ನೇ ಸಾಲಿನಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ನೀಡುತ್ತಿರುವ ಲಘು ವಾಹನಗಳ ಸಂಖ್ಯೆ ಎಷ್ಟು ;

(ಆ) ವಾಹನಗಳನ್ನು ನೀಡುವಂತೆ ಕೋರಿ ಬಂದಿರುವ ಅಭ್ಯರ್ಥಿಗಳ ಸಂಖ್ಯೆ ಎಷ್ಟು ; ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ವಾಹನಗಳನ್ನು ಖರೀದಿಸಲು ಫಲಾನುಭವಿಗಳು ನೀಡಬೇಕಾದ ವಂತಿಕೆ ಎಷ್ಟು, ಲಘು ವಾಹನಗಳ ಖರೀದಿಗಾಗಿ ಅರ್ಜಿ ಸಲ್ಲಿಸಿರುವ ಎಲ್ಲಾ ಅಭ್ಯರ್ಥಿಗಳಿಗೆ ವಾಹನಗಳು ವಿತರಿಸಲಾಗುತ್ತಿದೆಯೇ ;

(ಈ) ಎಲ್ಲಾ ಅಭ್ಯರ್ಥಿಗಳಿಗೆ ವಾಹನಗಳ ಸೌಲಭ್ಯ ದೊರೆಯದೆ ಇದ್ದಲ್ಲಿ ದೊರಕುವಂತೆ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಸಣ್ಣ ನೀರಾವರಿ ಇಲಾಖೆಯಿಂದ ನೀಡಿರುವ ಯೋಜನೆಗಳ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :-**

೨೬೪ (೨೮೩) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೪-೨೫ನೇ ಸಾಲಿನಲ್ಲಿ ದಾವಣಗೆರೆ, ಚಿತ್ರದುರ್ಗ, ತುಮಕೂರು, ಚಿಕ್ಕಬಳ್ಳಾಪುರ ಮತ್ತು ಕೋಲಾರ ಜಿಲ್ಲೆಗಳಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಕೈಗೊಂಡಿರುವ ಯೋಜನೆಗಳು ಯಾವುವು ;

(ಆ) ಈ ಯೋಜನೆಗಳ ಅನುಷ್ಠಾನಕ್ಕಾಗಿ ಇದುವರೆವಿಗೂ ಸರ್ಕಾರದಿಂದ ಬಿಡುಗಡೆ ಮಾಡಿರುವ ಅನುದಾನ ಎಷ್ಟು ; (ಯೋಜನೆವಾರು ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳು ಹೆಚ್ಚಿನ ಕೆರೆಗಳನ್ನು ಹೊಂದಿರುವುದರಿಂದ ಇವುಗಳ ಅಭಿವೃದ್ಧಿಗಾಗಿ ಕೈಗೊಂಡಿರುವ ಕ್ರಮಗಳೇನು ;

(ಈ) ೨೦೨೪-೨೫ನೇ ಸಾಲಿನಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಮಂಜೂರು ಮಾಡಿರುವ ಬೋರ್‌ವೆಲ್‌ಗಳ ಸಂಖ್ಯೆ ಎಷ್ಟು ಹಾಗೂ ಪ್ರತಿ ಬೋರ್‌ವೆಲ್‌ಗೆ ತಗಲುವ ಘಟಕ ವೆಚ್ಚ ಎಷ್ಟು ? (ಜಿಲ್ಲಾವಾರು ಮಾಹಿತಿ ಒದಗಿಸುವುದು)

## ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ಮೀಸಲಿಟ್ಟಿರುವ ಅನುದಾನದ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :-**

೨೬೫ (೨೮೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶೇಕಡ ೬೦ಕ್ಕೂ ಹೆಚ್ಚು ಜನಸಂಖ್ಯೆ ಇರುವ ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಜನಾಂಗಕ್ಕೆ ಮೀಸಲಿಡುವ ರೀತಿಯಲ್ಲಿ ಅನುದಾನವನ್ನು ಮೀಸಲಿಡಲು ಸರ್ಕಾರ ಚಿಂತಿಸಿದೆಯೇ ;

(ಆ) ಸರ್ಕಾರದ ಆಯವ್ಯಯದಲ್ಲಿ ಯಾವುದೇ ಹಣವನ್ನು ಹಂಚಿಕೆ ಮಾಡುವಾಗ ಜನಸಂಖ್ಯೆಯ ಆಧಾರದ ಮೇಲೆ ಹಂಚಿಕೆ ಮಾಡುವ ವ್ಯವಸ್ಥೆ ನಡೆಯುತ್ತಿದೆಯೇ ;

(ಇ) ೨೦೨೫-೨೬ನೇ ಸಾಲಿಗೆ ಪ್ರವರ್ಗ-೧ರ ಜಾತಿಗಳಿಗೆ ಪ್ರತ್ಯೇಕ ಅನುದಾನವನ್ನು ಮೀಸಲಿಡುವ ಪ್ರಸ್ತಾವ ಸರ್ಕಾರದ ಮುಂದೆ ಇದೆಯೇ ?

## ಯಾಣಗುಂದಿ ಮಾತಾಮಾಣಿಕೇಶ್ವರಿ ದೇವಸ್ಥಾನವನ್ನು ಕರ್ನಾಟಕ ನೀರಾವರಿ ನಿಗಮದವತಿಯಿಂದ ಅಭಿವೃದ್ಧಿ ಪಡಿಸುವ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೬೬ (೨೩೪) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗುರುಮಿಟಕಲ್ಲಿನ ಯಾಣಗುಂದಿಯಲ್ಲಿ ಪ್ರಸಿದ್ಧವಾಗಿರುವ ಮಾತಾಮಾಣಿಕೇಶ್ವರ ದೇವಸ್ಥಾನದಲ್ಲಿ ಮಾತೆಯವರು ವರ್ಷಕ್ಕೆ ಒಂದೇ ದಿನ ಅದರಲ್ಲೂ ಶಿವರಾತ್ರಿ ದಿನ ಭಕ್ತರಿಗೆ ದರ್ಶನ ಕೊಡುತ್ತಿದ್ದ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ದೇವಸ್ಥಾನ ಬೆಣ್ಣೆತೋರಾ ಡ್ಯಾಂ ನಿಂದ ೨ ಕಿ.ಮಿ ಹತ್ತಿರದಲ್ಲಿದ್ದು ಇದರ ಅಭಿವೃದ್ಧಿ ಕಾರ್ಯವನ್ನು ಕರ್ನಾಟಕ ನೀರಾವರಿ ನಿಗಮದ ವತಿಯಿಂದಲೇ ನಿರ್ವಹಿಸಲು ಕ್ರಮವಹಿಸಲಾಗುವುದೆ ?

## Micro Finance ಕಂಪನಿಗಳ ಬಗ್ಗೆ

**ಡಾ|| ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :-**

೨೬೭ (೨೬೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) Micro Finance ಕಂಪನಿಗಳಿಂದ ಸಾಲ ತೆಗೆದುಕೊಂಡ ಮಹಿಳೆಯರ ಮೇಲೆ ದೌರ್ಜನ್ಯ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಎಷ್ಟು ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆ ; ಆ ಪ್ರಕರಣಗಳ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಈ ರೀತಿ ಕಿರುಕುಳ ಕೊಡುವ ಸಂಸ್ಥೆಗಳ ನಿಯಂತ್ರಣಕ್ಕೆ ಕಾನೂನು ರೂಪಿಸಲಾಗಿದೆಯೇ ? (ವಿವರ ನೀಡುವುದು)

## ಶುದ್ಧ ಕುಡಿಯುವ ನೀರಿನ ಘಟಕಗಳ ಬಗ್ಗೆ

**ಡಾ|| ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :-**

೨೬೮ (೨೭೦) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳಿವೆ ಅದರಲ್ಲಿ ಎಷ್ಟು ಘಟಕಗಳು ಸುಸ್ಥಿತಿಯಲ್ಲಿ ಇವೆ ಹಾಗೂ ಎಷ್ಟು ಘಟಕಗಳು ಸ್ಥಗಿತಗೊಂಡಿವೆ ;

(ಆ) ನಗರದಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳ ನಿರ್ವಹಣೆಯನ್ನು ಯಾರಿಗೆ ವಹಿಸಲಾಗಿದೆ ;

(ಇ) ಬೆಂಗಳೂರು ನಗರ ಪಾಲಿಕೆಯಲ್ಲಿ ಇರುವ ಬೋರ್‌ವೆಲ್‌ಗಳ ಸಂಖ್ಯೆ ಎಷ್ಟು ;

(ಈ) ಬೋರ್‌ವೆಲ್‌ಗಳು ಹಾಗೂ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಗೆ ಹಸ್ತಾಂತರಿಸುವ ಕುರಿತು ಸರ್ಕಾರ ಚಿಂತಿಸಿದೆಯೇ ?

## ಮಹಿಳೆಯರಿಗೆ ಬಡ್ಡಿ ಸಹಾಯಧನ ನೀಡುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :-**

೨೬೯ (೨೭೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಮೂಲಕ ಮಹಿಳೆಯರಿಗೆ ಬಡ್ಡಿ ಸಹಾಯಧನ ನೀಡಲಾಗುತ್ತಿದೆಯೇ; ಈ ಯೋಜನೆ ಪ್ರಾರಂಭಗೊಂಡಿದ್ದು ಯಾವಾಗ ;

(ಆ) ಪ್ರಾರಂಭಗೊಂಡಾಗಿನಿಂದ ೨೦೨೪ ಮಾರ್ಚ್ ವರೆಗೂ ಎಷ್ಟು ಮಹಿಳೆಯರು ಈ ಯೋಜನೆಯ ಪ್ರಯೋಜನ ಪಡೆದಿದ್ದಾರೆ ; (೧೦ ವರ್ಷಗಳ ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಯೋಜನೆ ಪಡೆದ ನಂತರ ಮೂಲ ಹಣ ಸಂಪೂರ್ಣವಾಗಿ ಪಾವತಿಸದೇ ಡಿಫಾಲ್ಟರ್ ಆಗಿರುವವರ ಸಂಖ್ಯೆ ಎಷ್ಟು ; ಅವರ ಮೇಲೆ ಕಾನೂನು ರೀತಿ ಕ್ರಮ ಕೈಗೊಳ್ಳಲಾಗಿದೆಯೇ ?

## ಬೀದಿ ನಾಯಿಗಳಲ್ಲಿ ರೇಬೀಸ್ ರೋಗ ತಡೆಯುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು)** :-

೨೭೦ (೨೭೨) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಎಷ್ಟು ಬೀದಿ ಶ್ವಾನಗಳಿವೆ; ಅವುಗಳಲ್ಲಿ ಎಷ್ಟು ಶ್ವಾನಗಳು ಸಂತಾನಹರಣ ಚಿಕಿತ್ಸೆಗೆ ಒಳಪಟ್ಟಿವೆ ;

(ಆ) ರೇಬೀಸ್ ರೋಗ ತಡೆಗಟ್ಟಲು ರೇಬೀಸ್ ನಿರೋಧಕ ಲಸಿಕೆಯನ್ನು ಎಷ್ಟು ಶ್ವಾನಗಳಿಗೆ ನೀಡಲಾಗಿದೆ ;

(ಇ) ಪ್ರತಿ ವರ್ಷ ಇಂತಿಷ್ಟು ಶ್ವಾನಗಳಿಗೆ ಎಷ್ಟು ಗುರಿ ನಿಗದಿಗೊಳಿಸಲಾಗಿದೆಯೇ ;

(ಈ) "ಸಂಯುಕ್ತ ಲಸಿಕೆ" ಕಾರ್ಯಕ್ರಮದ ಅಡಿಯಲ್ಲಿ ಎಷ್ಟು ಶ್ವಾನಗಳಿಗೆ ಲಸಿಕೆ ಹಾಕಲಾಗಿದೆ ; ಈ ಕಾರ್ಯಕ್ರಮಕ್ಕೆ ಎಷ್ಟು ಹಣ ವ್ಯಯಿಸಲಾಗಿದೆ ?

## ಕಾನೂನು ಕಾಲೇಜು ಮಂಜೂರಾತಿ ನೀಡುವ ಕುರಿತು

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು)** :-

೨೭೧ (೨೨೨) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಿಂಧನೂರು ತಾಲ್ಲೂಕಿಗೆ ಕಾನೂನು ಕಾಲೇಜು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಇದ್ದಲ್ಲಿ ಯಾವ ಕಾಲಮಿತಿಯೊಳಗೆ ಮಂಜೂರು ಮಾಡಲು ಕ್ರಮ ಕೈಗೊಳ್ಳಲಾಗುವುದು ?

## ಬೀದರ್ ಜಿಲ್ಲೆಗೆ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯಿಂದ ಅನುದಾನ ಬಿಡುಗಡೆ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೭೨ (೨೮೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯಿಂದ ವಿವಿಧ ಯೋಜನೆ ಅಡಿಯಲ್ಲಿ ಜಿಲ್ಲೆಗೆ ಬಿಡುಗಡೆಯಾದ ಅನುದಾನವೆಷ್ಟು ; ಬಿಡುಗಡೆಯಾದ ಅನುದಾನದಲ್ಲಿ ಯಾವ ಯಾವ ಕಾಮಗಾರಿಗೆ ಅನುದಾನ ಬಿಡುಗಡೆ ಮಾಡಲಾಗಿದೆ ; (ತಾಲ್ಲೂಕವಾರು ಮಾಹಿತಿ ನೀಡುವುದು)

(ಆ) ಈ ಜಿಲ್ಲೆಯಿಂದ ಅನುದಾನ ಬಿಡುಗಡೆಗಾಗಿ ಹೊಸದಾಗಿ ಪ್ರಸ್ತಾವನೆ ಏನಾದರೂ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ?

## ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ದರೋಡೆ, ಕಳ್ಳತನ ಹತ್ಯೆ ಹೆಚ್ಚಾಗಿರುವ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೭೩ (೨೮೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಕಳೆದ ೩–೪ ತಿಂಗಳುಗಳಿಂದ ದರೋಡೆ, ಕಳ್ಳತನ, ಹತ್ಯೆ ಪ್ರಕರಣಗಳು ಅಧಿಕಗೊಳ್ಳುತ್ತಿದ್ದು, ಇದರಿಂದ ಸಾರ್ವಜನಿಕರು ಭಯ ಭೀತಿಯಲ್ಲಿ ಓಡಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಈ ಪ್ರಕರಣಗಳ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ; (ವಿವರ ನೀಡುವುದು)

(ಆ) ಸದರಿ ಜಿಲ್ಲೆಯಲ್ಲಿ ಇಲ್ಲಿಯವರೆಗೆ ಎಷ್ಟು ಜನರನ್ನು ಬಂಧಿಸಿದ ಪ್ರಕರಣ ದಾಖಲಿಸಲಾಗಿದೆ ಹಾಗೂ ಇವರುಗಳ ಮೇಲೆ ಕೈಗೊಂಡ ಕ್ರಮವೇನು ? (ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಕ್ರೀಡಾಂಗಣ ನಿರ್ಮಾಣ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೭೪ (೨೯೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷದಲ್ಲಿ ಬೀದರ್ ಜಿಲ್ಲೆಯ ತಾಲ್ಲೂಕು ಮತ್ತು ಮಂಡಲ ಪಂಚಾಯಿತಿ ಮಟ್ಟದ ಕ್ರೀಡಾಂಗಣ ನಿರ್ಮಾಣಕ್ಕೆ ಸರ್ಕಾರ ಬಿಡುಗಡೆ ಮಾಡಿದ ಅನುದಾನವೆಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಆ) ಬಿಡುಗಡೆ ಮಾಡಿದ ಅನುದಾನದಲ್ಲಿ ಯಾವ ತಾಲ್ಲೂಕು ಮತ್ತು ಮಂಡಲ ಪಂಚಾಯಿತಿ ಮಟ್ಟದ ಕ್ರೀಡಾಂಗಣ ನಿರ್ಮಾಣಕ್ಕೆ ಅನುದಾನ ನೀಡಲಾಗಿದೆ ; (ಹೆಸರು ಸಹಿತ ಮಾಹಿತಿ ನೀಡುವುದು)

(ಇ) ಈ ಜಿಲ್ಲೆಯಲ್ಲಿ ಹೊಸದಾಗಿ ತಾಲ್ಲೂಕು ಮತ್ತು ಮಂಡಲ ಪಂಚಾಯಿತಿ ಮಟ್ಟದ ಕ್ರೀಡಾಂಗಣ ನಿರ್ಮಾಣಕ್ಕೆ ಪ್ರಸ್ತಾವನೆ ಏನಾದರೂ ಬಂದಿದೆಯೇ ? (ಬಂದಿದ್ದಲ್ಲಿ ವಿವರ ನೀಡುವುದು)

# ಬೀದರ್ ಜಿಲ್ಲೆಯ ಕೆರೆಗಳ ನಿರ್ಮಾಣ ಮತ್ತು ಆಧುನೀಕರಣ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೭೫ (೨೯೧) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೩ ವರ್ಷದಲ್ಲಿ ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಹೊಸ ಕೆರೆಗಳ ನಿರ್ಮಾಣ ಮತ್ತು ಕೆರೆಗಳ ಆಧುನೀಕರಣಕ್ಕೆ ಬಿಡುಗಡೆಯಾದ ಅನುದಾನವೆಷ್ಟು ; ಬಿಡುಗಡೆಯಾದ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳಿಗೆ ಅನುದಾನ ಬಿಡುಗಡೆ ಮಾಡಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಹೊಸ ಕೆರೆಗಳ ನಿರ್ಮಾಣಕ್ಕೆ ಮತ್ತು ಆಧುನೀಕರಣಕ್ಕೆ ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆಯೇ ? (ಬಂದಿದ್ದಲ್ಲಿ ಮಾಹಿತಿ ನೀಡುವುದು)

# ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೭೬ (೨೯೨) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಮತ್ತು ಕಲಬುರಗಿ ಜಿಲ್ಲೆಯ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ ಅಡಿಯಲ್ಲಿ ಕಳೆದ ೩ ವರ್ಷಗಳಲ್ಲಿ ಬಿಡುಗಡೆಯಾದ ಅನುದಾನವೆಷ್ಟು ; ಬಿಡುಗಡೆಯಾದ ಅನುದಾನದಲ್ಲಿ ಯಾವ ಯಾವ ಕಾಮಗಾರಿಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; (ಮಾಹಿತಿ ನೀಡುವುದು)

(ಆ) ಸದರಿ ಯೋಜನೆಗೆ ಕೇಂದ್ರದಿಂದ ೬೦% ಮತ್ತು ರಾಜ್ಯ ಸರ್ಕಾರದಿಂದ ೪೦% ಪಾಲು ಇದ್ದು ಹೊಸದಾಗಿ ಯಾವ ಯಾವ ಕಾಮಗಾರಿ ಕೈಗೊಳ್ಳಲಾಗಿದೆ ಮತ್ತು ಕೇಂದ್ರದಿಂದ ಮತ್ತು ರಾಜ್ಯ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು? (ವಿವರ ನೀಡುವುದು)

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. O224/500 ಪ್ರತಿಗಳು/01–03–2025